ಸಂಪುಟ: 04 ಸಂಚಿಕೆ: 43 ಪುಟಗಳು: 08 ಶನಿವಾರ 27 ಏಪ್ರಿಲ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಅವಕಾಶಗಳು ಸೂರ್ಯೋದಯವಿದ್ದಂತೆ. ಸ್ವೀಕರಿಸುವುದೋ ಬೇಡವೋ ಎಂದು ಯೋಚಿಸುತ್ತ ಕುಳಿತರೆ ಸೂರ್ಯಾಸ್ತ ಆಗಿಬಿಡುತ್ತದೆ.

## ಮತದಾನ ಮಾಡದವರನ್ನು ಮತಪಟ್ಟಿಯಿಂದ ತೆಗೆದುಹಾಕಿ

• ಉದಯವಾಹಿನಿ, ಬೆಂಗಳೂರು

ಮತಹಾಕದವರ ವಿರುದ್ಧ ಹಿರಿಯ ನಟ ಅನಂತ್ ನಾಗ್ ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಅನಂತ್‌ನಾಗ್ ಅವರು ಅಶ್ವಥ್ ನಗರದ ಪುಟ್ಟಯ್ಯ ಕಾಂಪೌಂಡ್ ಅಂಗನವಾಡಿ ಕೇಂದ್ರದಲ್ಲಿ ಮತ ಚಲಾಯಿಸಿದರು. ನಂತರ ಮಾತನಾಡಿದ ಅವರು ಮತದಾನ ಮಾಡದವರನ್ನ ಮತಪಟ್ಟಿಯಿಂದ ತೆಗೆದುಹಾಕಿ. ಕಳೆದ ಐದು ಚುನಾವಣೆಗಳಿಂದ ಇದರ ಬಗ್ಗೆಯೇ ಚರ್ಚೆ ಆಗುತ್ತಲೇ ಇದೆ. ಯಾರು ನಿರಂತರವಾಗಿ ಮತ ಹಾಕುವುದಿಲ್ಲವೋ ಅವರನ್ನ ಮತ ಪಟ್ಟಿಯಿಂದಲೇ ತೆಗೆದುಹಾಕಿ ಎಂದರು.

ಅಲ್ಲಿ ಯೋಧರು ದೇಶಕ್ಕಾಗಿ ಪ್ರಾಣ ಕೊಡುತ್ತಿದ್ದಾರೆ. ಇವರು ಮನೆಯಿಂದ ಹೊರಬಂದು ಒಂದು ಓಟ್ ಮಾಡೋಕಾಗಲ್ವ? ಸ್ವಾತಂತ್ರ್ಯ ಬಂದು 75 ವರ್ಷ ಆಯ್ತು. ಇನ್ನೂ ಎಂಥಹ ಜಾಗೃತಿ ಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಮತದಾನ ಮಾಡೋದು ಕರ್ತವ್ಯ ಅದನ್ನ ನಿರ್ವಹಿಸಿದ್ದೀನಿ

• ಉದಯವಾಹಿನಿ, ಮಂಡ್ಯ

ಮತದಾನ ಮಾಡೋದು ಕರ್ತವ್ಯ ಅದನ್ನ ನಿರ್ವಹಿಸಿದ್ದೀನಿ ಎಂಬುದಾಗಿ ಸಂಸದೆ ಸುಮಲತಾ ಅಂಬರೀಶ್ ಅವರು ಹೇಳಿದರು. ಮಂಡ್ಯ ಜಿಲ್ಲೆಯ ದೊಡ್ಡರಸಿನ ಕೆರೆ ಗ್ರಾಮದಲ್ಲಿ ಸಂಸದೆ ಸುಮಲತಾ ಅಂಬರೀಶ್ ಮಾತನಾಡಿ, ದೇವೇಗೌಡರ ಹೇಳಿಕೆಗೆ ನಾನು ಪ್ರತಿಕ್ರಿಯೆ ನೀಡಲ್ಲ. ಅವರು ದೊಡ್ಡವರು. ಅವರಿಗೆ ಸರಿಯಾದ ಮಾಹಿತಿ ಕೊಡದೆ ಆ ರೀತಿ ಹೇಳಿದ್ದಾರೆ. ಅವರಿಂದ ಅಂತಹ ಹೇಳಿಕೆ ನಿರೀಕ್ಷೆ ಮಾಡಿರಲಿಲ್ಲ. ಸ್ವತಂತ್ರ ಸಂಸದೆಯಾಗಿ ನನ್ನಜವಾಬ್ದಾರಿಯನ್ನ ನಿರ್ವಹಿಸಿದ್ದೀನಿ ಎಂದರು.

ಮೋದಿ ಅವರು ಪ್ರಧಾನಿಯಾಗಬೇಕು ಎಂಬ ಉದ್ದೇಶದಿಂದ ನಾನು ಗೆದ್ದಂತಹ ಸೀಟ್ ಅನ್ನ ತ್ಯಾಗ ಮಾಡಿದ್ದೀನಿ. ಈ ಹಂತದಲ್ಲಿ ಅಂಬರೀಶ್ ಅವರ ಪಡೆಯ ಶಕ್ತಿಯನ್ನ ಎನ್ ಡಿಎ ಗೆ ಕೊಟ್ಟಿದ್ದೇವೆ. ನಾವು ನಿಷ್ಠೆಯಿಂದ ಕೆಲಸ ಮಾಡಿದ್ದೀನಿ.

ಈ ದಿನದ ವರೆ ಗೂ ಜೆಡಿಎಸ್ ನ ಯಾವುದೇ ನಾಯಕರು ಯಾವುದೇ ಸಭೆಗೆ ಆಹ್ವಾನಿಸಿಲ್ಲ.ಅವರು ಕರೆದು ನಾನು ಬರದೆ ಇದ್ದರೆ ತಪ್ಪಾಗುತ್ತೆ. ಆದ್ರೆ ಅವರು ನನ್ನಕರೆದೇ ಇಲ್ಲ ಎಂದು ತಿಳಿಸಿದರು.

## ಬೆಂಗಳೂರಲ್ಲಿ ಶಾಂತಿಯುತ ಮತದಾನ: ಬಿ.ದಯಾನಂದ

• ಉದಯವಾಹಿನಿ, ಬೆಂಗಳೂರು

ನಗರ ವ್ಯಾಪ್ತಿಯಲ್ಲಿ ಮತದಾನ ಶಾಂತಿಯುತವಾಗಿ ನಡೆಯುತ್ತಿದೆ ಎಂದು ನಗರ ಪೊಲೀಸ್ ಆಯುಕ್ತರಾದ ಬಿ.ದಯಾನಂದ ಅವರು ತಿಳಿಸಿದ್ದಾರೆ. ಅಲ್ಲಲ್ಲಿ ಸಣ್ಣಪುಟ್ಟ ಘಟನೆ ಹೊರತುಪಡಿಸಿ ಬಹುತೇಕ ಮತದಾನ ಶಾಂತಿಯುತವಾಗಿ ನಡೆಯುತ್ತಿದೆ. ನಾಗರಿಕರು ಬಹಳ ತಾಳ್ಮೆಯಿಂದ ಸರತಿ ಸಾಲಿನಲ್ಲಿ ನಿಂತು ಮತ ಚಲಾಯಿಸುತ್ತಿದ್ದಾರೆ ಎಂದರು.ಕಮಿಷನರೇಟ್ ವ್ಯಾಪ್ತಿಯಲ್ಲಿರುವ ಎಲ್ಲಾ ಮತಗಟ್ಟೆಗಳಲ್ಲೂ ಮತದಾನ ಶಾಂತಿಯುತವಾಗಿ ನಡೆಯುತ್ತಿದೆ. ಎಲ್ಲಿಯೂ ಅಹಿತಕರ ಘಟನೆಗಳಾದ ಬಗ್ಗೆ ಮಾಹಿತಿ ಬಂದಿಲ್ಲ.

ಸ್ಥಳೀಯ ಪೊಲೀಸರೊಂದಿಗೆ ಸಿಎಆರ್, ಕೆಎಸ್‌ಆರ್‌ಪಿ ತುಕಡಿಗಳು, 11 ಕಂಪನಿ ಅರಸೇನಾಪಡೆಗಳನ್ನು ನಿಯೋಜಿಸಲಾಗಿದೆ. ಹಿರಿಯ ಅಧಿ ಕಾರಿಗಳು ಗಸ್ತಿನಲ್ಲಿದ್ದಾರೆ ಎಂದು ಬಿ.ದಯಾನಂದ ಅವರು ತಿಳಿಸಿದರು.

## ಕಾಂಗ್ರೇಸ್ ಕರಪತ್ರ ಹಂಚಿಕೆ ದೂರು ನೀಡಲು ಮುಂದಾದ ದೇವೇಗೌಡರು

• ಉದಯವಾಹಿನಿ, ಹಾಸನ

ಯುವಕರಿಗೆ ಹಾಗೂ ಮಹಿಳೆಯರಿಗೆ ತಲಾ ಒಂದು ಲಕ್ಷರೂ. ನೀಡುವುದಾಗಿ ಕಾಂಗ್ರೇಸ್ ಕರಪತ್ರ ಪ್ರಕಟಿಸಿರುವ ಬಗ್ಗೆ ಚುನಾವಣಾ ಆಯೋಗಕ್ಕೆ ದೂರು ಸಲ್ಲಿಸುವುದಾಗಿ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ತಿಳಿಸಿದರು. ಪಡುವಲಹಿಪ್ಪೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯುವಕರು ಹಾಗೂ ಮಹಿಳೆ ಯರಿಗೆ ತಲಾ ಒಂದು ಲಕ್ಷ ಕೊಡುವುದಾಗಿ ಪಾಂಪ್ಲೆಟ್



ಪ್ರಕಟಿಸಲು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೇಸ್ ನಾಯಕ ರಾಹುಲ್ ಗಾಂಧಿ ಅವರ ಸ್ಟೇಟಸ್ ಏನು ಎಂದು ಪ್ರಶ್ನಿಸಿದರು.

ಇವರೇನು ರಾಜ್ಯದ ಮುಖ್ಯಮಂತ್ರಿಯೋ ಅಥವಾ ಉಪ ಮುಖ್ಯಮಂತ್ರಿ ಆಗಿದ್ದಾರೆಯೇ? ಒಂದು ವೇಳೆ ಈ ಸ್ಥಾನಗಳಲ್ಲಿ ಅವರಿದ್ದರ ಆ ರೀತಿಯ ಪ್ರಚಾರವನ್ನು ಒಪ್ಪಬಹುದಿತ್ತು ಎಂದರು. ಮತದಾನದ ವಿಡಿಯೋ ರೆಕಾರ್ಡ್ ಮಾಡಿ ಕೆಲವು ಮತದಾರರಿಂದ ನಿಯಮ ಉಲ್ಲಂಘನೆ ನೆರೆಯ ಕೇರಳ, ತಮಿಳುನಾಡಿನಲ್ಲಿ ಇಲ್ಲದ ಈ ರೀತಿಯ ಭರವಸೆಯ ಪ್ರಕಟಣೆ ಕರ್ನಾಟಕದಲ್ಲಿ ಮಾತ್ರ ಏಕೆ ಎಂದು ಪ್ರಶ್ನಿಸಿದ ಅವರು, ಈ ಸಂಬಂಧ ಆಯೋಗಕ್ಕೆ ದೂರು ಸಲ್ಲಿಸುವುದಾಗಿ ಹೇಳಿದರು.








**ದೇಶದ ಭವಿಷ್ಯದ ಮುನ್ನುಡಿ ಬರೆಯುವ ಲೋಕಸಭೆ ಚುನಾವಣೆಯ ರಾಜ್ಯದ ಮೊದಲ ಹಂತದ 14 ಕ್ಷೇತ್ರಗಳಿಗೆ ನಡೆದ ಮತದಾನ ಬಹುತೇಕ ಶಾಂತಿಯುತವಾಗಿತ್ತು. ಮತದಾನ ಬೆಳಗ್ಗೆಯಿಂದಲೇ ಬಿರುಸಿನಿಂದ ಕೂಡಿದ್ದು ಕರ್ನಾಟಕದಲ್ಲಿ ಶೇ.69.23%ರಷ್ಟು ಮತದಾನವಾಗಿದೆ. ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದಲ್ಲಿ ಹೆಚ್ಚು ಪ್ರಮಾಣದ ಮತದಾನವಾಗಿದ್ದರೆ, ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದಲ್ಲಿ ಕಡಿಮೆ ಪ್ರಮಾಣದ ಮತದಾನವಾಗಿದೆ. ಎಂದಿನಂತೆ ರಾಜಧಾನಿ ಬೆಂಗಳೂರಿನ ಮತದಾರರಲ್ಲಿ ನಿರುತ್ಸಾಹ ಕಂಡುಬಂದಿದ್ದು , ಮತದಾನದ ಪ್ರಮಾಣ ನಿರೀಕ್ಷೆಯಂತೆ ಏರಿಕೆ ಆಗಿಲ್ಲ. ಗ್ರಾಮೀಣ, ನಗರ ಪ್ರದೇಶದಲ್ಲೂ ಜನರು ಉತ್ಸಾಹದಿಂದ ಮತ ಚಲಾಯಿಸುತ್ತಿದ್ದುದು ಕಂಡುಬಂತು. ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದಲ್ಲಿ ಹೆಚ್ಚು ಪ್ರಮಾಣದ ಮತದಾನವಾಗಿದ್ದರೆ, ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದಲ್ಲಿ ಕಡಿಮೆ ಪ್ರಮಾಣದ ಮತದಾನವಾಗಿದೆ. ಎಂದಿನಂತೆ ರಾಜಧಾನಿ ಬೆಂಗಳೂರಿನ ಮತದಾರರಲ್ಲಿ ನಿರುತ್ಸಾಹ ಕಂಡುಬಂದಿದ್ದು , ಮತದಾನದ ಪ್ರಮಾಣ ನಿರೀಕ್ಷೆಯಂತೆ ಏರಿಕೆ ಆಗಿಲ್ಲ.**

# ಜನಮತ ಯಾರಿಗೆ ಗೆಲುವಿನ ಹಿತ

## ಅಭ್ಯರ್ಥಿಗಳ ರಾಜಕೀಯ ಭವಿಷ್ಯ ಮತಪೆಟ್ಟಿಗೆಯಲ್ಲಿ ಭದ್ರ

## ಕರ್ನಾಟಕದಲ್ಲಿ 69.23% ಮತದಾನ

## ಪ್ರತಿ ಚುನಾವಣೆಯಂತೆ ಈ ಸಲವೂ ಬೆಂಗಳೂರಿನಲ್ಲಿ ನೀರಸ ಮತದಾನ




• ಉದಯವಾಹಿನಿ, ಬೆಂಗಳೂರು

**ಜನಮತ ಅಭ್ಯರ್ಥಿಗಳಿಗೆ ನಾಡಿಮಿಡಿತ**

ಬೆಳಿಗ್ಗೆಯಿಂದಲೇ ಸರತಿ ಸಾಲಿನಲ್ಲಿ ನಿಂತು ಮತದಾರರು ಉತ್ಸಾಹದಿಂದಲೇ ಮತ ಚಲಾಯಿಸುತ್ತಿದ್ದುದು ಕಂಡುಬಂತು. ಮಧ್ಯಾಹ್ನ ಬಿರು ಬಿಸಿಲು ಹೆಚ್ಚಾಗುತ್ತದೆ ಎಂಬ ಹಿನ್ನೆಲೆಯಲ್ಲಿ ಮಹಿಳೆಯರು, ಹಿರಿಯ ನಾಗರಿಕರು ಬೆಳಿಗ್ಗೆಯೇ ಮತ ಗಟ್ಟೆಗೆ ಆಗಮಿಸಿ ಮತಚಲಾಯಿಸಿದರು. ಮತಗಟ್ಟೆಗಳಿಗೆ ಹೆಚ್ಚಾಗಿ ಮಹಿಳೆಯರು ಆಗಮಿಸಿ ಮತದಾನ ಮಾಡುತ್ತಿರುವ ದೃಶ್ಯಗಳು ಕಂಡುಬಂದವು. ಯುವ ಮತದಾರರು, ನವಮತದಾರರಲ್ಲಿ ಉತ್ಸಾಹ ಹೆಚ್ಚಾಗಿರುವುದು ಹಲವೆಡೆ ಕಂಡುಬಂತು. ರಾಜಕಾರಣಿಗಳು, ಚಲನಚಿತ್ರ ನಟ, ನಟಿಯರು, ಖ್ಯಾತ ಕ್ರಿಕೆಟ್ ಪಟುಗಳು, ಕಿರುತೆರೆ ಕಲಾವಿದರು ಸೇರಿದಂತೆ ವಿವಿಧ ಗಣ್ಯರು ಮತಗಟ್ಟೆಗೆ ಆಗಮಿಸಿ ಸರತಿ ಸಾಲಿನಲ್ಲಿ ನಿಂತು ಮತಚಲಾಯಿಸಿ ಗಮನ ಸೆಳೆದರು.

**ದಕ್ಷಿಣ ಕನ್ನಡ 100% ಮತದಾನ :**
ಲೋಕಸಭಾ ಚುನಾವಣೆಯ ಮೊದಲ ಹಂತದ ಮತದಾನ ಸಂಜೆ 6 ಗಂಟೆಗೆ ಮುಕ್ತಾಯವಾಗಿದೆ. ರಾಜ್ಯದ 14 ಕ್ಷೇತ್ರಗಳಲ್ಲಿ ಬಹುತೇಕವಾಗಿ ಶಾಂತಿಯುತ ಮತದಾನ ನಡೆದಿದೆ. ಈ ನಡುವೆ ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನ ಗ್ರಾಮವೊಂದು ಎಲ್ಲರ ಗಮನಸೆಳೆದಿದೆ. ಹೌದು. ದಕ್ಷಿಣ ಕನ್ನಡದ ಬೆಳ್ತಂಗಡಿ ತಾಲ್ಲೂಕಿನ ಬಾಂಜಾರು ಮಲೆ ಗ್ರಾಮದ ಮತದಾರರು ಹಕ್ಕು ಚಲಾಯಿಸಲು ಹಿಂದೇಟು ಹಾಕಿದವರಿಗೆ ಸೆಡ್ಡು ಹೊಡೆದಿದ್ದಾರೆ. ಈ ಗ್ರಾಮದಲ್ಲಿ ನೂರಕ್ಕೆ ನೂರು ಮತದಾನವಾಗಿದೆ. ಗ್ರಾಮ ದಲ್ಲಿರುವ 111 ಮತದಾರರು ಕೂಡ ಮತದಾನ ಮಾಡುವ ಮೂಲಕ ದಾಖಲೆ ಬರೆದಿದ್ದಾರೆ. ಒಟ್ಟಾರೆಯಾಗಿ ಕುಗ್ರಾಮವಾದರೂ ತಮ್ಮ ಹಕ್ಕು ಚಲಾಯಿಸುವಲ್ಲಿ ಮಾತ್ರ ಗ್ರಾಮಸ್ಥರು ಎಲ್ಲರಿಗೂ ಮಾದರಿಯಾಗಿದ್ದಾರೆ. ದಕ್ಷಿಣ ಕನ್ನಡದಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ಬ್ರಿಜೇಶ್ ಚೌಟಾ, ಕಾಂಗ್ರೇಸ್‌ನಿಂದ ಪದ್ಮರಾಜ್ ರಾಮಯ್ಯ ಚುನಾ ವಣಾ ಅಖಾಡದಲ್ಲಿದ್ದಾರೆ.

**ಭವಿಷ್ಯ ನಿರ್ಧಾರ:**
14 ಲೋಕಸಭಾ ಕ್ಷೇತ್ರಗಳಲ್ಲಿ ನಡೆದಿರುವ ಮೊದಲ ಹಂತದ ಚುನಾವಣೆಯಲ್ಲಿ ಒಟ್ಟಾರೆ 247 ಅಭ್ಯರ್ಥಿಗಳು ಕಣದಲ್ಲಿದ್ದು, ಇವ ರೆಲ್ಲರ ಭವಿಷ್ಯ ವಿದ್ಯುನ್ಮಾನ ಮತ ಯಂತ್ರ ದಲ್ಲಿ ಭದ್ರವಾಗಿದೆ.ಮೊದಲ ಹಂತದ ಚುನಾವಣೆಯಲ್ಲಿ ಮಾಜಿ ಮುಖ್ಯಮಂತ್ರಿ ಹೆಚ್.ಡಿ ಕುಮಾರಸ್ವಾಮಿ, ಮೈಸೂರು ರಾಜವಂಶಸ್ಥ ಯಧುವೀರ ದತ್ತ ಒಡೆಯರ್, ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸಹೋದರ, ಹಾಲಿ ಸಂಸದ ಡಿ.ಕೆ ಸುರೇಶ್,ಮಾಜಿ ಸಚಿವರಾದ ವಿ. ಸೋಮಣ್ಣ, ಗೋವಿಂದಕಾರಜೋಳ, ಡಾ. ಕೆ. ಸುಧಾಕರ್ ಸೇರಿದಂತೆ ಹಲವು ಘಟಾನುಘಟಿ ನಾಯಕರುಗಳ ರಾಜಕೀಯ ಭವಿಷ್ಯವನ್ನು ಮತದಾರ ವಿದ್ಯುನ್ಮಾನ ಮತಯಂತ್ರದ ಬಟನ್ ಒತ್ತುವ ಮೂಲಕ ನಿರ್ಧರಿಸಿದ್ದು, ಮತದಾರರ ತೀರ್ಮಾನ ಏನು ಎಂಬುದು ಜೂನ್ 4 ರಂದು ನಡೆಯುವ ಮತ ಎಣಿಕೆಯಲ್ಲಿ ಬಹಿರಂಗವಾಗಲಿದೆ. ಮೊದಲ ಹಂತದ 14 ಕ್ಷೇತ್ರಗಳ ಚುನಾವಣೆಯಲ್ಲಿ ಕಾಂಗ್ರೇಸ್ ಎಲ್ಲಾ 14 ಕ್ಷೇತ್ರಗಳಲ್ಲೂ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದು, ಈ ಚು ನಾವಣೆಯಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿಯಾಗಿದ್ದು, ಬಿಜೆಪಿ 11 ಕ್ಷೇತ್ರಗಳಿಂದ, ಜೆಡಿಎಸ್ 3 ಕ್ಷೇತ್ರಗಳಲ್ಲಿ ಕಣ ದಲ್ಲಿದ್ದು, ಎಲ್ಲೆಡೆ ಕಾಂಗ್ರೇಸ್ ಮತ್ತು ಬಿಜೆಪಿ-ಜೆಡಿಎಸ್ ಮೈತ್ರಿಕೂಟದ ನಡುವೆ ನೇರ ಸ್ಪರ್ಧೆ ಏರ್ಪಟ್ಟಿದೆ. ಶುಕ್ರವಾರ ಬಿರುಸಿನ ಮತದಾನ ನೀಡಿ ಮುಕ್ತಾಯ ಮಾಡಿದ್ದು ಅಭ್ಯರ್ಥಿಗಳಲ್ಲಿ ನಾಡಿಮಿಡಿತ ಶುರುವಾಗಿದೆ.

- ಹಲವೆಡೆ ಮತದಾರರ ಪಟ್ಟಿಯಲ್ಲಿ ಹೆಸರು ನಾಪತ್ತೆ.
- ಆರಂಭದಲ್ಲಿ ಕೈಕೊಟ್ಟ ಮತಯಂತ್ರ.
- ರಾಜಕೀಯ ಪಕ್ಷಗಳ ಕಾರ್ಯಕರ್ತರ ನಡುವೆ ಮಾತಿನ ಚಕಮಕಿ,
- ಆರೋಪ-ಪ್ರತ್ಯಾರೋಪದಂತಹ ಸಣ್ಣ-ಪುಟ್ಟ ಘಟನೆ
- ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆದಿಲ್ಲ

### ಶೇಕಡವಾರು ಮತದಾನ

| | |
|---|---|
| ಬೆಂಗಳೂರು ಗ್ರಾಮಾಂತರ | 67.29% |
| ಬೆಂಗಳೂರು ಉತ್ತರ | 54.42% |
| ಬೆಂಗಳೂರು ಕೇಂದ್ರ | 52.81% |
| ಬೆಂಗಳೂರು ದಕ್ಷಿಣ | 53.15% |
| ಉಡುಪಿ-ಚಿಕ್ಕಮಗಳೂರು | 76.06% |
| ದಕ್ಷಿಣ ಕನ್ನಡ | 77.43% |
| ಹಾಸನ | 77.51% |
| ಚಿತ್ರದುರ್ಗ | 73.11% |
| ತುಮಕೂರು | 77.70% |
| ಮಂಡ್ಯ | 81.48% |
| ಮೈಸೂರು | 70.45% |
| ಚಾಮರಾಜನಗರ | 76.59% |
| ಚಿತ್ರದುರ್ಗ | 73.11% |
| ಕೋಲಾರ | 78.07% |

### ಬಿಗಿ ಬಂದೋಬಸ್ತ್

ಇಂದಿನ ಮತದಾನ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದ್ದು, 50 ಸಾವಿರಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ಬಂದೋಬಸ್ತ್‌ಗೆ ನಿಯೋಜಿಸಲಾಗಿದ್ದು, ಮತದಾನಕ್ಕಾಗಿ 14 ಕ್ಷೇತ್ರಗಳಲ್ಲಿ ಒಟ್ಟಾರೆ 30,402 ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಮಹಿಳೆಯರಿಗಾಗಿ ಪಿಂಕ್‌ಬೂತ್, ವಿಶೇಷ ಚೇತನರಿಗೂ ವಿಶೇಷ ಮತಗಟ್ಟೆಗಳನ್ನು ಕೆಲವೆಡೆ ಸ್ಥಾಪಿಸಲಾಗಿದೆ. ಸುಮಾರು 19,700 ಮತಗಟ್ಟೆಗಳಲ್ಲಿ ವೆಬ್‌ಕಾಸ್ಟಿಂಗ್ ಮಾಡಲಾಗಿದ್ದು, ಸೂಕ್ಷ್ಮ, ಅತಿ ಸೂಕ್ಷ್ಮ ಕೇಂದ್ರಗಳಲ್ಲಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ.

### ಸ್ವಾಮೀಜಿಗಳ ಮತದಾನ

ಸುತ್ತೂರು ಶ್ರೀಗಳಾದ ದೇಶೀಕೇಂದ್ರ ಸ್ವಾಮೀಜಿಗಳು, ಸಿದ್ದಗಂಗಾಮಠಾಧೀಶರಾದ ಸಿದ್ದಲಿಂಗಸ್ವಾಮೀಜಿಗಳು, ಆದಿಚುಂಚನಗಿರಿ ಮಠಾಧೀಶರಾದ ನಿರ್ಮಲಾನಂದನಾಥ ಸ್ವಾಮೀಜಿ, ರಂಭಾಪುರಿ ಶ್ರೀಗಳು ಸೇರಿದಂತೆ ಹಲವು ಮಠಾಧೀಶರು ಮತ ಹಾಕಿದರು.

### ಚುನಾವಣೆ ಬಹಿಷ್ಕಾರ

ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನ ತೋರನಹಳ್ಳಿ ಗ್ರಾಮಸ್ಥರು ಕೆ.ಸಿ ವ್ಯಾಲಿ ನೀರು ಗ್ರಾಮದ ಕೆರೆಗೆ ಹರಿಸಬೇಕು ಎಂದು ಆಗ್ರಹಿಸಿ ಮತದಾನ ಬಹಿಷ್ಕಾರ ಮಾಡಿದ್ದು, ಸ್ಥಳೀಯ ಶಾಸಕರು ಹಾಗೂ ತಹಶೀಲ್ದಾರ್ ಗ್ರಾಮಸ್ಥರ ಮನವೊಲಿಸುವ ಪ್ರಯತ್ನ ನಡೆಸಿದ್ದಾರೆ.

### ಮೊದಲನೇ ಹಂತದ ಚುನಾವಣೆ ಗಣ್ಯರ ಮತದಾನ

ಮೊದಲನೇ ಹಂತದ ಚುನಾವಣೆಯ ಮತದಾನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ.ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡ, ಕೇಂದ್ರದ ಸಚಿವರುಗಳಾದ ನಿರ್ಮಲಾಸೀತಾರಾಮನ್, ಶೋಭಾಕರಂದ್ಲಾಜೆ, ಸೇರಿದಂತೆ ಹಲವು ಗಣ್ಯರು ತಮ್ಮ ಮತ ಚಲಾಯಿಸಿದರು.ಹಾಗೆಯೇ ಐಟಿ ಉದ್ಯಮಿ ನಾರಾಯಣಮೂರ್ತಿ, ಅವರ ಪತ್ನಿ ರಾಜ್ಯಸಭಾ ಸದಸ್ಯೆ ಸುಧಾಮೂರ್ತಿ, ವಿಪಕ್ಷ ನಾಯಕ ಆರ್. ಅಶೋಕ್, ಮಾಜಿ ಸಚಿವ ವಿ. ಸೋಮಣ್ಣ, ಸಚಿವರಾದ ರಾಮಲಿಂಗಾರೆಡ್ಡಿ, ಕೆ.ಜೆ ಜಾರ್ಜ್, ಜಮೀರ್‌ಅಹ್ಮದ್‌ಖಾನ್, ರಾಜ್ಯದ ಮುಖ್ಯ ಚುನಾವಣಾಧಿಕಾರಿ ಮನೋಜ್‌ಕುಮಾರ್ ಮೀನಾ ಇವರುಗಳು ತಮ್ಮ ಕುಟುಂಬಸ್ಥರ ಜತೆ ಮತ ಚಲಾಯಿಸಿದರು.ಈ ಚುನಾವಣೆಯಲ್ಲಿ ಅಭ್ಯರ್ಥಿಗಳಾಗಿರುವ ಪಿ.ಸಿ ಮೋಹನ್, ತೇಜಸ್ವಿ ಸೂರ್ಯ, ಸೌಮ್ಯರೆಡ್ಡಿ, ಅಮಾನ್‌ಉಲ್ಲಾಖಾನ್, ಮುದ್ದಹನುಮೇಗೌಡ, ಮಲ್ಲೇಶ್‌ಬಾಬು, ವೆಂಕರಮಣೇಗೌಡ (ಸ್ಟಾರ್ ಚಂದ್ರು), ಎಂ.ಲಕ್ಷ್ಮಣ್, ಪ್ರಜ್ವಲ್‌ರೇವಣ್ಣ, ಶ್ರೇಯಸ್ ಪಟೇಲ್, ಬಿ.ಎನ್ ಚಂದ್ರಪ್ಪ, ಕ್ಯಾಪ್ಟನ್ ಬ್ರಿಜೇಶ್‌ಚೌಟ, ಪದ್ಮರಾಜ್, ಕೋಟಾಶ್ರೀನಿವಾಸ ಪೂಜಾರಿ, ಜಯಪ್ರಕಾಶ್ ಹೆಗಡೆ,ಸುನಿಲ್‌ಬೋಸ್,ಬಾಲರಾಜು, ಡಾ. ಸಿ.ಎನ್ ಮಂಜುನಾಥ್, ಪ್ರೊ, ರಾಜೀವ್‌ಗೌಡ,ರಕ್ಷಾರಾಮಯ್ಯ, ಕೆ.ವಿ ಗೌತಮ್ ಇವರುಗಳು ತಮ್ಮ ಮತ ಚಲಾಯಿಸಿದರು. ಪೊಲೀಸ್ ಆಯುಕ್ತ ದಯಾನಂದ್, ಮಾಜಿ ಸಚಿವ ಕೆ. ಗೋಪಾಲಯ್ಯ, ಡಾ. ಸಿ.ಎನ್ ಅಶ್ವತ್ಥನಾರಾಯಣ ಇವರುಗಳು ತಮ್ಮ ಕುಟುಂಬಸ್ಥರೊಂದಿಗೆ ಬಂದು ಮತ ಹಾಕಿದರು. ಕೇಂದ್ರದ ಮಾಜಿ ಸಚಿವ ರೆಹಮಾನ್ ಖಾನ್ ತಮ್ಮ ಕುಟುಂಬಸ್ಥರೊಂದಿಗೆ ಬಂದು ಮತ ಹಾಕಿದರು.








# ಮೋದಿ ಹತ್ತು ವರ್ಷ ಪ್ರಧಾನಿಯಾಗಿ ಅಲ್ಪಸಂಖ್ಯಾತ ಪರವಾಗಿ ಕೆಲಸ ಮಾಡಿಲ್ಲ

## ಬೆಲೆಯೇರಿಕೆ, ನಿರುದ್ಯೋಗ, ರೈತರ ಸಂಸ್ಥೆಗಳ ಬಗ್ಗೆ ಪ್ರಧಾನಿಗಳು ಚರ್ಚೆ ಮಾಡುವುದಿಲ್ಲ: ಸಿಎಂ ಸಿದ್ದರಾಮಯ್ಯ

• ಉದಯವಾಹಿನಿ, ವಿಜಯಪುರ

ಬೆಲೆಯೇರಿಕೆ, ನಿರುದ್ಯೋಗ, ರೈತರ ಸಂಸ್ಥೆಗಳ ಬಗ್ಗೆ ಪ್ರಧಾನಿಗಳು ಚರ್ಚೆ ಮಾಡುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಶುಕ್ರವಾರ ಕರ್ನಾಟಕ ಪ್ರದೇಶ ಕಾಂಗ್ರೇಸ್ ಸಮಿತಿ ವತಿಯಿಂದ ವಿಜಯಪುರ ನಗರದಲ್ಲಿ ಆಯೋಜಿಸಲಾಗಿದ್ದ ಪ್ರಜಾಧ್ವನಿ-02 ಲೋಕಸಭಾ ಚುನಾವಣಾ ಪ್ರಚಾರ ಸಭೆಯಲ್ಲಿ ಭಾಗವಹಿಸಿ ತಮ್ಮ ಪಕ್ಷದ ಅಭ್ಯರ್ಥಿಯಾದ ರಾಜು ಹಲಗೂರು ರವರ ಪರವಾಗಿ ಮಾತಾಯಾಚನೆ ಮಾಡಿ ನಂತರ ಮತದಾರರನ್ನು ಉದ್ದೇಶಿಸಿ ಮಾತನಾಡಿದರು.

ನರೇಂದ್ರ ಮೋದಿಯವರು ಹತ್ತು ವರ್ಷ ಪ್ರ ಧಾನಿಯಾಗಿ ಬಡವರು, ಯುವಕರು, ದಲಿತರು ಅಲ್ಪಸಂಖ್ಯಾತ ಪರವಾಗಿ ಕೆಲಸ ಮಾಡಿಲ್ಲ. ಬೆಲೆಯೇರಿಕೆ, ನಿರುದ್ಯೋಗ, ರೈತರ ಸಂಸ್ಥೆಗಳ ಬಗ್ಗೆ ಪ್ರಧಾನಿಗಳು ಚರ್ಚೆ ಮಾಡುವುದಿಲ್ಲ. ಅವರು ಸಾಧನೆಗಳನ್ನು ಹೇಳದೆ ಭಾವನೆಗಳನ್ನು ಕೆರಳಿಸಿ, ಧರ್ಮ ಧರ್ಮಗಳ ನಡುವೆ, ಜಾತಿಗಳ ನಡುವೆ ಬೆಂಕಿ ಇಡುವ ಕೆಲಸಗಳನ್ನು ಮಾಡಿದ್ದಾರೆ. ಇತ್ತೀಚಿನ ಅವರ ಭಾಷಣಗಳನ್ನು ಗಮನಿಸಿದರೆ ಮೊದಲಹಂತದ ಚುನಾವಣೆಯಲ್ಲಿ ಅವರು ನಿರೀಕ್ಷಿಸಿದ ಮತಗಳು ಬರುವುದಿಲ್ಲ ಎಂದು ಅವರು ಹತಾಶರಾಗಿದ್ದಾರೆ. ಸಂಬಂಧಪಡದ ಅನೇಕ ವಿಚಾರಗಳನ್ನು ಪ್ರಸ್ತಾಪಿಸುತ್ತಿದ್ದಾರೆ ಎಂದರು ಸಂವಿಧಾನದ 15 ಮತ್ತು 16 ನೇ ಕಲಂ ನಲ್ಲಿ ಸ್ಪಷ್ಟವಾಗಿ ಸಾಮಾಜಿಕವಾಗಿ ಶೈಕ್ಷಣಿಕವಾಗಿ ಹಿಂದುಳಿದವರಿಗೆ ಮೀಸಲಾತಿ ನೀಡಬೇಕೆಂದು ಹೇಳಲಾಗಿದೆ. ಅದರಲ್ಲಿ ಹಿಂದೂಗಳು ಹಾಗೂ ಮುಸಲ್ಮಾನರು, ಕ್ರಿಶ್ಚಿಯನ್ ಹಾಗೂ ಎಲ್ಲಾ ಜನರೂ ಬರುತ್ತಾರೆ.


KNN

ಮುಸಲ್ಮಾನರಿಗೆ ಮೀಸಲಾತಿ ಕೊಡಲಾಗುವುದಿಲ್ಲ ಎಂದು ಹೇಳಲು ಸಾಧ್ಯವಿಲ್ಲ. ಅವರು ಸಂವಿಧಾನದ ವಿರುದ್ಧವಾಗಿ ಮಾ ತನಾಡುತ್ತಿದ್ದಾರೆ. ಹಿಂದೂಗಳ ಮೀಸಲಾತಿಯನ್ನು ಕಿತ್ತು ಮುಸಲ್ಮಾನರಿಗೆ ಕೊಡುತ್ತಿದ್ದಾರೆ ಎಂದು ಹೇಳುತ್ತಿದ್ದಾರೆ. ಒಬ್ಬ ಪ್ರಧಾನಮಂತ್ರಿಯಾಗಿ ಈ ರೀತಿ ಮಾತುಗಳನ್ನಾಡುವುದು ಅವರ ಸ್ಥಾನಕ್ಕೆ ಚ್ಯುತಿ ತರುವ ಕೆಲಸ ಎಂದರು. 1977ನಲ್ಲಿಯೇ ಹಾವನೂರು ಆಯೋಗ ಅಲ್ಪಸಂಖ್ಯಾತರಿಗೆ ಮೀಸಲಾತಿ ಕೊಡಬೇಕೆಂದು ಶಿಫಾರಸ್ಸು ಮಾಡಿದೆ. ಚಿನ್ನಪ್ಪ ರೆಡ್ಡಿ ಆಯೋಗವೂ ಇದನ್ನೇ ಶಿಫಾರಸು ಮಾಡಿದೆ. 2004 ನಲ್ಲಿ ಕರ್ನಾಟಕದಲ್ಲಿ ಮುಸಲ್ಮಾನರಿಗೆ ಮೀಸಲಾತಿಯನ್ನು 2 ಬಿ ಅಡಿಯಲ್ಲಿ ಪ್ರಾರಂಭಿ ಸಲಾಯಿತು. 4% ಮೀಸಲಾತಿಯನ್ನು ಕೊಡಲು ಪ್ರಾರಂಭಿಸಲಾಯಿತು. 94ರಿಂದ ಈವರೆಗೆ ಮೀಸಲಾತಿ ಹಾಗೆ ಉಳಿದುಕೊಂಡು ಬಂದಿದೆ.

ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿಯಾಗಿದ್ದಾಗ ಮುಸಲ್ಮಾನರ 4% ಮೀಸಲಾತಿಯನ್ನು ತೆಗೆದುಹಾಕಿದರು. ಅದರ ವಿರುದ್ಧ ಮುಸಲ್ಮಾನ ಮುಖಂಡರು ಸುಪ್ರೀಂಕೋರ್ಟ್‌ನಲ್ಲಿ ಅರ್ಜಿ ಹಾಕಿ, ಬಿಜೆಪಿಯವರು ಅಫೊ ಡವಿಟ್ ಹಾಕಿ ಯಥಾಸ್ಥಿತಿ ಮುಂದುವರೆಸುತ್ತೇವೆ ಎಂದು ಮುಚ್ಚಳಿಕೆ ಬರೆದುಕೊಟ್ಟಿದ್ದಾರೆ.

> ನರೇಂದ್ರ ಮೋದಿಯವರು ಸುಳ್ಳು ಹೇಳುವುದರಲ್ಲಿ ಪ್ರವೀಣರು. ಸ್ವತಂತ್ರ ಭಾರತದಲ್ಲಿ ಆಗಿ ಹೋದ ಪ್ರಧಾನಮಂತ್ರಿಗಳ ಪೈಕಿ ಅತಿ ಹೆಚ್ಚು ಸುಳ್ಳು ಹೇಳುವುದು ನರೇಂದ್ರ ಮೋದಿಯವರು ಎಂದರು. ಸೋಲುವ ಹತಾಶೆಯಿಂದ ಹೇಳಿರುವುದೇ ಹೊರತು ಯಾವುದೇ ಸಂವಿಧಾನಾತ್ಮಕ ಅಂಶಗಳಿಲ್ಲ. ಕಳೆದ ಲೋಕಸಭಾ ಚುನಾವಣೆಯಲ್ಲಿ ಕರ್ನಾಟಕದ ಜನ ಬಿಜೆಪಿಜಿ ಮತ ಹಾಕಿ 25 ಜನರನ್ನು ಆಯ್ಕೆ ಮಾಡಿದರು. ಆಯ್ಕೆ ಆಗಿರುವ ಯಾವೊಬ್ಬ ಸಂಸದರೂ ಕರ್ನಾಟಕಕ್ಕೆ ಅನ್ಯಾಯದ ಬಗ್ಗೆ ಬಾಯಿ ಬಿಡಲಿಲ್ಲ . ರಾಜ್ಯದ ಹಿತ ಕಾಪಾಡ ದವರು ಲೋಕಸಭೆಗೆ ಹೋದರೆ ಪ್ರಯೋಜನವಿಲ್ಲ
> -ಸಿದ್ದರಾಮಯ್ಯ, ಮುಖ್ಯಮಂತ್ರಿ

### ಧೃವೀಕರಣ ಮಾಡುವ ಪ್ರಯತ್ನ

ನರೇಂದ್ರ ಮೋದಿಯವರು ಮೀಸಲಾತಿ ನೀಡುತ್ತಿರುವುದು ಸಂವಿಧಾನ ಬಾಹಿರ ಎಂಬಂತೆ ಮಾತನಾಡುತ್ತಿರುವುದು ಆಶ್ಚರ್ಯವನ್ನುಂಟು ಮಾಡುತ್ತಿದೆ. ಧೃವೀಕರಣ ಮಾಡುವ ಪ್ರಯತ್ನ ಇದು. ಸುಪ್ರೀಂ ಕೋರ್ಟ್ ಆದೇಶದ ನಂತರ ಹಿಂದೆ ಅವರೇ ಮುಂದುವರೆಸಿ ಈಗ ಹೊಸದಾಗಿ ಕೊಡಲಾಗುತ್ತಿದೆ ಎಂದು ಹೇಳುತ್ತಿರುವುದು ಅತ್ಯಂತ ದೊಡ್ಡ ಸುಳ್ಳು.

ಅಂತರಾಳದಿಂದ.. EDITORIAL

# ಈ ದಿನ ನಮ್ಮದು, ನಮ್ಮ ಅಧಿಕಾರ ಚಲಾಯಿಸೋಣ

ದೇಶದಲ್ಲಿ ಲೋಕಸಭೆ ಚುನಾವಣೆಯ ಎರಡನೇ ಹಂತದ, ರಾಜ್ಯದಲ್ಲಿ ಮೊದಲ ಹಂತದ ಮತದಾನ (ಏಪ್ರಿಲ್ 26) ನಡೆಯುತ್ತಿದೆ. ಮತದಾನವನ್ನು ಶಾಂತಿಯುತವಾಗಿ ಯಾವುದೇ ಲೋಪ ದೋಷಗಳಿಲ್ಲದೆ ನಡೆಸಲು ಚುನಾವಣಾ ಆಯೋಗ ಸಕಲ ಸಿದ್ಧತೆಗಳನ್ನು ಮಾಡಿಕೊಂಡಿದೆ. ಮುಕ್ತ, ಪಾರದರ್ಶಕ ಹಾಗೂ ನ್ಯಾಯಸಮ್ಮತ ಚುನಾವಣೆ ನಡೆಯುವುದರ ಜತೆಗೆ, ಮತದಾನ ಪ್ರಮಾಣವನ್ನೂ ಹೆಚ್ಚಿಸಲು ಅಗತ್ಯವಾದ ಕ್ರಮಗಳನ್ನು ಕೈಗೊಳ್ಳುತ್ತಿರುವುದಾಗಿ ಆಯೋಗ ಘೋಷಿಸಿದೆ. ಭಾರತದಲ್ಲಿ ಚುನಾವಣೆ ನಡೆಯುತ್ತದೆ ಎಂದರೆ ಜಗತ್ತೇ ಅದನ್ನು ಕುತೂಹಲದಿಂದ ವೀಕ್ಷಿಸುತ್ತದೆ. ಯಾಕೆಂದರೆ, ಜಗತ್ತಿನ ಅತಿ ದೊಡ್ಡ ಪ್ರಜಾಪ್ರಭುತ್ವ ದೇಶದಲ್ಲಿ, 140 ಕೋಟಿ ಜನಸಂಖ್ಯೆಯನ್ನು ಹೊಂದಿರುವ ರಾಷ್ಟ್ರದಲ್ಲಿ, ಯಾವುದೇ ಹಿಂಸಾಚಾರವಿಲ್ಲದೆ, ಒಂದೇ ಒಂದು ಜೀವಹಾನಿಯಿಲ್ಲದೆ, ಯಾವ ಲೋಪದೋಷವೂ ಇಲ್ಲದಂತೆ, ಜಗತ್ತಿಗೇ ಮಾದರಿಯಾಗಿ ನಡೆಯುವ ಮತದಾನ ಪ್ರಕ್ರಿಯೆ ಹಲವು ದೇಶಗಳಿಗೆ ಅಧ್ಯಯನ ಯೋಗ್ಯವಾಗಿ ಕಾಣುತ್ತದೆ. ದಾಖಲೆ ಸಂಖ್ಯೆಯ ಜನರು ಮತದಾನ ಮಾಡಲು ಏಳೆಂಟು ಹಂತಗಳನ್ನು ತೆಗೆದುಕೊಂಡರೂ, ಒಂದೇ ದಿನದಲ್ಲಿ ಸಂಶಯಕ್ಕೆಡೆಯಿಲ್ಲದಂತೆ ಫಲಿತಾಂಶವನ್ನು ಪಡೆಯುವುದು ವಿಶೇಷ. ಅಮೆರಿಕದಂಥ ದೇಶದಲ್ಲೇ ಚುನಾವಣೆ ಹಲವು ಸಲ ಗೊಂದಲಮಯವಾಗಿರುತ್ತದೆ ಎಂಬುದನ್ನು ನೋಡಿದರೆ, ನಮ್ಮದು ಅಧ್ಯಯನಯೋಗ್ಯವೇ ಸರಿ. ಪ್ರಸ್ತುತ ಹತ್ತು ವರ್ಷಗಳ ಕಾಲ ಕೇಂದ್ರದಲ್ಲಿ ಅಧಿಕಾರ ನಡೆಸಿದ ಭಾರತೀಯ ಜನತಾ ಪಾರ್ಟಿ ಮತ್ತೆ ಅಧಿಕಾರಕ್ಕೆ ಏರಲು ಜನತೆಯ ಆಶೀರ್ವಾದ ಕೋರಿದೆ. ನರೇಂದ್ರ ಮೋದಿಯವರು ಪಕ್ಷಕ್ಕೆ ಹಾಗೂ ಎನ್‌ಡಿಎ ಮೈತ್ರಿಕೂಟಕ್ಕೆ ಸಮರ್ಥ ನಾಯಕತ್ವ ನೀಡಿದ್ದಾರೆ. ಹಲವು ದಶಕಗಳ ಕಾಲ ದೇಶವನ್ನು ಆಳಿ ಸದ್ಯ ಅಧಿಕೃತ ವಿಪಕ್ಷ ಸ್ಥಾನಮಾನವನ್ನೂ ಹೊಂದಿಲ್ಲದ ಕಾಂಗ್ರೆಸ್, ಮರಳಿ ಅಧಿಕಾರಕ್ಕೆ ಬರಲು ಹಾತೊರೆಯುತ್ತಿದೆ. ಕಾಂಗ್ರೆಸ್ ಪಕ್ಷ ಹಲವು ಮಿತ್ರಪಕ್ಷಗಳನ್ನು ಸೇರಿಸಿಕೊಂಡು ಇಂಡಿಯಾ ಬ್ಲಾಕ್ ರಚಿಸಿಕೊಂಡು ಬಿಜೆಪಿಯ ಅಶ್ವಮೇಧವನ್ನು ಕಟ್ಟಿಹಾಕಲು ಯತ್ನಿಸುತ್ತಿದೆ. ಚುನಾವಣೆಯ ಪ್ರಚಾರ ಕಣದಲ್ಲಿ ಹಲವು ವಾದವಿವಾದಗಳು, ವಾಗ್ವಾದಗಳು ನಡೆದುಹೋಗಿವೆ. ಯಾರನ್ನು ಆಯ್ಕೆ ಮಾಡಬೇಕು ಎಂಬುದು ಮತದಾರನಿಗೆ ಬಿಟ್ಟ ವಿಷಯ. ಮತದಾರ ಸಾಕಷ್ಟು ಬುದ್ಧಿವಂತನಾಗಿದ್ದು, ತನ್ನ ಆಯ್ಕೆಯನ್ನು ಆತ ಮಾಡಬಲ್ಲ. ಆದರೆ, ಚಿಂತಿಸಬೇಕಾದ ಒಂದು ವಿಷಯವೆಂದರೆ, ಮತದಾನದ ಪ್ರಮಾಣ. ಮುಖ್ಯವಾಗಿ ನಗರ ಪ್ರದೇಶಗಳಲ್ಲಿ ಮತದಾನ ಪ್ರಮಾಣ ಕಡಿಮೆಯಿದೆ. ವಿದ್ಯಾವಂತರೇ ಮತದಾನ ಮಾಡುತ್ತಿಲ್ಲ ಎಂಬುದು ನಮ್ಮ ಪ್ರಜಾಪ್ರಭುತ್ವಕ್ಕೆ ಸವಾಲಾಗಿರುವ ಕೊರಗುಗಳಲ್ಲಿ ಒಂದು. ವಿಶೇಷವಾಗಿ ಬೆಂಗಳೂರು ನಗರದಲ್ಲಿ ಮತದಾನ ಪ್ರಮಾಣ ಹೆಚ್ಚಿಸಬೇಕಿದೆ. ಬೆಂಗಳೂರು ದಕ್ಷಿಣ ಕ್ಷೇತ್ರದಲ್ಲಿ ಕಳೆದ ಚುನಾವಣೆಯಲ್ಲಿ (2019) ಇಡೀ ರಾಜ್ಯದಲ್ಲೇ ಕನಿಷ್ಠ ಪ್ರಮಾಣ (ಶೇ 53.7) ಮತದಾನವಾಗಿತ್ತು. ಬೆಂಗಳೂರು ಸೆಂಟ್ರಲ್‌ನಲ್ಲಿ ಮತದಾನ ಪ್ರಮಾಣ ಸೇಕಡ 54.3, ಬೆಂಗಳೂರು ಉತ್ತರದಲ್ಲಿ ಮತದಾನ ಪ್ರಮಾಣ ಶೇಕಡ 54.7 ಇತ್ತು. ಇದೇ ವೇಳೆ ಬೆಂಗಳೂರು ಗ್ರಾಮಾಂತರದಲ್ಲಿ ಮತದಾನ ಪ್ರಮಾಣ ಶೇಕಡ 64.9 ಇತ್ತು. ಕರ್ನಾಟಕದ ಒಟ್ಟು ಮತದಾನ ಪ್ರಮಾಣ ಶೇಕಡ 68 ಇತ್ತು. ಮತದಾನ ಪ್ರಮಾಣ ಹೆಚ್ಚಿಸಬೇಕು ಎಂಬ ಪ್ರಯತ್ನಗಳು ನಡೆಯುತ್ತಿವೆ. ಹೀಗಾಗಿ ಮತದಾರರನ್ನು ಮತಗಟ್ಟೆಯತ್ತ ಸೆಳೆಯಲು ಆಯೋಗ ಹಲವಾರು ಕ್ರಮಗಳನ್ನು ಕೈಗೊಂಡಿದೆ. ಇವುಗಳಿಗೆ ಪೂರಕವಾಗಿ ಸ್ಪಂದಿಸಬೇಕಿದೆ. ಸಾಮಾನ್ಯವಾಗಿ ವಾರಾಂತ್ಯ ಅಥವಾ ವಾರದ ಆರಂಭದಲ್ಲಿ ಮತದಾನ ದಿನ ನಿಗದಿಪಡಿಸಿದರೆ ಒಂದಿಷ್ಟು ಸಂಖ್ಯೆಯ ಮತದಾರರು ಪ್ರವಾಸಕ್ಕೆ ಹೊರಡುವ ಪ್ರವೃತ್ತಿಯನ್ನು ನಾವು ಈ ಹಿಂದಿನ ಚುನಾವಣೆಗಳಲ್ಲಿ ಗಮನಿಸಿದ್ದೇವೆ. ಅದನ್ನು ತಪ್ಪಿಸಲು ಆಯೋಗ ವಾರದ ನಡುವೆ ಮತದಾನದ ದಿನ ನಿಗದಿಪಡಿಸಿದೆ. ಹಾಗೆಯೇ ಈ ದಿನ ಸಾರ್ವತ್ರಿಕ ರಜೆಯನ್ನು ನೀಡಲಾಗಿದೆ. ರಜೆಯೆಂದು ಪ್ರವಾಸ ಹೋಗುವ ನಗರದ ಮತದಾರರ ಚಾಳಿಯನ್ನು ತಪ್ಪಿಸಲು ಹೆಚ್ಚಿನ ಪ್ರವಾಸೀ ತಾಣಗಳನ್ನು ಕ್ಲೋಸ್ ಮಾಡಲಾಗುತ್ತಿದೆ. ಎಲ್ಲರೂ ಮತದಾನ ಮಾಡಲು ಅವಕಾಶ ದೊರೆಯಬೇಕು ಎನ್ನುವ ಉದ್ದೇಶದಿಂದ ಮತದಾನ ಕೇಂದ್ರಕ್ಕೆ ಬರಲು ಆಗದ 80 ವರ್ಷಕ್ಕೂ ಮೇಲ್ಪಟ್ಟವರು, ಗಂಭೀರ ಅನಾರೋಗ್ಯ ಬಾಧಿತರು ಮತ್ತು ಅಂಗವಿಕಲರಿಗೆ ಮನೆಯಿಂದಲೇ ಮತದಾನಕ್ಕೆ ಅವಕಾಶ ನೀಡಲಾಗಿತ್ತು. ಮತದಾನ ಕೇಂದ್ರದಲ್ಲೂ ಇವರಿಗೆ ವಿಶೇಷ ಸೌಲಭ್ಯ ಮಾಡಲಾಗಿದೆ. ಮೊದಲೇ ನೋಂದಾಯಿಸಿಕೊಳ್ಳಬೇಕು. ಸಂಗ್ರಹಕ್ಕೆ ಮೂರ್ನಾಲ್ಕು ಮಂದಿಯನ್ನು ನಿಯೋಜಿಸಲಾಗುತ್ತದೆ ಎಂದರೆ, ಒಂದೊಂದು ಮತವನ್ನೂ ಆಯೋಗ ಎಷ್ಟು ಗಂಭೀರವಾಗಿ ಪರಿಗಣಿಸಿದೆ ಎಂಬುದನ್ನು ಗಮನಿಸಬಹುದು. ಅಗತ್ಯವಿದ್ದವರು ಇದರ ಸದ್ಬಳಕೆ ಮಾಡಿಕೊಂಡಿದ್ದಾರೆ. ಭಾರತೀಯ ಚುನಾವಣಾ ಆಯೋಗವು ನವೀನ ವಿನೂತನ ಮತದಾರರ ಜಾಗೃತಿ ಅಭಿಯಾನಗಳನ್ನು ಆಯೋಜಿಸಿರುವುದರ ಜೊತೆಗೆ ಹೋಟೆಲ್ ಉದ್ಯಮಿಗಳು, ಕಂಪನಿಗಳು ಇತರ ಸಂಸ್ಥೆಗಳು ಮತದಾನದ ಶೇಕಡಾವಾರು ಪ್ರಮಾಣವನ್ನು ಹೆಚ್ಚಿಸುವ ಪ್ರಯತ್ನ ದಲ್ಲಿ ಮತದಾರರನ್ನು ಓಲೈಸಲು ತಮ್ಮನ್ನು ತಾವು ತೊಡಗಿಸಿಕೊಂಡಿವೆ. ಯುವ ಮತದಾರರಿಗೆ, ಮೊದಲ ಬಾರಿಗೆ ಮತ ಹಾಕುತ್ತಿರುವವರಿಗೆ ಉತ್ತೇಜನ ನೀಡುವ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಬುಡಕಟ್ಟು ಸಮುದಾಯಗಳಿಗೆ ವಿಶೇಷ ಮತಗಟ್ಟೆ ರಚಿಸಲಾಗಿದೆ. ಪ್ರತಿ ಮತವೂ ಅಮೂಲ್ಯ. ಆದರೆ ನಗರ ಪ್ರದೇಶಗಳಲ್ಲೇ ಮತದಾನ ಪ್ರಮಾಣ ಶೇ.60ನ್ನು ದಾಟುವುದಿಲ್ಲ. ಸುಶಿಕ್ಷಿತರು ಮತದಾನ ಮಾಡುವುದು ತಮ್ಮ ಕರ್ತವ್ಯ ಎಂದು ಭಾವಿಸಿದಾಗ ಮಾತ್ರ ಇದಕ್ಕೆ ಪರಿಹಾರ. ಪ್ರಜಾಪ್ರಭುತ್ವವೆಂಬುದು ಸುಮ್ಮನೇ ಯಾರೋ ನಮಗೆ ತಟ್ಟೆಯಲ್ಲಿಟ್ಟು ಕೊಟ್ಟ ಉಡುಗೊರೆಯಲ್ಲ, ಪ್ರತಿ ಪ್ರಜೆಯೂ ಪ್ರತಿ ಕಾಲದಲ್ಲೂ ತಮ್ಮ ಪ್ರಜಾಪ್ರಭುತ್ವವನ್ನು ಉತ್ತಮಗೊಳಿಸಿಕೊಳ್ಳಲು ಸದಾ ಶ್ರಮಿಸುತ್ತಿರಬೇಕು. ಸಂವಿಧಾನದ ಪ್ರಕಾರ ಪ್ರತೀ ಪ್ರಜೆಗೂ ಮತದಾನ ಎಂಬುದು ಮೂಲಭೂತ ಹಕ್ಕು. ಮತದಾನದ ಒಂದು ದಿನದಂದು ಮಾತ್ರವೇ ಪ್ರಜೆ ಪ್ರಭುವಾಗಿರುತ್ತಾನೆ.

> ಪ್ರತಿ ಮತವೂ ಅಮೂಲ್ಯ. ಆದರೆ ನಗರ ಪ್ರದೇಶಗಳಲ್ಲೇ ಮತದಾನ ಪ್ರಮಾಣ ಶೇ.60ನ್ನು ದಾಟುವುದಿಲ್ಲ. ಸುಶಿಕ್ಷಿತರು ಮತದಾನ ಮಾಡುವುದು ತಮ್ಮ ಕರ್ತವ್ಯ ಎಂದು ಭಾವಿಸಿದಾಗ ಮಾತ್ರ ಇದಕ್ಕೆ ಪರಿಹಾರ. ಪ್ರಜಾಪ್ರಭುತ್ವವೆಂಬುದು ಸುಮ್ಮನೇ ಯಾರೋ ನಮಗೆ ತಟ್ಟೆಯಲ್ಲಿಟ್ಟು ಕೊಟ್ಟ ಉಡುಗೊರೆಯಲ್ಲ. ಪ್ರತಿ ಪ್ರಜೆಯೂ ಪ್ರತಿ ಕಾಲದಲ್ಲೂ ತಮ್ಮ ಪ್ರಜಾಪ್ರಭುತ್ವವನ್ನು ಉತ್ತಮಗೊಳಿಸಿಕೊಳ್ಳಲು ಸದಾ ಶ್ರಮಿಸುತ್ತಿರಬೇಕು.

# ಮಾಜಿ ಸಿಎಂ ಹೆಚ್‌ಡಿಕೆ ವಿರುದ್ಧ ಡಿಸಿಎಂ ವಾಗ್ದಾಳಿ

• ಉದಯವಾಹಿನಿ, ರಾಮನಗರ,



ಉದಯವಾಹಿನಿ ಚಿತ್ರ

ತಾನು ಅಕ್ರಮ ಮಾಡಿ, ಅದನ್ನು ಬೇರೆಯವರ ಮೂತಿಗೆ ಒರೆಸುವುದು ಕುಮಾರಸ್ವಾಮಿ ಜಾಯಮಾನ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಾಜಿ ಸಿಎಂ ಹೆಚ್.ಡಿ ಕುಮಾರಸ್ವಾಮಿ ವಿರುದ್ಧ ವಾಗ್ದಾಳಿ ನಡೆಸಿದರು. ಚುನಾವಣೆಯಲ್ಲಿ ಗಿಫ್ಟ್ ಕಾರ್ಡ್ ನೀಡುತ್ತಿದ್ದಾರೆ ಎಂಬ ಕುಮಾರಸ್ವಾಮಿ ಅವರ ಆರೋಪದ ಕುರಿತು ಮಾತನಾಡಿ, ಚುನಾವಣೆಯಲ್ಲಿ ಗಿಫ್ಟ್ ಕಾರ್ಡ್, ಹಣ ಹಂಚುತ್ತಿರುವುದು ಕುಮಾರಸ್ವಾಮಿ ಅವರು.

ಕುಮಾರಸ್ವಾಮಿ ಅವರು ತಾನು ಮಾಡಬಾರದನ್ನು ಮಾಡಿ ಬೇರೆಯವರ ಮೂತಿಗೆ ಒರೆಸುವ ಪ್ರಯತ್ನ ಮಾಡುತ್ತಿದ್ದಾರೆ. ಬಿಜೆಪಿ ಶಾಸಕರುಗಳು ಈ ಕ್ಷೇತ್ರದಲ್ಲಿ ಕಾರ್ಡ್‌ಗಳನ್ನು ಹಂಚುತ್ತಿದ್ದಾರೆ. ಅವರು ಕಾರ್ಡ್ ಹಂಚಿ ನಮ್ಮ ಮೇಲೆ ಹಾಕುತ್ತಿದ್ದಾರೆ. ಕುಮಾರಸ್ವಾಮಿ ಜಾಯಮಾನವೇ ಅಷ್ಟು, ತಾನು ಮಾಡಿದ್ದನ್ನು ಬೇರೆಯವರ ಮೇಲೆ ಹಾಕುವುದು ಎಂದು ತಿಳಿಸಿದರು. ರಾಮನಗರದಲ್ಲಿ ನಿಮ್ಮ ಕಾರ್ಯಕರ್ತರಿಗೆ ತೊಂದರೆ ಮಾಡುತ್ತಿದ್ದಾರೆ ಎಂದು ಕೇಳಿದಾಗ, ನಾವು ಜನರ ಮುಂದೆ ಕೈ ಮುಗಿದು ಮತ ಕೇಳುತ್ತಿದ್ದರೆ, ಅವರು ಚುನಾವಣೆ ಸಂದರ್ಭದಲ್ಲಿ ಪ್ರತ್ಯಕ್ಷರಾಗಿದ್ದಾರೆ. ಕುಮಾರಸ್ವಾಮಿ ಚುನಾವಣೆಗೂ ಮುನ್ನ ಮಂಡ್ಯಕ್ಕೆ ಹೋಗಿದ್ದರೇ? ರಾಮನಗರ, ಕನಕಪುರಕ್ಕೆ ಹೋಗಿದ್ದರಾ? ಹೀಗಾಗಿ ಹಿಂಡು ಹಿಂಡಾಗಿ ಅವರ ಕಾರ್ಯಕರ್ತರು ನಮ್ಮ ಪಕ್ಷ ಸೇರುತ್ತಿದ್ದಾರೆ ಎಂದು ತಿಳಿಸಿದ್ದಾರೆ. ಲುಲು ಮಾಲ್ ನಲ್ಲಿ 10 ಸಾವಿರ ಗಿಫ್ಟ್ ಕೂಪನ್ ನೀಡುತ್ತಿದ್ದಾರೆ ಎಂಬ ಕುಮಾರಸ್ವಾಮಿ ಆರೋಪಕ್ಕೆ ಉತ್ತರಿಸಿ, ಅವನು ಸತ್ಯಹರಿಶ್ಚಂದ್ರನ ಮೊಮ್ಮಗ ಅಲ್ಲವೇ, ಚುನಾವಣಾ ಆಯೋಗಕ್ಕೆ ಹೋಗಿ ದೂರು ನೀಡಲು ಹೇಳಿ. ಖಾಲಿ ಮಾತಿನ ಮೂಲಕ ಹಿಟ್ ಅಂಡ್ ರನ್ ಮಾಡುವುದಲ್ಲ. ಸಾಕ್ಷಿ ಇದ್ದರೆ ಆಯೋಗಕ್ಕೆ ದೂರು ನೀಡಲಿ. ನಾವು ಐದು ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದೇವೆ. ಇದರಿಂದ ಜನರಿಗೆ ಶಕ್ತಿ ಬಂದಿದೆ. ಅವರ ಮನೆಯಲ್ಲಿ ಕೆಲಸ ಮಾಡುವವರಿಗೂ ನಮ್ಮ ಗ್ಯಾರಂಟಿ ತಲುಪುತ್ತಿದೆ. ಅವರ ಮತಗಳು ನಮಗೆ ಬರಲಿದೆ. ಈಗ ಐದು ನ್ಯಾಯ ಯೋಜನೆಗಳ ಮೂಲಕ 25 ಗ್ಯಾರಂಟಿ ಯೋಜನೆ ಘೋಷಣೆ ಮಾಡಿದ್ದೇವೆ. ನಾವು ಬಸವಣ್ಣನ ನಾಡಿನವರು ನುಡಿದಂತೆ ನಡೆಯುತ್ತೇವೆ. ಮಲ್ಲಿಕಾರ್ಜುನ ಖರ್ಗೆ ಅವರು ಕೂಡ ಬಸವಣ್ಣನ ನಾಡಿನಲ್ಲಿ ಜನಿಸಿದವರು. ಈ ಗ್ಯಾರಂಟಿ ಜಾರಿ ಮಾಡಿ ಜನರ ಬದುಕು ಬದಲಾವಣೆ ಮಾಡುತ್ತೇವೆ ಎಂದು ತಿಳಿಸಿದರು.

ಐಟಿ ದಾಳಿ ವಿಚಾರವಾಗಿ ಮಾತನಾಡಿ, ನಮ್ಮ ಪಕ್ಷದ ನಾಯಕರ ಮನೆ ಮೇಲೆ ದಾಳಿ ಮಾಡಿ ಕಿರುಕುಳ ನೀಡಲಾಗುತ್ತಿದೆ. ಹೀಗಾಗಿ ನಾನು ಐಟಿ ಇಲಾಖೆ ಕಚೇರಿಗೆ ಹೋಗುತ್ತೇನೆ. ನಮ್ಮ ನಾಯಕರು ಚುನಾವಣೆಗೆ ಬರಬಾರದು ಎಂದು ಈ ತಂತ್ರ ರೂಪಿಸುತ್ತಿದ್ದಾರೆ. ಈ ಶಾಲೆಗಳಿರುವ ಜಾಗ ನಮ್ಮ ಸ್ವಂತ ಜಾಗ. ಅದನ್ನು ವಿದ್ಯಾಭ್ಯಾಸಕ್ಕಾಗಿ ನಾವು ದಾನ ಮಾಡಿದ್ದೇವೆ. ಈ ಕ್ಷೇತ್ರದಲ್ಲಿ ಇಂತಹ ಕಟ್ಟಡಗಳಿವೆ ನೋಡಿ. ಕುಮಾರಸ್ವಾಮಿ ಬಂದು ಈ ಕಟ್ಟಡ ಕಟ್ಟಿದ್ದನಾ? ಈ ರೀತಿ ತಮ್ಮ ಆಸ್ತಿ ದಾನ ಮಾಡಿದ್ದಾರಾ? ಎಂದರು.

**ಚುನಾವಣಾ ಆಯೋಗಕ್ಕೆ ದೂರು**

> ರಾಜ್ಯದಲ್ಲಿ ಎಷ್ಟು ಸೀಟು ಗೆಲ್ಲುತ್ತೀರಿ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ರಾಜ್ಯದಲ್ಲಿ ನಮ್ಮ ಪಕ್ಷ 20ಕ್ಕಿಂತ ಹೆಚ್ಚು ಸೀಟು ಗೆಲ್ಲಲಿದೆ. ಬಿಜೆಪಿ ಕೇವಲ ಸುಳ್ಳು ಭರವಸೆ ನೀಡುತ್ತಾ ಬಂದಿದೆ. ಪ್ರಧಾನಮಂತ್ರಿಗಳು ರಾಜ್ಯಕ್ಕೆ ಬಂದರೂ ಯಾವುದೇ ನೆರವು ನೀಡಿಲ್ಲ. ನಾವು ರಾಜ್ಯದ ಹಿತಕ್ಕಾಗಿ ಹೋರಾಟ ಮಾಡಿದ್ದು, ಜನ ಬೆಂಬಲಿಸುವ ವಿಶ್ವಾಸವಿದೆ ಎಂದು ತಿಳಿಸಿದರು.
> –ಡಿಸಿಎಂ ಡಿ.ಕೆ. ಶಿವಕುಮಾರ್

**ಜನರ ಸೇವೆ**

> ಮತದಾನದ ಬಗ್ಗೆ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಅವರು, ಪ್ರಜಾಪ್ರಭುತ್ವದ ಹಬ್ಬದಂದು ಕುಟುಂಬ ಸಮೇತರಾಗಿ ಹುಟ್ಟೂರಿನಲ್ಲಿ ಮತದಾನ ಮಾಡಿದ್ದೇವೆ. ಈ ಊರಿನಿಂದ ಒಬ್ಬ ಮಗನನ್ನು 8 ಬಾರಿ ವಿಧಾನಸಭೆಗೆ, ಮತ್ತೊಬ್ಬ ಮಗನನ್ನು ಮೂರು ಬಾರಿ ಸಂಸತ್ತಿಗೆ ಕಳುಹಿಸಿದ್ದಾರೆ. ನಾವೆಲ್ಲರೂ ಹೋಗಿ ಜನರ ಸೇವೆ ಮಾಡಿದ್ದೇವೆ. ರಾಜ್ಯದಲ್ಲಿ ನಮ್ಮ ಪಕ್ಷದ ಪರವಾಗಿ ಒಳ್ಳೆಯ ವಾತಾವರಣವಿದೆ. ನಾವು ಕೊಟ್ಟ ಮಾತು ಉಳಿಸಿಕೊಂಡಿರುವ ಪರಿಣಾಮ ಜನ ನಮ್ಮ ಮೇಲೆ ನಂಬಿಕೆ ಇದೆ. ಡಿ.ಕೆ. ಸುರೇಶ್ ವರು ಹೆಚ್ಚಿನ ಮತಗಳ ಅಂತರದಲ್ಲಿ ಗೆಲ್ಲಲಿದ್ದಾರೆ ಎಂದರು.

## ಮತದಾನಕ್ಕೆ ಬಂದಿದ್ದ ಮಹಿಳೆಗೆ ಹೃದಯಸ್ತಂಭನ

**ಜೀವ ಉಳಿಸಿದ ಸ್ಥಳದಲ್ಲಿದ್ದ ವೈದ್ಯ**

• ಉದಯವಾಹಿನಿ, ಬೆಂಗಳೂರು

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಮೊದಲ ಹಂತದ ಮತದಾನ ನಡೆಯುತ್ತಿದ್ದಿದ್ದು, ಬೆಂಗಳೂನಲ್ಲಿ ಮತದಾನಕ್ಕೆ ಮತಗಟ್ಟೆಗೆ ಆಗಮಿಸಿದ್ದ ಮಹಿಳೆಗೆ ಹೃದಯಸ್ತಂಭನವಾಗಿದೆ.

ಜೆ.ಪಿ.ನಗರದಲ್ಲಿರುವ ಜಂಬೂ ಸವಾರಿ ದಿನ್ನೆ ಮತಗಟ್ಟೆಗೆ ಮತದಾನ ಮಾಡಲು ಆಗ ಮಿಸಿದ ಮಹಿಳೆಯೊಬ್ಬರಿಗೆ ಹೃದಯಸ್ತಂಭನವಾಗಿದೆ. ಇದೇ ಮತಗಟ್ಟೆಗೆ ಮತದಾನ ಮಾಡಲು ಆಗಮಿಸಿದ್ದ ವೈದ್ಯರೊಬ್ಬರು ಮಹಿಳೆಯ ಜೀವ ಉಳಿಸಿದ್ದಾರೆ. ಬೊಮ್ಮಸಂದ್ರದ ನಾರಾಯಣ ಆರೋಗ್ಯ ಕೇಂದ್ರದ ಮೂತ್ರಪಿಂಡ ತಜ್ಞ ಡಾ.ಗಣೇಶ್ ಶ್ರೀನಿವಾಸ್ ಪ್ರಸಾದ್ ಜೀವ ಉಳಿಸಿದ್ದಾರೆ.


ಉದಯವಾಹಿನಿ ಚಿತ್ರ

ಮತಗಟ್ಟೆಗೆ ಮತದಾನಕ್ಕೆ ಬಂದಿದ್ದ 50 ವರ್ಷದ ಮಹಿಳೆಯೊಬ್ಬರು ಆಯಾಸಗೊಂಡು ನೀರು ಕುಡಿಯಲು ಬಂದಿದ್ದರು. ಈ ವೇಳೆ ಕುಸಿದು ಬಿದ್ದಿದ್ದಾರೆ. ಉಸಿರುಗಟ್ಟಿ ದೇಹದಲ್ಲಿ ಚಲನವಲನವಿರಲಿಲ್ಲ. ತಕ್ಷಣ ಸಿಪಿಆರ್ ಮಾಡಿದ ವೈದ್ಯ ಗಣೇಶ್, ಮಹಿಳೆ ಚೇತರಿಸಿಕೊಳ್ಳುವಂತೆ ಮಾಡಿದರು. ಬಳಿಕ ಮತದಾನ ಮಾಡಿದ ನಂತರ ಮಹಿಳೆಯನ್ನು ಆಂಬುಲೆನ್ಸ್ ಮೂಲಕ ಆಸ್ಪತ್ರೆಗೆ ರವಾನಿಸಲಾಯಿತು.

## ಮೆಟ್ರೋ ಕಾಮಗಾರಿಗಾಗಿ 5 ವರ್ಷ ಮುಚ್ಚಿದ್ದ ಕಾಮರಾಜ್ ರಸ್ತೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ನಮ್ಮ ಮೆಟ್ರೊ ಕಾಮಗಾರಿ ಸಂಬಂಧ ನಗರದ ಪ್ರಮುಖ ರಸ್ತೆಯೊಂದರ ಸಂಚಾರವನ್ನು ಸುಮಾರು ಐದು ವರ್ಷಗಳ ಸ್ಥಗಿತಗೊಳಿಸಲಾಗಿತ್ತು. ಇದೀಗ ಆ ರಸ್ತೆಯ ಒಂದು ಬದಿಯನ್ನು ಸಾರ್ವಜನಿಕರಿಗೆ ಮುಕ್ತಗೊಳಿಸಲು ತೀರ್ಮಾನಿಸಲಾಗಿದೆ.

ಬೆಂಗಳೂರಿನ ಎಂಜಿ ರಸ್ತೆ ಹಾಗೂ ಕಬ್ಬನ್ ರಸ್ತೆಯ ನಡುವಿನ ಕಾಮರಾಜ್ ರಸ್ತೆಯ ಒಂದು ಬದಿಯ ರಸ್ತೆಯನ್ನು ಮುಂದಿನ ಮೇ ತಿಂಗಳ ಮಧ್ಯದಲ್ಲಿ ಸಂಚಾರಕ್ಕೆ ಮುಕ್ತಗೊಳಿಸಲು ಬೆಂಗಳೂರು ಮೆಟ್ರೋ ರೈಲು ಕಾರ್ಪೊರೇಷನ್ ಲಿಮಿಟೆಡ್ ಮತ್ತು ಸಂಚಾರಿ ಪೊಲೀಸರು ನಿರ್ಧರಿಸಿದ್ದಾರೆ ಎಂದು ಖಿಓಖಿಇ ವರದಿ ಮಾಡಿದೆ.

**ಮೆಟ್ರೋ ಗುಲಾಬಿ ಮಾರ್ಗದ ಕಾಮ ಗಾರಿಗೆ ರಸ್ತೆ ಬಂದ್:** ಎಂಜಿ ರಸ್ತೆ ಹಾಗೂ ಕಬ್ಬನ್ ಉದ್ಯಾನ ವ್ಯಾಪ್ತಿಯಲ್ಲಿ ನಮ್ಮ ಮೆಟ್ರೋ ಗುಲಾಬಿ ಮಾರ್ಗದ ಭೂಗತ ಕಾಮಗಾರಿ ಕೈಗೊಂಡಿದೆ. ಈ ಕಾರಣದಿಂದ ಕಳೆದ ಐದು ವರ್ಷದಿಂದ (2019) ಈ ಕಾಮರಾಜ್ ರಸ್ತೆಯನ್ನು ಮುಚ್ಚಲಾಗಿದೆ. ಇಲ್ಲಿ ಇದನ್ನು ಏಕಮುಖ ರಸ್ತೆಯನ್ನಾಗಿ ಮಾಡಲು ಸಂಚಾರ ಪೊಲೀಸರು ನಿರ್ಧರಿಸಿದ್ದಾರೆ. ಎಂಜಿ ರಸ್ತೆಯಿಂದ ಕಬ್ಬನ್ ರಸ್ತೆ ಕಡೆಗೆ ಸಂಚರಿಸುವ ವಾಗಹನಗಳಿಗೆ ಮಾತ್ರ ಈ ಕಾಮರಾಜ್ ರಸ್ತೆ ಲಭ್ಯವಾಗುವಂತೆ ಮಾಡಲು ಪೊಲೀಸರು ಪ್ಲಾನ್ ಮಾಡಿಕೊಂಡಿದ್ದಾರೆ.


ಉದಯವಾಹಿನಿ ಚಿತ್ರ

> ಈ ಕುರಿತು ಪ್ರತಿಕ್ರಿಯಿಸಿರುವ ಮುಖ್ಯ ಸಂಪರ್ಕ ಅಧಿಕಾರಿ ಬಿಎಲ್ ಯಶವಂತ ಚವ್ಹಾಣ ಅವರು, ಸದ್ಯ ಗುಲಾಬಿ ಮಾರ್ಗ ಸಂಬಂಧಿಸಿದ ಭೂಗತ ಕಾಮಗಾರಿ ನಿರಂತರವಾಗಿ ಮುಂದುವರಿಯಲಿದೆ. ಇನ್ನೊಂದು ತಪಾಸಣೆ ಬಳಿಕ ಸಂಚಾರಿ ಪೊಲೀಸರು ರಸ್ತೆಯನ್ನು ಭಾಗಶಃ ತೆರೆಯಲು ಯೋಜಿಸಿದ್ದಾರೆ ಎಂದರು.

**2019 ರಲ್ಲಿ ಮುಚ್ಚಲಾಗಿದ್ದ ರಸ್ತೆ:** ಈ ಕಬ್ಬನ್ ಪಾರ್ಕ್ ಮತ್ತು ಎಂಜಿ ರಸ್ತೆಯ 220 ಮೀಟರ್ ಉದ್ದದ ಕಾಮರಾಜ್ ರಸ್ತೆಯ ಕೆಳಗೆ ಮೆಟ್ರೋ ಗುಲಾಬಿ ಮಾರ್ಗ (ನಾಗವಾರ–ಕಾಳೇನ ಅಗ್ರಹಾರ) ಭೂಗತ ಮೆಟ್ರೋ ನಿಲ್ದಾಣ ನಿರ್ಮಿಸುತ್ತಿದೆ. ಹೀಗಾಗಿ 2019 ರಲ್ಲಿ ಮಧ್ಯ ಭಾಗದಲ್ಲಿ ಈ ರಸ್ತೆ ಸಂಚಾರ ಸ್ಥಗಿತಗೊಳಿಸಲಾಯಿತು. ಈ ಗುಲಾಬಿ ಮಾರ್ಗದ ಭೂಗತ ಮೆಟ್ರೋ ನಿಲ್ದಾಣವು ನೇರಳೆ ಮಾರ್ಗದೊಂದಿಗೆ ಇಂಟರ್‌ಚೇಂಜ್ ರೂಪದಲ್ಲಿ ಕಾರ್ಯ ನಿರ್ವಹಿಸುತ್ತದೆ.

> ಎಂಜಿ ರಸ್ತೆ ಭಾಗದಲ್ಲಿ ಅತೀವ ಸಂಚಾರ ದಟ್ಟಣೆ ಆದ ಪರಿಣಾಮ ತುರ್ತಾಗಿ ಈ ರಸ್ತೆಯನ್ನು ಸಾರ್ವಜನಿಕರಿಗಾಗಿ ಪುನರ್ ಸ್ಥಾಪಿಸಬೇಕೆಂದು ಪೊಲೀಸರು ನಿರ್ಧರಿಸಿದರು. ಕಮರ್ಷಿಯಲ್ ಸ್ಟ್ರೀಟ್ ಕಡೆ ತೆರಳುವವರು ಈ ರಸ್ತೆ ತೆರೆಯಲು ಬಹಳಷ್ಟು ಬೇಡಿಕೆ ಇಟ್ಟಿದ್ದರು. ಪೊಲೀಸರು ಸದ್ಯ ಕಾಮಗಾರಿ ಬೇಕಾದ ವಸ್ತುಗಳನ್ನು, ರಸ್ತೆಯಿಂದ ತೆಗೆಯುವಂತೆ ಸೂಚಿಸಿದ್ದಾರೆ ಎನ್ನಲಾಗಿದೆ.

ಕಾಮರಾಜ್ ರಸ್ತೆ ಬಂದ್ ಆಗ ಪರಿಣಾಮ ಸವಾರರು, ಶಿವಾಜಿನಗರ ಅಥವಾ ಕಮರ್ಷಿಯಲ್ ಸ್ಟ್ರೀಟ್‌ಗೆ ತೆರಳಲು ಅನಿಲ್ ಕುಂಬ್ಳೆ ವೃತ್ತ ಅಥವಾ ಟ್ರಿನಿಟಿ ವೃತ್ತದವರೆಗೆ ಹೋಗಿ ತಿರುವು ಪಡೆದು ಬರಬೇಕಿತ್ತು. ಇದರಿಂದ ಅಲ್ಲಲ್ಲಿ ಸಂಚಾರ ದಟ್ಟಣೆಯು ಕಂಡು ಬಂದಿತ್ತು.


ಎರಡು ಬದಿಯ ಈ ರಸ್ತೆಯಲ್ಲಿ ಒಂದು ಬದಿಯ 8 ಮೀಟರ್ ಅಗಲದ ರಸ್ತೆಯಲ್ಲಿ ಸಂಚಾರಕ್ಕೆ ಅನುವು ಮಾಡಿಕೊಡಲಾಗುತ್ತದೆ. ಇದು ಒನ್ ವೇ ಆಗಿರಲಿದೆ. ಇದರಲ್ಲಿಯೇ 2.5 ಮೀಟರ್‌ಗೆ ಪಾದಾಚಾರಿ ಮಾರ್ಗ ಸಹ ನಿರ್ಮಿಸಲಾಗಿದೆ.

## ಲೋಕಸಭಾ ಕ್ಷೇತ್ರದ ಶಿವಪುರಿ ಕಾಲೋನಿಯಲ್ಲಿ ಮತದಾನ ಬಹಿಷ್ಕಾರ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದ ಶಿವಪುರಿ ಕಾಲೋನಿಯಲ್ಲಿ ಮತದಾನ ಬಹಿಷ್ಕಾರ ಮಾಡಲಾಗಿದೆ. ಇಲ್ಲಿನ ಸಮಸ್ಯೆಗಳನ್ನು ಬಗೆ ಹರಿಸುವವರೆಗೂ ಮತ ಚಲಾಯಿಸುವುದಿಲ್ಲ ಎಂದು ಮತದಾರರು ಪಟ್ಟು ಹಿಡಿದಿದ್ದಾರೆ.ಟಿ ದಾಸರಹಳ್ಳಿ ವ್ಯಾಪ್ತಿಯಲ್ಲಿ ಬರುವ ಶಿವಪುರಿ ಕಾಲೋನಿಯಲ್ಲಿ ಈವರೆಗೂ ಒಂದೇ ಒಂದು ಮತದಾನವಾಗಿಲ್ಲ.

ಮಧ್ಯಾಹ್ನವಾದರೂ ಮತದಾರರು ಮತ ಚಲಾಯಿಸುವುದಿಲ್ಲ ಎಂದು ಮತದಾನ ಬಹಿಷ್ಕಾರ ಮಾಡಿದ್ದಾರೆ. ಶಿವಪುರಿಯಲ್ಲಿ ದಲಿತರು ಹೆಚ್ಚು ವಾಸವಾಗಿದ್ದಾರೆ. ಇಲ್ಲಿ ಮೂಲಭೂತ ಸೌಕರ್ಯಗಳಿಂದ ಜನ ವಂಚಿತರಾಗಿದ್ದಾರೆ. ತಮಗೆ ಸೌಕರ್ಯಗಳನ್ನು ನೀಡುವವರೆಗೂ ಮತ ಚಲಾಯಿಸುವುದಿಲ್ಲ ಎಂದು ಖಡಕ್ಕಾಗಿ ಹೇಳಿದ್ದಾರೆ ನಮಗೆ ಹಕ್ಕು ಪತ್ರ ಇಲ್ಲ, ಅರ್ಜಿ ಹಾಕಿದಿವಿ ಆದರೂ ಬಂದಿಲ್ಲ. ಬೆಳಿಗ್ಗೆಯಿಂದ ಸಂಜೆಯವರೆಗೆ ಶಾಸಕರ ಮನೆ ಮುಂದೆ ನಾಯಿಯಂತೆ ಕಾದರೂ ಪ್ರಯೋಜನವಾಗಿಲ್ಲ' ಎಂದು ನಿಂದಿಸಿದರು. 'ಅಭ್ಯರ್ಥಿಗಳು ಬರುತ್ತಾರೆ ಹೋಗುತ್ತಾರೆ. ಮತ ನೀಡಿ ಎಂದು ಮನವಿ ಮಾಡುತ್ತಾರೆ. ನಮ್ಮ ಸಮಸ್ಯೆಗಳನ್ನೂ ಆಲಿಸುತ್ತಾರೆ. ಆದರೆ ಸಮಸ್ಯೆಗಳನ್ನು ಬಗೆಹರಿಸುವುದಿಲ್ಲ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಬೇಸಿಗೆಯಲ್ಲಿ ನೀರಿನ ಸಮಸ್ಯೆ ತುಂಬಾ ಇದೆ. ಒಂದು ನೀರಿನ ಟ್ಯಾಂಕ್ ಇಲ್ಲಿಲ್ಲ. ಕಾವೇರಿ ನೀರು ಮೂರು ದಿನಕ್ಕೆ ಒಂದು ಬಾರಿ ಬಿಟ್ಟರೆ ಅದು ದೊಡ್ಡ ವಿಚಾರ. ಆ ನೀರನ್ನು ಒಂದು ವಾರ ಇಟ್ಟುಕೊಂಡರೆ ಹುಳ ಬೀಳುತ್ತವೆ. ಇದನ್ನು ಬಳಕೆ ಮಾಡುವುದು ಹೇಗೆ? ಎಷ್ಟೋ ಬಾರಿ ಶಾಸಕರ ಗಮನಕ್ಕೆ ತಂದಿದ್ದೇವೆ. ಆದರೆ ಪ್ರಯೋಜನವಾಗಿಲ್ಲ' ಎಂದು ಶಿವಪುರಿ ಕಾಲೋನಿಯ ಜನ ಆರೋಪಿಸಿದ್ದಾರೆ. ನೀರು ಒಂದೇ ಅಲ್ಲ ವಿದ್ಯುತ್ ಕೂಡ ಇಲ್ಲ. ವಿದ್ಯುತ್ ಇಲ್ಲದೆ ಜೀವನ ಮಾಡುವುದು ಹೇಗೆ? ನಾವೆಲ್ಲಾ ಬದುಕುವುದು ಹೇಗೆ? ನಮಗಿಲ್ಲದ ರಾಜಕಾರಣಿಗಳಿಗೆ ನಮ್ಮ ಮತ ಯಾಕೆ?' ಎಂದು ಜನ ಆಕ್ರೋಶಗೊಂಡರು. ಮಧ್ಯಾಹ್ನದಿಂದ ಮತದಾನ ಆಗದೇ ಇದ್ದರೂ ಯಾವುದೇ ರಾಜಕಾರಣಿಗಳು ಇಲ್ಲಿಗೆ ಭೇಟಿ ನೀಡಿ ಮತಚಲಾಯಿಸುವಂತೆ ಮನವೊಲಿಸುವ ಪ್ರಯತ್ನವನ್ನೂ ಮಾಡಿಲ್ಲ. ಹೀಗಾಗಿ ಸಂಜೆವರೆಗೂ ಇಲ್ಲಿನ ಜನ ಮನಬದಲಾಯಿಸುವ ಲಕ್ಷಣಗಳು ಕಾಣಿಸುತ್ತಿಲ್ಲ.




**ಗ್ರಾಮ ಅಭಿವೃದ್ಧಿ ಆಗಿಲ**

> ಈ ಸ್ಥಳದಲ್ಲಿ 500 ಹೆಚ್ಚು ಮತದಾರರು ಇದ್ದಾರೆ. ಫಂಡ್ ಇಲ್ಲದೆ ಗ್ರಾಮ ಅಭಿವೃದ್ಧಿ ಆಗಿಲ್ಲ. ಹೀಗಾಗಿ ಗಣಿಬಾಧಿತ ಪ್ರದೇಶ ಪಟ್ಟಿಗೆ ಊರನ್ನು ಸೇರುವಂತೆ ಒತ್ತಾಯಿಸಿದ್ದಾರೆ. ಆದರೆ ಮಧ್ಯಾಹ್ನ ಕಳೆಯುತ್ತಾ ಬಂದರೂ ಇಲ್ಲಿನ ಜನರನ್ನು ಮನವೊಲಿಸುವ ಪ್ರಯತ್ನಗಳು ನಡೆದಿಲ್ಲ.

> ಚಿತ್ರದುರ್ಗದ ಸಿದ್ದಾಪುರ ಗ್ರಾಮದ ಮತಗಟ್ಟೆ 76ರಲ್ಲಿ ಮತದಾನವೇ ಆಗಿಲ್ಲ. ಯಾಕೆಂದರೆ ಇಲ್ಲಿ ಮತದಾರರು ನಾನಾ ಬೇಡಿಕೆಗಳನ್ನು ಮುಂದಿಟ್ಟಿದ್ದು, ಬೇಡಿಕೆ ಈಡೇರಿದರೆ ಮಾತ್ರ ಮತ ಚಲಾಯಿಸುವುದಾಗಿ ಪಟ್ಟು ಹಿಡಿದಿದ್ದಾರೆ.

## ತಮಿಳಿನಲ್ಲಿ ಭಾಷಣ: "ಕರುನಾಡ ದೊರೆಯಲ್ಲ.. ಕರುನಾಡಿಗೆ ದೊಡ್ಡ ಹೊರೆ" ಆಕ್ರೋಶ

### ಕರುನಾಡಿಗೆ ದೊಡ್ಡ ಹೊರೆ, ನೆಟ್ಟಿಗರೊಬ್ಬರು ಆಕ್ರೋಶ


ಉದಯವಾಹಿನಿ ಚಿತ್ರ

> ಈ ತುಣುಕು ವೈರಲ್ ಆಗುತ್ತಿದ್ದಂತೆ ಶಿವರಾಜ್ ಕುಮಾರ್ ವಿರುದ್ಧ ನೆಟ್ಟಿಗರು ಗರಂ ಆಗಿದ್ದಾರೆ. ಈತ ಕರುನಾಡ ದೊರೆಯಲ್ಲ. ಕರುನಾಡಿಗೆ ದೊಡ್ಡ ಹೊರೆ. ಶಿವಣ್ಣ ಶಾಶ್ವತವಾಗಿ ತಮಿಳುನಾಡಿಗೆ ಹೋಗಿ ಬಿಡಲಿ. ತಮಿಳಲ್ಲಿ ಸೆಡ್ ಆಕ್ಟಿಂಗ್ ಮಾಡ್ಕೊಂಡ್ ಇರಲಿ. ಎಂದು ನೆಟ್ಟಿಗರೊಬ್ಬರು ಆಕ್ರೋಶ ಹೊರಹಾಕಿದ್ದಾರೆ. ಹಾಗೇ ಇನ್ನೊಬ್ಬರು ಏನಿದು ಶಿವಣ್ಣ. ಇದು ಕರ್ನಾಟಕ. ಕನ್ನಡದಲ್ಲಿ ಮಾತಾಡಿ. ಕೇವಲ ನವೆಂಬರ್ 1ದಂದು ಮಾತ್ರ ಕನ್ನಡ ರಾಜ್ಯೋತ್ಸವ ಅಲ್ಲ. ಎಂದು ಇನ್ನೊಬ್ಬರು ಕಿಡಿಕಾರಿದ್ದಾರೆ. ಇನ್ನು ಕೆಲವರು ಕನ್ನಡದಲ್ಲಿ ಮಾತಾಡಿ ಅಂತ ಕಿಡಿಕಾರುತ್ತಿದ್ದಾರೆ.

• ಉದಯವಾಹಿನಿ, ಶಿವಮೊಗ್ಗ

ಅಣ್ಣಾವ್ರ ಹಿರಿಮಗ ಶಿವರಾಜ್‌ಕುಮಾರ್ ಶಿವಮೊಗ್ಗದಲ್ಲಿ ಬೀಡು ಬಿಟ್ಟಿದ್ದಾರೆ. ಪತ್ನಿ ಗೀತಾ ಶಿವರಾಜ್‌ಕುಮಾರ್ ಶಿವಮೊಗ್ಗ ಕ್ಷೇತ್ರದಿಂದ ಲೋಕಸಭಾ ಚುನಾವಣೆಗೆ ಸ್ಪರ್ಧಿಸುತ್ತಿದ್ದಾರೆ. ಹೀಗಾಗಿ ಕಳೆದ ಕೆಲವು ದಿನಗಳಿಂದ ಪತ್ನಿಯೊಂದಿಗೆ ಶಿವಮೊಗ್ಗ ಜಿಲ್ಲೆಯನ್ನು ಸುತ್ತಿದ್ದಾರೆ.ಅಬ್ಬರಿಸಿ ಪ್ರಚಾರ ಮಾಡುವ ಭರಾಟೆಯಲ್ಲಿ ವಿವಾದಕ್ಕೆ ಸಿಕ್ಕಿಕೊಂಡಿದ್ದಾರೆ.

ಶಿವಮೊಗ್ಗದಲ್ಲಿ ಪತ್ನಿ ಗೀತಾ ಶಿವರಾಜ್‌ಕುಮಾರ್ ಪರ ಮತಯಾಚನೆಗೆ ಇಳಿದಿದ್ದರು. ಈ ವೇಳೆ ಮಲೆನಾಡಿನಲ್ಲಿ ತಮಿಳು ಭಾಷೆಯಲ್ಲಿ ಭಾಷಣ ಮಾಡಿದ್ದರು. ಈ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುವುದಕ್ಕೆ ಶುರು ಮಾಡುತ್ತಿದ್ದಂತೆ, ಕನ್ನಡಿಗರ ಕಣ್ಣುಗಳು ಕೆಂಪಗಾಗಿವೆ. ಸೋಶಿಯಲ್ ಮೀಡಿಯಾದಲ್ಲಿ ಶಿವಣ್ಣನ ವಿರುದ್ಧ ಕಿಡಿಕಾರುತ್ತಾ ಕಾಮೆಂಟ್‌ಗಳನ್ನು ಮಾಡುತ್ತಿದ್ದಾರೆ. ಈ ಬಾರಿ ಶಿವಣ್ಣನ ಪತ್ನಿ ಕಾಂಗ್ರೆಸ್ ಪಕ್ಷದಿಂದ ಚುನಾವಣೆಗೆ ಸ್ಪರ್ಧಿದಿದ್ದಾರೆ. ಸೊರಬ ಶಾಸಕ ಹಾಗೂ ಶಿಕ್ಷಣ ಹಾಗೂ ಸಾಕ್ಷಾತ್ಕಾರ ಇಲಾಖೆ ಸಚಿವ ಮಧು ಬಂಗಾರಪ್ಪ ಬೆಂಬಲವಿದೆ. ಹೀಗಾಗಿ ಈ ಬಾರಿಗೆ ಹೇಗಾದರೂ ಮಾಡಿ ಪತ್ನಿಯನ್ನು ಲೋಕಸಭಾ ಚುನಾವಣೆಯಲ್ಲಿ ಶಿವಮೊಗ್ಗ ಕ್ಷೇತ್ರದಿಂದ ಗೆಲ್ಲಿಸಲೇಬೇಕು ಎಂದು ಶಿವಣ್ಣ ಪಣತೊಟ್ಟು ನಿಂತಿದ್ದಾರೆ. ಸಿನಿಮಾ ಶೂಟಿಂಗ್‌ಗೆ ಕೊಂಚ ಬ್ರೇಕ್ ಕೊಟ್ಟು ಪತ್ನಿ ಗೀತಾ ಶಿವರಾಜ್‌ಕುಮಾರ್ ಪರ ಪ್ರಚಾರಕ್ಕೆ ಧುಮುಕಿದ್ದಾರೆ. ಶಿವಣ್ಣ ಪತ್ನಿ ಪರ ಪ್ರಚಾರಕ್ಕೆ ಇಳಿದ ದಿನದಿಂದ ವಿವಾದಕ್ಕೆ ಸಿಕ್ಕಿಕೊಳ್ಳುತ್ತಲೇ ಇದ್ದಾರೆ.


> ಈಗ ಶಿವಮೊಗ್ಗದ ಒಂದು ಏರಿಯಾದಲ್ಲಿ ತಮಿಳು ಸಂಖ್ಯೆ ಹೆಚ್ಚಿದೆ ಎಂಬ ಕಾರಣಕ್ಕೆ ಅದೇ ಭಾಷೆಯಲ್ಲಿ ಮತಯಾಚನೆ ಮಾಡಿದ್ದರು. ಅಲ್ಲದೆ ಈ ವೇಳೆ ಈ ಭಾಗದಲ್ಲಿ ತಮಿಳಿನವರು ಹೆಚ್ಚು ಜನ ಇದ್ದಾರೆಂದು ಗೊತ್ತಾಯ್ತು. ನಾನು ಹುಟ್ಟಿದ್ದು ಕೂಡ ಚೆನ್ನೈನಲ್ಲಿ. ಅಲ್ಲೇ ಬೆಳೆದಿದ್ದೇನೆ. ನನ್ನ ಶಿಕ್ಷಣ ಮುಗಿದಿದ್ದು ಕೂಡ ಅಲ್ಲೇನೆ. ಡಾ. ರಾಜ್‌ಕುಮಾರ್ ಮಕ್ಕಳು ಹುಟ್ಟಿದ್ದು ಕೂಡ ಚೆನ್ನೈನಲ್ಲಿಯೇ ನಮಗೂ ಅಲ್ಲಿ ಮನೆ ಇತ್ತು ಭಾಷಣದಲ್ಲಿ ಹೇಳಿದ್ದರು.

**ಕನ್ನಡದಲ್ಲಿ ಮಾತಾಡಿ ಅಂತ ಕಿಡಿ**

## ಲೋಕಸಭಾ ಚುನಾವಣಾ ಫಲಿತಾಂಶ ಬರುವ ಮುನ್ನವೇ ಗೆದ್ರಾ ಕುಮಾರಸ್ವಾಮಿ?

• ಉದಯವಾಹಿನಿ, ಮಂಡ್ಯ

ದೇಶಾದ್ಯಂತ ಲೋಕಸಭೆ ಚುನಾವಣೆಗೆ 7 ಹಂತಗಳಲ್ಲಿ ಮತದಾನ ನಡೆಯುತ್ತಿದ್ದು, ಇಂದು ಎರಡನೇ ಹಂತದ ಮತದಾನ ನಡೆಯುತ್ತಿದೆ. ಕರ್ನಾಟಕ ಸೇರಿದಂತೆ 13 ರಾಜ್ಯಗಳಲ್ಲಿ ಒಟ್ಟು 88 ಕ್ಷೇತ್ರಗಳಲ್ಲಿ ಮತದಾನ ಆರಂಭವಾಗಿದೆ. ಚುನಾವಣಾ ಫಲಿತಾಂಶಕ್ಕೂ ಮುನ್ನ ಮಂಡ್ಯ ಲೋಕಸಭಾ ಕ್ಷೇತ್ರದ ಮೈತ್ರಿ ಅಭ್ಯರ್ಥಿ ಹೆಚ್ ಡಿ ಕುಮಾರಸ್ವಾಮಿ ಅವರು ಜನ ನನ್ನದು ಎಂದು ಹೇಳಿದ್ದಾರೆ. ಈ ಕುರಿತು ಶುಕ್ರವಾರ ಮಂಡ್ಯದಲ್ಲಿ ಮಾಧ್ಯಮಗಳ ಜೊತೆಗೆ ಮಾತನಾಡಿದ ಕುಮಾರಸ್ವಾಮಿ, ಈ ಜಯ ನನ್ನದಲ್ಲಾ ಜಿಲ್ಲೆಯ ಎಲ್ಲಾ ಜನರದ್ದು. ನನ್ನ ಪರವಾಗಿ ಮಂಡ್ಯ ಜಿಲ್ಲೆ ಎಲ್ಲಾ ಜನ ಚುನಾವಣೆ ನಡೆಸಿದ್ದಾರೆ. ಈ ಜಯ ನನ್ನದಲ್ಲಾ ಇದು ಎಲ್ಲರ ಜಯ. ಮಂಡ್ಯ ಜಿಲ್ಲೆಯ ಎಲ್ಲಾ ಪಕ್ಷದಲ್ಲಿರುವ ನನ್ನ ಅಭಿಮಾನಿಗಳ ಜಯ ಎಂದು ಕುಮಾರಸ್ವಾಮಿ ಫಲಿತಾಂಶಕ್ಕೂ ಮುನ್ನವೇ ಚುನಾವಣಾ ಗೆಲುವಿನ ಕುರಿತು ಮಾತನಾಡಿದ್ದಾರೆ. ಸುಮಲತಾ ಮಂಡ್ಯದಲ್ಲಿ ಕುಮಾರಸ್ವಾಮಿ ಗೆ ಸಪೋರ್ಟ್ ಮಾಡಿಲ್ಲ ಎಂದು ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡರ ಹೇಳಿಕೆ ವಿಚಾರವಾಗಿ ಮಾತನಾಡಿ, ದೇವೇಗೌಡರು ಆ ರೀತಿ ಯಾಕೆ ಹೇಳಿದ್ದಾರೆ ಅಂತ ನನಗೆ ಗೊತ್ತಿಲ್ಲ. ಸುಮಲತಾ ಅವರ ಪ್ರಶ್ನೆ ಇಲ್ಲಿ ಬರಲ್ಲ, ದೇವೇಗೌಡರು ಯಾಕೆ ಹಾಗೆ ಹೇಳಿದ್ದಾರೆ ಗೊತ್ತಿಲ್ಲ. ದೇವೇಗೌಡರಿಗೆ ಮಾಹಿತಿ ಕೊರತೆ ಆಗಿರಬೇಕು ಅನಿಸುತ್ತದೆ. ಪಕ್ಷ ಭೇದ ಮರೆತು ಕಾಂಗ್ರೆಸ್, ಬಿಜೆಪಿಯವ್ರು ನನ್ನ ಪರವಾಗಿ ಕೆಲಸ ಮಾಡಿದ್ದಾರೆ. ಯಾರು ವಿರೋಧ ಮಾಡಿಲ್ಲ ಎಲ್ಲರೂ ನನಗೆ ಸಹಾಯ ಮಾಡಿದ್ದಾರೆ ಎಂದು ಹೇಳಿದರು. ಕುಮಾರಸ್ವಾಮಿ ಪರ ಪ್ರಚಾರಕ್ಕೆ ಯಾರು ನನ್ನ ಕರೆಯಲಿಲ್ಲ ಎಂಬ ಸುಮಲತಾ ಹೇಳಿಕೆ ವಿಚಾರವಾಗಿ ಮಾತನಾಡಿ, ನಾನು ಅವರ ಮನೆ ಬಾಗಿಲಿಗೆ ಹೋಗಿ ಸಹಕಾರ ಕೇಳಿದ್ದೇನೆ. ಇದಕ್ಕಿಂತ ಇನ್ನೇನು ಮಾಡಬೇಕು ನಾನು. ಅಂಬರೀಶ್ ಅಭಿಮಾನಿಗಳು ಸಹ ನನಗೆ ಸಹಾಯ ಮಾಡಿದ್ದಾರೆ. ನಾನು ಮೈಸೂರಿನ ಮೋದಿ ಕಾರ್ಯಕ್ರಮದಲ್ಲೂ ಕೂಡ ಸುಮಲತಾ ಅವರನ್ನ ಎರಡು ದಿನ ಪ್ರಚಾರಕ್ಕೆ ಬರುವಂತೆ ಕೋರಿದ್ದೆ. ಗೊಂದಲದ ಪ್ರಚಾರ ಮಾಡೋದು ಬೇಡ. ಬೆಂಗಳೂರಿನಿಂದ ಬಂದು ಸುಮಲತಾ ನನಗೆ ಓಟ್ ಮಾಡಿದ್ದಾರೆ, ಪಕ್ಷ ಭೇದ ಮರೆತು ಕೆಲಸ ಮಾಡಿದ್ದಾರೆ ರಾಜ್ಯದಲ್ಲೆ ಅತ್ಯಂತ ಬಹುಮತಗಳಿಂದ ಗೆಲ್ಲಲಿದ್ದೇನೆ ಎಂದು ಮಾಜಿ ಮುಖ್ಯಮಂತ್ರಿ, ಹೆಚ್ ಡಿ ಕುಮಾರಸ್ವಾಮಿ ವಿಶ್ವಾಸ ವ್ಯಕ್ತಪಡಿಸಿದರು.


ಉದಯವಾಹಿನಿ ಚಿತ್ರ



# ಮಹಾಭಾರತ

## ಭೀಷ್ಮಪರ್ವ

• ಹಿಂದಿನ ಸಂಚಿಕೆಯಿಂದ

ಹೋಗು, ಶಾಂತಿಯಿಂದ ಮಲಗು. ನಾಳೆಯ ಯುದ್ಧ ನಿನ್ನ ಮುಂದಿದೆ ಎನ್ನಲು, ರಾಧೇಯನು ಅಲ್ಲಿಂದ ಹೊರಟನು; ಆದರೆ ಅವನ ಹೃದಯ ಅಲ್ಲೇ ಇತ್ತು. ಡೇರೆಯ ದ್ವಾರದಲ್ಲಿ ನಿಂತು ಒಮ್ಮೆ ಹಿಂದಿರುಗಿ ನೋಡಿದನು. ದುರ್ಯೋಧನನು ತನ್ನ ಪ್ರೀತಿಯ ರಾಧೇಯ ಹೋಗುವುದನ್ನೇ ನೋಡುತ್ತಿದ್ದನು. ರಾಧೇಯ ಓಡಿಬಂದು ಪುನಃ ಗೆಳೆಯನನ್ನು ಆಲಿಂಗಿಸಿಕೊಂಡನು. ಅವನ ಪ್ರೇಮ ದುರ್ಯೋಧನನ ಮನಸ್ಸನ್ನು ಕಲಕಿತು. ಇಬ್ಬರು ಕಣ್ಣೀರಿಟ್ಟರು; ನಂತರ ಬೇರೆಯಾದರು. ಅದು ಸಂತೋಷದ ಕಣ್ಣೀರೋ, ದುಃಖದ ಕಣ್ಣೀರೋ ಹೇಳುವವರಾರು. ರಾಧೇಯನು ಹಾಸಿಗೆಯ ಮೇಲೆ ಮಲಗಿ ನಿದ್ರೆ ಮಾಡಲೆತ್ನಿಸಿದನು. ಆದರೆ ಕಣ್ಣುಗಳು ಕೆಂಡಗಳ ಹಾಗೆ ಉರಿಯುತ್ತಿರುವಾಗ ನಿದ್ರೆ ಬರುವುದಾದರು ಹೇಗೆ? ಅವನೆದೆ ವೇಗವಾಗಿ ಹೊಡೆದುಕೊಳ್ಳುತಿತ್ತು. ನಾಳೆ ತಾನು ಸಾವನ್ನೆದುರಿಸಬೇಕು. ವಿಧಿವಾದಿಯಾದ ಕರ್ಣನಿಗೂ ಬರಲಿರುವ ಸಾವನ್ನು ಇಚ್ಛಾಪೂರ್ವಕವಾಗಿ ಒಪ್ಪಿಕೊಳ್ಳುವುದೆಂದರೆ ಕಷ್ಟವೇ. ನಾಳಿನ ಹೋರಾಟವೇನು ಸಾಮಾನ್ಯವೇ? ಸಹೋದರನೊಂದಿಗೆ ಹೊರಬೇಕು, ಸಾಧ್ಯವಾದಷ್ಟು ಅವನನ್ನು ಕೊಲ್ಲಲು ಪ್ರಯತ್ನಿಸಬೇಕು. ಎಲ್ಲವೂ ಸಾಮಾನ್ಯವಾಗುವುದಾದರೆ ಅರ್ಜುನನನ್ನು ಕೊಲ್ಲವುದೇನೊ ಕಷ್ಟವಲ್ಲ. ಆದರೆ ಎಲ್ಲವೂ ಸಾಧಾರಣವಾಗುವುದು ಹೇಗೇ? ತನ್ನ ಜೀವನವೇ ಈವರೆಗೆ ಎಲ್ಲರ ಹಾಗಿನ ಸಾಧರಣ ಜೀವನವೇ? ಕೊನೆಯಲ್ಲಿ ಏಕೆ ಅದು ಸಾಧಾರಣವಾಗಬೇಕು? ಕೃಷ್ಣನು ಸಾರಥಿಯಾಗಿ ಕುಳಿತಿರುವುದರಿಂದ ಗೆಲ್ಲುವುದು ಅರ್ಜುನನೇ ಎಂಬುದು ತನಗೆ ಗೊತ್ತು. ಶಲ್ಯನು ಕೃಷ್ಣನ ಮಟ್ಟಕ್ಕೆ ಬರಲಾರನೆಂಬುದು ಅವನಿಗೆ ತಿಳಿದಿರುವ ವಿಷಯವೇ. ಕೃಷ್ಣಾರ್ಜುನರ ನಡುವಣ ಬಾಂಧವ್ಯ ತನಗೂ ಶಲ್ಯನಿಗೂ ನಡುವೆ ಏರ್ಪಡುವುದು ಹೇಗೆ? ನಿಜವಾಗಿ ಶಲ್ಯನಿಗೆ ತನ್ನನ್ನು ಕಂಡರಾಗುದು. ಆದರೆ ಅದೇನು ಮುಖ್ಯ ವಿಷಯವಲ್ಲ. ತಾನು ಕೈಲಾದಷ್ಟು ಹೊರಬೇಕು. ಕೊನೆಯಲ್ಲಿ ತಾನೂ, ದುರ್ಯೋಧನನೂ ಸಾಯುವವರೇ. ಇಷ್ಟು ವರ್ಷ ಕಷ್ಟಪಟ್ಟಿರುವ ಯುಧಿಷ್ಠಿರನೇ ಕೊನೆಗೆ ರಾಜ್ಯವಾಳುವುದು. ರಾಧೇಯ ತನ್ನ ಇಬ್ಬರು ತಾಯಿಯರನ್ನು ನೆನೆದು. ರಾಧೆಗೆ ತನ್ನ ಮೇಲೆ ಬಲು ಹೆಮ್ಮೆ. ಕುಂತಿಯ ಸುಂದರ ಕಣ್ಣುಗಳನ್ನು ಮೃದುಸ್ಪರ್ಶವನ್ನು ನೆನೆದ. ಅವಳೊಡನೆ ತಾನು ಕಳೆದ ಆ ಸ್ವಲ್ಪ ಕಾಲವನ್ನು ನೆನೆದಾಗ ಬಂದ ಕಣ್ಣೀರನ್ನೊರೆಸಿಕೊಂಡ. ಅವು ವ್ಯರ್ಥ! ಪುಂಖಾನುಪುಂಖವಾಗಿ ಬಂದ ಹಳೆಯ ಯೋಚನೆಗಳಲ್ಲಿ ಯಾವುದಕ್ಕೆ ಗಮನ ಕೊಡಬೇಕೆಂದೇ ತಿಳಿಯಲಿಲ್ಲ. ಭಾರ್ಗವಾಶ್ರಮದಲ್ಲಿದಾಗ ತನ್ನ ತೊಡೆಯನ್ನು ಕೊರೆದ ದುಂಬಿಯನ್ನು ನೆನೆದ. ಗಾಯದ ಗುರುತು ಇನ್ನೂ ಇದೆ. ಅದರ ಪರಿಣಾಮವಾಗಿ ಮನಸ್ಸಿನ ಮೇಲಾದ ಗಾಯದ ಗುರುತು ಸಹ ಇನ್ನೂ ಇದೆ. ಗುರುಗಳು ತನಗೆ ತುರ್ತುಸಮಯದಲ್ಲಿ ಅಸ್ತ್ರಗಳ ಮಂತ್ರಗಳೇ ಮರೆತು ಹೋಗಲಿ ಎಂದು ಶಾಪ ಕೊಟ್ಟಿದ್ದರು. ಅವು ಅಗತ್ಯವಾಗುವುದು ನಾಳೆಯೇ; ಆದರೆ ಅವು ಮರೆತುಹೋಗುವುದು ನಾಳೆಯೇ. ಅದರಲ್ಲಿ ಸಂಶಯವಿಲ್ಲ.

ಮುಂದುವರಿಯುವುದು...


# ಭಾರತದ ಜೊತೆ ವ್ಯಾಪಾರ ಆರಂಭಿಸಲು ಒಲವು

## ಬಾಂಗ್ಲಾವನ್ನು ನೋಡಿದರೆ ನಾಚಿಕೆಯಾಗುತ್ತದೆ ಎಂದ ಪಾಕ್ ಪಿಎಂ, ಆರ್ಥಿಕ ಸಮಸ್ಯೆಗಳನ್ನು ನಿವಾರಿಸಬೇಕಾದರೆ ರಾಜಕೀಯ ಸ್ಥಿರತೆಯತ್ತ ಗಮನಹರಿಸಬೇಕು

**ಇಸ್ಲಾಮಾಬಾದ್:** ಭಾರತದ ಜತೆ ವ್ಯಾಪಾರ, ವಾಣಿಜ್ಯ ವ್ಯವಹಾರ ಪುನಾರಂಭ ಸಂಬಂಧ ಮಾತುಕತೆ ನಡೆಸಬೇಕು. ಇದರಿಂದ ನಗದು ಕೊರತೆಯಿಂದ ನಲಗುತ್ತಿರುವ ನಮ್ಮ ದೇಶಕ್ಕೆ ದೊಡ್ಡ ಲಾಭವಾಗುತ್ತದೆ ಎಂದು ಪಾಕಿಸ್ತಾನದ ವಾಣಿಜ್ಯೋದ್ಯಮಿಗಳು ಪ್ರಧಾನಿ ಶೆಹಬಾಜ್ ಷರೀಫ್ ಅವರನ್ನು ಒತ್ತಾಯಿಸಿದ್ದಾರೆ.

ಪಾಕಿಸ್ತಾನದ ವಾಣಿಜ್ಯ ರಾಜಧಾನಿ ಸಿಂಧ್‌ನಲ್ಲಿರುವ ಸಿಎಂ ಹೌಸ್‌ನಲ್ಲಿ ನಡೆದ ಸಭೆಯಲ್ಲಿ ಪಾಕ್ ಆರ್ಥಿಕತೆಯನ್ನು ಸಬಲಗೊಳಿಸುವುದಕ್ಕೆ ಕೈಗೊಳ್ಳಬೇಕಾದ ಮಾರ್ಗೋಪಾಯಗಳ ಕುರಿತು ಸುದೀರ್ಘ ಚರ್ಚೆ ನಡೆಯಿತು. ಆರ್ಥಿಕ ಸಮಸ್ಯೆಗಳನ್ನು ನಿಭಾಯಿಸುವ ಪ್ರಧಾನಿಯ ದೃಢ ನಿಶ್ಚಯವನ್ನು ಸಭೆ ಶ್ಲಾಘಿಸಿತು. ಆದರೆ ಆರ್ಥಿಕ ಪರಿಸ್ಥಿತಿಯ ಸಂಕಷ್ಟಗಳನ್ನು ನಿವಾರಿಸಬೇಕಾದರೆ ರಾಜಕೀಯ ಸ್ಥಿರತೆಯತ್ತ ಗಮನಹರಿಸಬೇಕು ಎಂದು ಸಲಹೆ ನೀಡಿತು. ರಾಜಕೀಯ ಸ್ಥಿರತೆಗಾಗಿ ಜೈಲಿನಲ್ಲಿರುವ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಜೊತೆಗಿನ ಸಂಬಂಧ ಸುಧಾರಿಸುವಂತೆಯೂ ಉದ್ಯಮಿಗಳು ಪ್ರಧಾನಿಗೆ ಮನವಿ ಮಾಡಿದರು. ರಫ್ತು ಮೂಲಕ ಆರ್ಥಿಕತೆಯನ್ನು ಮೇಲೆತ್ತುವ ಮಾರ್ಗಗಳನ್ನು ಕಂಡುಕೊಳ್ಳಬೇಕಿದೆ ಎಂದು ಶೆಹಬಾಜ್ ಷರೀಫ್ ಅಭಿಪ್ರಾಯಪಟ್ಟರು. ಆದರೆ, ಹೆಚ್ಚಿದ ಇಂಧನ ವೆಚ್ಚ, ಸಮಂಜಸವಲ್ಲದ ಸರಕಾರಿ ನೀತಿಗಳಿಂದ ವ್ಯವಹಾರ ನಡೆಸುವುದು ಕಷ್ಟ. ಹೀಗಾಗಿ ರಫ್ತುಗಳ ಮೂಲಕ ಆರ್ಥಿಕತೆಯನ್ನು ಬೆಳವಣಿಗೆ ಹಾದಿಗೆ ತರುವುದು ಅಸಾಧ್ಯ ಎಂಬುದಾಗಿ ಉದ್ಯಮಿಗಳು ಸರಕಾರಕ್ಕೆ ಸಲಹೆ ನೀಡಿದರು ಎಂದು 'ಡಾನ್' ಪತ್ರಿಕೆ ವರದಿ ಮಾಡಿದೆ. ಪ್ರಧಾನಿ ಷರೀಫ್ ಅವರು ರಾಜಕೀಯ ಸ್ಥಿರತೆ ಕುರಿತಾದ ಪ್ರಶ್ನೆಗಳಿಗೆ ನೇರವಾಗಿ ಉತ್ತರಿಸಲಿಲ್ಲ. ''ಆರ್ಥಿಕ ಪ್ರಸ್ತಾಪಗಳನ್ನು ಗಂಭೀರವಾಗಿ ಪರಿಗಣಿಸುವೆ. ದೇಶದ ವಿವಿಧ ಭಾಗಗಳ ಪ್ರಮುಖ ಉದ್ಯಮಿಗಳನ್ನು ಶೀಘ್ರವೇ ಇಸ್ಲಾಮಾಬಾದ್‌ಗೆ ಆಹ್ವಾನಿಸಿ, ಅಭಿಪ್ರಾಯ ಪಡೆಯುವೆ,'' ಎಂದು ತಿಳಿಸಿದರು.

- ಭಾರತದೊಂದಿಗೆ ವಹಿವಾಟು ಆರಂಭಿಸುವಂತೆ ಪಾಕಿಸ್ತಾನದ ಪ್ರಧಾನಿಗೆ ದುಂಬಾಲು ಬಿದ್ದ ಅಲ್ಲಿನ ಉದ್ಯಮಿಗಳು
- ಜೈಲಿನಲ್ಲಿರುವ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಜೊತೆಗಿನ ಸಂಬಂಧ ಸುಧಾರಿಸುವಂತೆಯೂ ಪ್ರಧಾನಿಗೆ ಮನವಿ
- ಇದೇ ವೇಳೆ ಬಾಂಗ್ಲಾದೇಶದ ಆರ್ಥಿಕ ಪ್ರಗತಿಯನ್ನು ಶ್ಲಾಘಿಸಿದ ಪಾಕ್ ಪ್ರಧಾನಿ ಶೆಹಬಾಜ್ ಷರೀಫ್



### ಆರ್ಥಿಕ ಪ್ರಗತಿಗೆ ಶ್ಲಾಘನೆ

ಭಾರತದೊಂದಿಗೆ ವಹಿವಾಟು ಆರಂಭಿಸುವಂತೆ ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್‌ಗೆ ಅಲ್ಲಿನ ಉದ್ಯಮಿಗಳು ದುಂಬಾಲು ಬಿದ್ದಿದ್ದಾರೆ. ಆರ್ಥಿಕ ಸಮಸ್ಯೆಗಳನ್ನು ನಿವಾರಿಸಬೇಕಾದರೆ ರಾಜಕೀಯ ಸ್ಥಿರತೆಯತ್ತ ಗಮನಹರಿಸಬೇಕು ಎಂದು ಸಲಹೆ ನೀಡಿದ್ದು, ಜೈಲಿನಲ್ಲಿರುವ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಜೊತೆಗಿನ ಸಂಬಂಧ ಸುಧಾರಿಸುವಂತೆಯೂ ಪ್ರಧಾನಿಗೆ ಮನವಿ ಮಾಡಿದ್ದಾರೆ. ಷರೀಶ್ ಇದೇ ವೇಳೆ ಬಾಂಗ್ಲಾದೇಶದ ಆರ್ಥಿಕ ಪ್ರಗತಿಯನ್ನು ಶ್ಲಾಘಿಸಿದ್ದಾರೆ.

**ಬಾಂಗ್ಲಾದೇಶವನ್ನು ನೋಡಿದಾಗ ನಾಚಿಕೆಯಾಗುತ್ತದೆ:** ಉದ್ಯಮಿಗಳ ಜೊತೆಗಿನ ಸಂವಾದದಲ್ಲಿ ಶೆಹಬಾಜ್ ಷರೀಫ್ ಬಾಂಗ್ಲಾದೇಶದ ಆರ್ಥಿಕ ಪ್ರಗತಿಯ ಬಗ್ಗೆಯೂ ಪ್ರತಿಕ್ರಿಯಿಸಿ, ಹಿಂದೆ 'ಪೂರ್ವ ಪಾಕಿಸ್ತಾನ' ಎಂದು ಇದನ್ನು ಕರೆಯಲಾಗುತ್ತಿತ್ತು. ಒಂದು ಕಾಲದಲ್ಲಿ ಪಶ್ಚಿಮ ಪಾಕಿಸ್ತಾನದ ಮೇಲೆ ಬಾಂಗ್ಲಾವನ್ನು ಹೊರೆ ಎಂದು ಪರಿಗಣಿಸಲಾಗಿತ್ತು. ಈಗ ಅದೇ ದೇಶ ತಮ್ಮ ದೇಶಕ್ಕಿಂತ ಉತ್ತಮ ಆರ್ಥಿಕ ಸ್ಥಿರತೆ ಸಾಧಿಸಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಲ್ಲದೆ, ಪಾಕಿಸ್ತಾನದ ಆರ್ಥಿಕತೆ ಬಗ್ಗೆ ವಿಷಾದ ವ್ಯಕ್ತಪಡಿಸಿದರು. ನಾನು ಚಿಕ್ಕವನಾಗಿದ್ದಾಗ ... ಅದು (ಬಾಂಗ್ಲಾದೇಶ) ನಮ್ಮ ಹೆಗಲ ಮೇಲಿನ ಹೊರೆ ಎಂದು ನಮಗೆ ಹೇಳುತ್ತಿದ್ದರು... ಇಂದು ನಿಮಗೆಲ್ಲರಿಗೂ ತಿಳಿದಿದೆ. ಆ 'ಹೊರೆ' ಎಲ್ಲಿ ತಲುಪಿದೆ (ಆರ್ಥಿಕ ಬೆಳವಣಿಗೆಯ ವಿಷಯದಲ್ಲಿ) ಎಂದು,'' ಎಂಬುದಾಗಿ ಪಾಕಿಸ್ತಾನ ಪ್ರಧಾನಿ ಹೇಳಿದ್ದಾರೆ. ''ಮತ್ತು ನಾವು ಅವರ ಕಡೆಗೆ ನೋಡಿದಾಗ ನಮಗೆ ನಾಚಿಕೆಯಾಗುತ್ತದೆ,'' ಎಂದು ತಿಳಿಸಿದ್ದಾರೆ.

# ಬೌದ್ಧಿಕ ಆಸ್ತಿ ರಕ್ಷಣೆಯಲ್ಲಿ ಭಾರತ ಮುಂದಿದೆ : ಅಮೆರಿಕ

**ವಾಷಿಂಗ್ಟನ್:** ಬೌದ್ಧಿಕ ಆಸ್ತಿ ರಕ್ಷಣೆ ಮತ್ತು ಜಾರಿಗೆ ಸಂಬಂಧಿಸಿದಂತೆ ಭಾರತವು ವಿಶ್ವದ ಅತ್ಯಂತ ಸವಾಲಿನ ಪ್ರಮುಖ ಆರ್ಥಿಕತೆಗಳಲ್ಲಿ ಒಂದಾಗಿದೆ ಎಂದು ಅಮೆರಿಕ ಹೇಳಿದೆ.

ಭಾರತದ ಈ ನಿರ್ಧಾರ ದೇಶವನ್ನು ಆದ್ಯತೆಯ ವೀಕ್ಷಣೆ ಪಟ್ಟಿಯಲ್ಲಿ ಇರಿಸಿದೆ ಎಂದು ಬಿಡೆನ್ ಆಡಳಿತ ಅಭಿಪ್ರಾಯಪಟ್ಟಿದೆ. ಅರ್ಜೆಂಟೀನಾ, ಚಿಲಿ, ಚೀನಾ, ಇಂಡೋನೇಷ್ಯಾ, ರಷ್ಯಾ ಮತ್ತು ವೆನೆ ಜುವೆಲಾ ಜೊತೆಗೆ ಭಾರತವನ್ನು ಅಮೆರಿಕ ವ್ಯಾಪಾರ ಪ್ರತಿನಿಧಿಯು ಬಿಡುಗಡೆ ಮಾಡಿದ ಯುಎಸ್ ವ್ಯಾಪಾರ ಪಾಲುದಾರರ ರಕ್ಷಣೆ ಮತ್ತು ಬೌದ್ಧಿಕ ಆಸ್ತಿ ಹಕ್ಕುಗಳ ಸಮರ್ಪಕತೆ ಮತ್ತು ಪರಿಣಾಮಕಾರಿತ್ವದ ಕುರಿತು 2024 ರ ವಿಶೇಷ 301 ವರದಿಯಲ್ಲಿ ಈ ವಿಷಯ ತಿಳಿಸಲಾಗಿದೆ. ಯುಎಸ್-ಇಂಡಿಯಾ ಟ್ರೇಡ್ ಪಾಲಿಸಿ ಫೋರಮ್ ಅಡಿಯಲ್ಲಿ ಟ್ರೇಡ್ ಮಾರ್ಕ್ ಉಲ್ಲಂಘನೆಯ ತನಿಖೆಗಳು ಮತ್ತು ಪೂರ್ವ- ಅನುದಾನದ ವಿರೋಧ ಪ್ರಕ್ರಿಯೆಗಳೊಂದಿಗೆ ಕೆಲವು ಸಮಸ್ಯೆಗಳನ್ನು ಪರಿಹರಿಸುವಲ್ಲಿ ಪ್ರಗತಿ ಕಂಡುಬಂದಿದೆ, ಹಲವಾರು ದೀರ್ಘಕಾಲದ ಕಳವಳಗಳು ಉಳಿದಿವೆ ಎಂದು ವರದಿ ಹೇಳಿದೆ.

> ವಿಶೇಷ 301 ವರದಿಯಲ್ಲಿ ಹೈಲೈಟ್ ಮಾಡಲಾದ ಹಲವು ಸಮಸ್ಯೆಗಳು ನಮ ಮಿತ್ರರಾಷ್ಟ್ರಗಳು ಮತ್ತು ಪಾಲುದಾರರಿಂದ ಸಹಯೋಗದ ಪ್ರಯತ್ನಗಳನ್ನು ಬಯಸುತ್ತವೆ
>
> -ಕ್ಯಾಥರೀನ್ ತೈ
> ಅಮೆರಿಕ ವ್ಯಾಪಾರ ಪ್ರತಿನಿಧಿ

ಇವುಗಳಲ್ಲಿ ಅಸಮರ್ಪಕ ಐಪಿ ಜಾರಿ, ಆನ್‌ಲೈನ್ ಪೈರಸಿಯ ಹೆಚ್ಚಿನ ದರಗಳು, ವ್ಯಾಪಕವಾದ ಟ್ರೇಡ್‌ಮಾರ್ಕ್ ವಿರೋಧ ಬ್ಯಾಕ್‌ಲಾಗ್ ಮತ್ತು ವ್ಯಾಪಾರ ರಹಸ್ಯಗಳನ್ನು ರಕ್ಷಿಸಲು ಸಾಕಷ್ಟು ಕಾನೂನು ವಿಧಾನಗಳು ಸೇರಿದಂತೆ.

ಇತರ ವಿಷಯಗಳ ಜೊತೆಗೆ ಭಾರತವು ಇನ್ನೂ ಕೆಲವು ಇಂಟರ್ನೆಟ್ ಒಪ್ಪಂದಗಳನ್ನು ಸಂಪೂರ್ಣವಾಗಿ ಕಾರ್ಯಗತಗೊಳಿಸಬೇಕಾಗಿದೆ ಮತ್ತು ಹಕ್ಕುಸ್ವಾಮ್ಯ ಶಾಸನಬದ್ಧ ಪರವಾನಗಿಗಳು ಸಂವಾದಾತಕ ಪ್ರಸರಣಗಳಿಗೆ ವಿಸ್ತರಿಸುವುದಿಲ್ಲ ಎಂದು ಖಚಿತಪಡಿಸಿಕೊಳ್ಳಬೇಕಿದೆ ಎಂದಿದೆ.

# ಅಮೆರಿಕದಲ್ಲಿ ಎನ್‌ಕೌಂಟರ್‌ಗೆ ಭಾರತೀಯ ಬಲಿ





**ನ್ಯೂಯಾರ್ಕ್:** ಮಹಿಳೆಯೊಬ್ಬರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿ ಪರಾರಿಯಾಗಿದ್ದ ಭಾರತೀಯ ಮೂಲದ ವ್ಯಕ್ತಿಯೊಬ್ಬರನ್ನು ಅಮೆರಿಕದ ಸ್ಯಾನ್ ಆಂಟೋನಿಯೊದಲ್ಲಿ ಪೊಲೀಸರು ಗುಂಡು ಹಾರಿಸಿ ಕೊಂದಿದ್ದಾರೆ. ಮೂಲತಃ ಉತ್ತರಪ್ರದೇಶದವರಾಗಿದ್ದ ಅಮೆರಿಕ ಪ್ರಜೆ ಸಚಿನ್ ಸಾಹೂ ಪೊಲೀಸರ ಗುಂಡಿಗೆ ಬಲಿಯಾದ ವ್ಯಕ್ತಿ ಎಂದು ಗುರುತಿಸಲಾಗಿದೆ. ಕೆಲ ದಿನಗಳ ಹಿಂದೆ ಸಾಹೂ ತನ್ನ ರೂಮ್ ಮೇಟ್ ಆಗಿದ್ದ ಮಹಿಳೆಯೊಬ್ಬರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿ ಪರಾರಿಯಾಗಿದ್ದ ಈ ಕುರಿತಂತೆ ಪ್ರಕರಣ ದಾಖಲಿಸಿಕೊಂಡು ಆರೋಪಿ ಪತ್ತೆಗೆ ಪೊಲೀಸರು ಕಾರ್ಯಾಚರಣೆ ಕೈಗೊಂಡಿದ್ದರು.

ನಿನ್ನೆ ಆತ ಮತ್ತೆ ತನ್ನ ಮನೆಗೆ ಬಂದಿದ್ದ ಅವನ ಬರುವಿಕೆ ಬಗ್ಗೆ ನೆರೆಹೊರೆಯವರು ಪೊಲೀಸರಿಗೆ ಸುದ್ದಿ ಮುಟ್ಟಿಸಿದ್ದರು. ಸ್ಥಳಕ್ಕೆ ಬಂದ ಪೊಲೀಸರನ್ನು ಕಂಡು ವಾಹನದಲ್ಲಿ ಪರಾರಿಯಾಗಲು ಯತ್ನಿಸಿದ ಸಾಹೂ ತನ್ನನ್ನು ತಡೆಯಲು ಬಂದ ಪೊಲೀಸರ ಮೇಲೆ ವಾಹನ ಹರಿಸಿ ತಪ್ಪಿಸಿಕೊಳ್ಳಲು ಯತ್ನಿಸಿದಾಗ ಪೊಲೀಸರು ಆತನ ಮೇಲೆ ಗುಂಡು ಹಾರಿಸಿ ಹತ್ಯೆ ಮಾಡಿದ್ದಾರೆ.

ಘಟನೆಯಲ್ಲಿ ಒಬ್ಬ ಅಧಿಕಾರಿಗೆ ಗಾಯವಾಗಿದ್ದು ಚಿಕಿತ್ಸೆಗಾಗಿ ಸ್ಥಳೀಯ ಆಸ್ಪತ್ರೆಗೆ ಸಾಗಿಸಲಾಯಿತು ಮತ್ತು ಇತರ ಅಧಿಕಾರಿಗೆ ಸ್ಥಳದಲ್ಲೇ ಗಾಯಗಳಿಗೆ ಚಿಕಿತ್ಸೆ ನೀಡಲಾಯಿತು. ಘಟನೆ ಯಲ್ಲಿ ಬೇರೆ ಯಾರಿಗೂ ಗಾಯಗಳಾಗಿಲ್ಲ. ಈ ತನಿಖೆ ಮುಂದುವರಿದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಹೊಟೇಲ್‌ಗೆ ಬೆಂಕಿ ಬಿದ್ದು ಆರು ಮಂದಿ ಸಾವು



**ಪಾಟ್ನಾ:** ಪಾಟ್ನಾ ಜಂಕ್ಷನ್ ಬಳಿಯ ಹೋಟೆಲ್‌ನಲ್ಲಿ ಸಂಭವಿಸಿದ ಭಾರಿ ಬೆಂಕಿಯಲ್ಲಿ ಮೂವರು ಮಹಿಳೆಯರು ಸೇರಿದಂತೆ ಆರು ಮಂದಿ ಸಾವನ್ನಪ್ಪಿದ್ದಾರೆ ಮತ್ತು 15 ಮಂದಿ ಗಾಯಗೊಂಡಿದ್ದಾರೆ. ಸಸಾರಾಮ್‌ನಲ್ಲಿ ನಡೆದ ಮತ್ತೊಂದು ಘಟನೆಯಲ್ಲಿ, ಮಹಿಳೆ ಮತ್ತು ಆಕೆಯ 12 ವರ್ಷದ ಮೊಮ್ಮಗ ಸಂಜೆ ಅವರ ಗುಡಿಸಲಿಗೆ ಬೆಂಕಿ ಹಚ್ಚಿದಾಗ ಸುಟ್ಟು ಕರಕಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬಿಹಾರದ ರಾಜ್ಯಪಾಲ ರಾಜೇಂದ್ರ ವಿ ಅರ್ಲೇಕರ್ ಮತ್ತು ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು ಪಾಟ್ನಾ ಘಟನೆಯಲ್ಲಿ ಜೀವಹಾನಿಗೆ ಸಂತಾಪ ವ್ಯಕ್ತಪಡಿಸಿದ್ದಾರೆ.ಪಾಟ್ನಾ ಜಂಕ್ಷನ್ ಬಳಿಯ ಬಹುಮಹಡಿ ಕಟ್ಟಡದಲ್ಲಿ ನಡೆದ ದುರಂತ ಘಟನೆ ಅತ್ಯಂತ ದುಃಖಕರವಾಗಿದೆ. ಈ ಘಟನೆಯಲ್ಲಿ ಮೃತಪಟ್ಟವರ ಕುಟುಂಬಗಳಿಗೆ ನನ್ನ ಆಳವಾದ ಸಂತಾಪಗಳು. ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ನಾನು ಬಯಸುತ್ತೇನೆ ಎಂದು ರಾಜ್ಯಪಾಲರು ಹೇಳಿಕೆಯಲ್ಲಿ ತಿಳಿಸಿದೆ. ಸಸಾರಾಮ್ ಘಟನೆಯಲ್ಲಿ ದಿನಾರಾ ಪೊಲೀಸ್ ಠಾಣೆ ವ್ಯಾಪ್ತಿಯ ಡೋಂಗ್ರಾ ಟೋಲಾದಲ್ಲಿ ಅವರ ಗುಡಿಸಲಿಗೆ ಬೆಂಕಿ ಹೊತ್ತಿಕೊಂಡಾಗ ಮಹಿಳೆ ಮತ್ತು ಅವರ 12 ವರ್ಷದ ಮೊಮ್ಮಗ ಸುಟ್ಟು ಕರಕಲಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮೃತರನ್ನು ರಾಜಮುನಿ ಕುನ್ವರ್ (70) ಮತ್ತು ಆಕೆಯ ಮೊಮ್ಮಗ ಅಜೀತ್ ಕುಮಾರ್ ಎಂದು ಗುರುತಿಸಲಾಗಿದೆ. ಬೆಂಕಿಗೆ ಕಾರಣ ತಿಳಿದುಬಂದಿಲ್ಲ ಎಂದು ದಿನಾರ ಎಸ್‌ಎಚ್‌ಒ ವಿನಯ್‌ಕುಮಾರ್ ತಿಳಿಸಿದ್ದಾರೆ.

# ಆಸ್ಟ್ರೇಲಿಯಾ ಪತ್ರಕರ್ತರ ವೀಸಾ ನಿರಾಕರಣೆ ಬಗ್ಗೆ ಪ್ರತಿಕ್ರಿಯಿಸಲು ನಕಾರ



**ವಾಷಿಂಗ್ಟನ್:** ಭಾರತವು ಆಸ್ಟ್ರೇಲಿಯಾದ ಪತ್ರ ಕರ್ತರ ವೀಸಾ ನವೀಕರಣ ಮಾಡಿಲ್ಲ ಎಂಬ ಆರೋಪದ ಬಗ್ಗೆ ಪ್ರತಿಕ್ರಿಯಿಸಲು ಅಮೆರಿಕವು ನಿರಾಕರಿಸಿದ್ದು, ನವದೆಹಲಿ ತನ್ನ ವೀಸಾ ನೀತಿಯ ಬಗ್ಗೆ ಮಾತನಾಡಬಹುದು ಎಂದು ಹೇಳಿದೆ. ಆಸ್ಟ್ರೇಲಿಯನ್ ಬ್ರಾಡ್ ಕಾಸ್ಟಿಂಗ್ ಕಾರ್ಪೊರೇಷನ್‌ನ (ಎಬಿಸಿ) ದಕ್ಷಿಣ ಏಷ್ಯಾ ಬ್ಯೂರೋ ಮುಖ್ಯಸ್ಥ ಅವನಿ ಡಯಾಸ್ ಅವರು ಏಪ್ರಿಲ್ 19 ರಂದು ಭಾರತವನ್ನು ತೊರೆದರು, ಅವರ ವರದಿ ಗಳಿಂದಾಗಿ ಭಾರತ ಸರ್ಕಾರವು ತನ್ನ ವೀಸಾ ವಿಸ್ತರಣೆಯನ್ನು ನಿರಾಕರಿಸಿದೆ ಎಂದು ಅವರು ಆರೋಪಿಸಿದ್ದರು.

ಆಸ್ಟ್ರೇಲಿಯನ್ ಸರ್ಕಾರದ ಹಸ್ತಕ್ಷೇಪದ ನಂತರ, ನಾನು ಕೇವಲ ಎರಡು ತಿಂಗಳ ವಿಸ್ತರಣೆಯನ್ನು ಪಡೆದುಕೊಂಡಿದ್ದೇನೆ ನನ್ನ ಹಾರಾಟಕ್ಕೆ 24 ಗಂಟೆಗಳ ಮೊದಲು ಎಂದು ಅವರು ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿ ದ್ದಾರೆ. ಆರೋಪಗಳಿಗೆ ಪ್ರತಿಕ್ರಿಯಿಸಿದ ವಿದೇಶಾಂಗ ಇಲಾಖೆಯ ಉಪ ವಕ್ತಾರ ವೇದಾಂತ್ ಪಟೇಲ್ ಅವರು ಹೀಗೆ ಹೇಳಿದರು ನೋಡಿ, ಭಾರತ ಸರ್ಕಾರವು ತನ್ನದೇ ಆದ ವೀಸಾ ನೀತಿಯ ಬಗ್ಗೆ ಮಾತನಾಡಬಹುದು. ನಾನು ಇಲ್ಲಿಂದ ಅಭಿಪ್ರಾಯ ಪಡುವ ವಿಷಯವಲ್ಲ ಎಂದಿದ್ದಾರೆ. ವಿಶಾಲವಾಗಿ, ಪ್ರಜಾಪ್ರಭುತ್ವದ ರಚನೆಯಲ್ಲಿ ಮುಕ್ತ ಪತ್ರಿಕಾ ವಹಿಸುವ ಅವಿಭಾಜ್ಯ ಪಾತ್ರದ ಬಗ್ಗೆ ನಾವು ಪ್ರಪಂಚದಾದ್ಯಂತದ ದೇಶಗಳೊಂದಿಗೆ ಸ್ಪಷ್ಟವಾಗಿರುತ್ತೇವೆ. ಅದಕ್ಕಾಗಿಯೇ ನಾವು ಇಲ್ಲಿಗೆ ಬಂದು ನಿಯಮಿತವಾಗಿ ಪ್ರಶ್ನೆಗಳನ್ನು ಕೇಳುತ್ತೇವೆ. ಆದರೆ ನಾನು ಭಾರತದ ಅಧಿಕಾರಿಗಳಿಗೆ ಮಾತನಾಡಲು ಅವಕಾಶ ನೀಡುತ್ತೇನೆ ಎಂದು ಪಟೇಲ್ ಸುದ್ದಿಗೋಷ್ಠಿಯಲ್ಲಿ ಸುದ್ದಿಗಾರರಿಗೆ ತಿಳಿಸಿದರು.

> ಭಾರತೀಯ ಸಚಿವಾಲಯದ ನಿರ್ದೇಶನದಿಂದಾಗಿ ನನ್ನ ಚುನಾವಣಾ ಮಾನ್ಯತೆ ಬರುವುದಿಲ್ಲ ಎಂದು ನಮಗೆ ತಿಳಿಸಲಾಯಿತು. ನಾವು ಮೋದಿ ಪ್ರಜಾಪ್ರಭುತ್ವದ ತಾಯಿ ಎಂದು ಕರೆಯುವ ರಾಷ್ಟ್ರೀಯ ಚುನಾವಣೆಯಲ್ಲಿ ಮತದಾನದ ಮೊದಲ ದಿನವೇ ದೇಶ ಬಿಡುತ್ತಿದ್ದೇನೆ
>
> -ವೇದಾಂತ್ ಪಟೇಲ್
> ಉಪ ವಕ್ತಾರ

# ಪ್ಯಾಲೇಸ್ತಾನ್ ಪರ ಪ್ರತಿಭಟನೆಯಲ್ಲಿ ಪಾಲ್ಗೊಂಡ ಭಾರತೀಯ ಮೂಲದ ವಿದ್ಯಾರ್ಥಿನಿ ಬಂಧನ



**ವಾಷಿಂಗ್ಟನ್:** ಪ್ಯಾಲೇಸ್ತಾನ್ ಪರ ಪ್ರತಿಭಟನೆಯಲ್ಲಿ ಪಾಲ್ಗೊಂಡ ಅಮೆರಿಕದ ಪ್ರತಿಷ್ಠಿತ ಪ್ರಿನ್ಸ್‌ಟನ್ ವಿವಿಯಲ್ಲಿ ವ್ಯಾಸಂಗ ಮಾಡುತ್ತಿರುವ ಭಾರತೀಯ ಮೂಲದ ವಿದ್ಯಾರ್ಥಿನಿಯೊಬ್ಬರನ್ನು ಬಂಧಿಸಲಾಗಿದೆ. ವಿಶ್ವವಿದ್ಯಾನಿಲಯದ ಅಂಗಳದಲ್ಲಿ ಶಿಬಿರಕ್ಕಾಗಿ ಪ್ರತಿಭಟನಾಕಾರರು ಟೆಂಟ್‌ಗಳನ್ನು ಸ್ಥಾಪಿಸಿದ ನಂತರ ತಮಿಳುನಾಡು ಮೂಲದ ಅಚಿಂತ್ಯ ಶಿವಲಿಂಗನ್ ಮತ್ತು ಹಸನ್ ಸೈಯದ್ ಅವರನ್ನು ಬಂಧಿಸಲಾಗಿದೆ. ಇಬ್ಬರು ಪದವೀಧರ ವಿದ್ಯಾರ್ಥಿಗಳನ್ನು ಅತಿಕ್ರಮ ಪ್ರವೇಶಕ್ಕಾಗಿ ಬಂಧಿಸಲಾಗಿದೆ ಮತ್ತು ತಕ್ಷಣ ಕ್ಯಾಂಪಸ್‌ನಿಂದ ನಿರ್ಬಂಧಿಸಲಾಗಿದೆ ಎಂದು ವಿಶ್ವವಿದ್ಯಾಲಯದ ವಕ್ತಾರ ಜೆನ್ನಿಫರ್ ಮೊರಿಲ್ ಹೇಳಿದ್ದಾರೆ. ಕ್ಯಾಂಪಸ್‌ನಲ್ಲಿ ಟೆಂಟ್‌ಗಳನ್ನು ಸ್ಥಾಪಿಸುವುದು ವಿಶ್ವವಿದ್ಯಾಲಯದ ನೀತಿಯನ್ನು ಉಲ್ಲಂಘಿಸಿದೆ ಎಂದು ಅವರು ಹೇಳಿದರು. ವಿದ್ಯಾರ್ಥಿಗಳಿಗೆ ಚಟುವಟಿಕೆಯನ್ನು ನಿಲ್ಲಿಸಲು ಮತ್ತು ಪ್ರದೇಶವನ್ನು ತೊರೆಯುವಂತೆ ಸಾರ್ವಜನಿಕ ಸುರಕ್ಷತಾ ಇಲಾಖೆಯಿಂದ ಪುನರಾವರ್ತಿತ ಎಚ್ಚರಿಕೆ ಗಳನ್ನು ನೀಡಲಾಯಿತು ಮತ್ತು ಅವರು ಈಗ ಶಿಸ್ತು ಕ್ರಮವನ್ನು ಎದುರಿಸುತ್ತಿದ್ದಾರೆ ಎಂದು ಅವರು ಹೇಳಿದರು. ಅವರ ಬಂಧನದ ನಂತರ, ಇತರ ಪ್ರತಿಭಟನಾಕಾರರು ತಮ ಕ್ಯಾಂಪಿಂಗ್ ಗೇರ್‌ಗಳನ್ನು ಸ್ವಯಂಪ್ರೇರಣೆಯಿಂದ ಪ್ಯಾಕ್ ಮಾಡಿ ಪ್ರದರ್ಶನವನ್ನು ಮುಂದುವರೆಸಿದರು.

ಆದಾಗ್ಯೂ, ವಿಶ್ವವಿದ್ಯಾಲಯವು ಇದನ್ನು ವಿರೋಧಿಸಿತು ಮತ್ತು ಅಧಿಕಾರಿಗಳು ಯಾವುದೇ ಬಲವನ್ನು ಬಳಸಲಿಲ್ಲ ಮತ್ತು ಯಾವುದೇ ಪ್ರತಿರೋಧವಿಲ್ಲದೆ ಬಂಧಿಸಲಾಯಿತು ಎಂದು ಹೇಳಿದರು. ಇಸ್ರೇಲಿ ಮಿಲಿಟರಿ ಕಾರ್ಯಾಚರಣೆಯಿಂದಾಗಿ ಗಾಜಾ ಸಾವುಗಳ ವಿರುದ್ಧ ಪ್ರದರ್ಶಿಸಲು ಸಾವಿರಾರು ವಿದ್ಯಾರ್ಥಿಗಳು ತಮ್ಮ ಕ್ಯಾಂಪಸ್‌ಗಳನ್ನು ಹೊಡೆದಿದ್ದರಿಂದ ಪ್ಯಾಲೆಸ್ತಾನ್ ಪರ ಪ್ರತಿಭಟನೆಗಳು ಯುಎಸ್ ಉನ್ನತ ವಿಶ್ವವಿದ್ಯಾಲಯಗಳನ್ನು ಬೆಚ್ಚಿಬೀಳಿಸಿದೆ.

> ಪ್ರಿನ್ಸ್‌ಟನ್ ವಿದ್ಯಾರ್ಥಿಗಳು, ಅಧ್ಯಾಪಕರು ಮತ್ತು ಸಮುದಾಯದ ಸದಸ್ಯರು ಮತ್ತು ಹೊರಗಿನವರೂ ಸಹ ಪ್ರದರ್ಶನದ ಭಾಗವಾಗಿದ್ದರು ಎಂದು ವರದಿಯು ಪ್ರತಿಭಟನೆಯ ಸಂಘಟಕರನ್ನು ಉಲ್ಲೇಖಿಸಿದೆ. ಉರ್ವಿ ಎಂದು ಗುರುತಿಸಲು ಆಯ್ಕೆ ಮಾಡಿದ ವಿದ್ಯಾರ್ಥಿಯೊಬ್ಬರು ಬಂಧನಗಳನ್ನು ಹಿಂಸಾತ್ಮಕ ಎಂದು ಕರೆದರು, ಇದರಲ್ಲಿ ವಿದ್ಯಾರ್ಥಿಗಳು ತಮ ಮಣಿಕಟ್ಟಿನ ಸುತ್ತ ಜಿಪ್ ಕಟ್ಟಿರುವುದು ಸೇರಿದೆ.

# ಏ.29ಕ್ಕೆ ಮೋದಿ ಅನರ್ಹತೆ ಕೋರಿದ ಅರ್ಜಿ ವಿಚಾರಣೆ




**ನವದೆಹಲಿ:** ಹಿಂದೂ-ಸಿಖ್ ದೇವರುಗಳು, ಆರಾಧನಾ ಸ್ಥಳಗಳ ಹೆಸರಿನಲ್ಲಿ ಬಿಜೆಪಿಗೆ ಮತ ಕೇಳಿದ ಆರೋಪದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಆರು ವರ್ಷಗಳ ಕಾಲ ಅನರ್ಹ ಗೊಳಿಸುವಂತೆ ಕೋರಿ ಸಲ್ಲಿಸಲಾದ ಅರ್ಜಿಯನ್ನು ದೆಹಲಿ ಹೈಕೋರ್ಟ್ . ಏ.29ರಂದು ವಿಚಾರಣೆ ನಡೆಸಲಿದೆ.

ವಕೀಲ ಆನಂದ್.ಎಸ್ ಜೊಂಧಳೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದು, ಪ್ರಜಾಪ್ರತಿನಿಧಿ ಕಾಯ್ದೆಯಡಿ ಆರು ವರ್ಷಗಳ ಕಾಲ ಪ್ರಧಾನಿ ನರೇಂದ್ರಮೋದಿ ಅವರನ್ನು ಚುನಾವಣೆಯಿಂದ ಅನರ್ಹಗೊಳಿಸುವಂತೆ ಭಾರತದ ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡುವಂತೆ ಮನವಿ ಮಾಡಿದ್ದಾರೆ. ಪ್ರಧಾನಿಯವರ ಭಾಷಣಗಳು ಮತದಾರರಲ್ಲಿ ಜಾತಿ ಮತ್ತು ಧರ್ಮದ ಆಧಾರದ ಮೇಲೆ ದ್ವೇಷವನ್ನು ಬಿತ್ತುವ ಸಾಮರ್ಥ್ಯ ಹೊಂದಿವೆ. ಪ್ರಧಾನಿ ಹೇಳಿಕೆಗಳು ಮಾದರಿ ನೀತಿ ಸಂಹಿತೆ ಉಲ್ಲಂಘಿಸುತ್ತವೆ. ಭಾರತೀಯ ದಂಡ ಸಂಹಿತೆಯ ಸೆಕ್ಷನ್ 153 ಎ ಅಡಿ ಮೋದಿ ವಿರುದ್ಧ ಎಫ್‌ಐಆರ್ ದಾಖಲಿಸಲು ಮತ್ತು ಪ್ರಜಾಪ್ರತಿನಿಧಿ ಕಾ ಯಿದೆ, 1951ರಡಿ ಆರು ವರ್ಷಗಳ ಕಾಲ ಚುನಾ ವಣೆಯಿಂದ ಅವರನ್ನು ಅನರ್ಹಗೊಳಿಸುವಂತೆ ಆಯೋಗಕ್ಕೆ ಮನವಿ ಮಾಡಿದ್ದಾರೆ. ಲೋಕಸಭೆ ಚುನಾವಣೆಯ ಮತದಾನದ ದಿನಾಂಕವು ಅತ್ಯಂತ ವೇಗವಾಗಿ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಚುನಾವಣಾ ಆಯೋಗದಿಂದ ನ್ಯಾಯಯುತ ಕ್ರಮಕ್ಕೆ ತಕ್ಷಣ ನಿರ್ದೇಶಿಸಲು ಹೈಕೋರ್ಟ್‌ಗೆ ಮನವಿ ಮಾಡಿದ್ದಾರೆ.

### ಆರಾಧನಾ ಸ್ಥಳಗಳ ಹೆಸರಿನಲ್ಲಿ ಮತಗಳನ್ನು ಕೇಳಿದ್ದಾರೆ

ಏ.9ರಂದು ಉತ್ತರಪ್ರದೇಶದಲ್ಲಿ ಪ್ರಧಾನಿ ಮೋದಿ ಮಾಡಿದ ಭಾಷಣದ ವಿರುದ್ಧ ಅರ್ಜಿದಾರರು ಆಕ್ಷೇಪ ವ್ಯಕ್ತಪಡಿಸಿದ್ದು, ಪ್ರಧಾನ ಮಂತ್ರಿಗಳು ಹಿಂದೂ ಮತ್ತು ಸಿಖ್ ದೇವರುಗಳು ಮತ್ತು ಅವರ ಆರಾಧನಾ ಸ್ಥಳಗಳ ಹೆಸರಿನಲ್ಲಿ ಮತಗಳನ್ನು ಕೇಳಿದ್ದಾರೆ. ಮಾತ್ರವಲ್ಲದೆ, ವಿ ರೋಧಿ ರಾಜಕೀಯ ಪಕ್ಷಗಳು ಮುಸ್ಲಿಮರ ಪರವಾದ ಒಲುವು ಹೊಂದಿದ್ದಾರೆ ಎಂದಿದ್ದಾರೆ. ರಾಮಮಂದಿರ ನಿರ್ಮಾಣ, ಕರ್ತಾರ್‌ಪುರ ಸಾಹಿಬ್ ಕಾರಿಡಾರ್ ಅಭಿವೃದ್ಧಿ ಹಾಗೂ ಅಫ್ಘಾನಿ ಸ್ತಾನದಿಂದ ಗುರು ಗ್ರಂಥ ಸಾಹಿಬ್‌ನ ಪ್ರತಿಗಳನ್ನು ವಾಪಸ್ ತಂದಿರುವುದಾಗಿ ಪ್ರಧಾನಿ ಮೋದಿ ಉಲ್ಲೇಖಿಸಿದ್ದಾರೆ.

# ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡುವಂತೆ ಪ್ರಧಾನಿ ಮೋದಿ ಸಂದೇಶ



**ನವದೆಹಲಿ:** ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡುವಂತೆ ಪ್ರಧಾನಿ ನರೇಂದ್ರ ಮೋದಿ ಮತದಾರರಲ್ಲಿ ಮನವಿ ಮಾಡಿದ್ದಾರೆ. ಕರ್ನಾಟಕದ 14 ಕ್ಷೇತ್ರಗಳಲ್ಲಿಯೂ ಮತದಾನ ನಡೆಯುತ್ತಿರುವುದರಿಂದ ಕನ್ನಡದಲ್ಲಿಯೇ ಸಂದೇಶ ಪ್ರಕಟಿಸಿ ಮೋದಿ ಮನವಿ ಮಾಡಿದ್ದಾರೆ.

ಲೋಕಸಭೆ ಚುನಾವಣೆಯ ಎರಡನೇ ಹಂತದಲ್ಲಿ ಮತದಾನ ನಡೆಯುತ್ತಿರುವ ಕ್ಷೇತ್ರಗಳಲ್ಲಿ ಪ್ರತಿಯೊಬ್ಬರೂ ದಾಖಲೆ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ ಮಾಡು ತ್ತೇನೆ. ಹೆಚ್ಚಿನ ಪ್ರಮಾಣದ ಮತದಾನವು ನಮ್ಮ ಪ್ರಜಾ ಪ್ರ ಭುತ್ವವನ್ನು ಬಲಪಡಿಸುತ್ತದೆ. ನಮ್ಮ ಯುವ ಮತದಾರರು ಮತ್ತು ಮಹಿಳಾ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ನಾನು ವಿಶೇಷವಾಗಿ ಕೋರುತ್ತೇನೆ. ನಿಮ್ಮ ಮತ ನಿಮ್ಮ ಧ್ವನಿ ಎಂದು ಸಂದೇಶದಲ್ಲಿ ಮೋದಿ ಉಲ್ಲೇಖಿಸಿದ್ದಾರೆ.

ಮತ್ತೊಂದೆಡೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಕೂಡ ಟ್ವೀಟ್ ಮಾಡಿದ್ದು, ಲೋಕಸಭೆ ಚುನಾವಣೆಯ ಎರಡನೇ ಹಂತ ಇಂದು ಆರಂಭವಾಗುತ್ತಿದ್ದು, ತಮ್ಮ ಪ್ರಜಾಸತ್ತಾತ್ಮಕ ಹಕ್ಕನ್ನು ಪೂರ್ಣ ಉತ್ಸಾಹದಿಂದ ಚಲಾಯಿಸಲು ಮತ್ತು ಪ್ರಜಾಪ್ರಭುತ್ವವನ್ನು ಮತದಾನದ ಮೂಲಕ ಎತ್ತಿಹಿಡಿಯಲು ನಾನು ನಮ್ಮ ನಾಗರಿಕರಲ್ಲಿ, ವಿಶೇಷವಾಗಿ ಯುವಕರಲ್ಲಿ ಮನವಿ ಮಾಡುತ್ತೇನೆ. ಸರ್ವತೋಮುಖ ಅಭಿವೃದ್ಧಿಗೆ ಆದ್ಯತೆ ನೀಡುವ ಮತ್ತು ವಿಕಸಿತ ಭಾರತ ಮಾಡುವ ನಮ್ಮ ಕನಸಿಗೆ ವೇಗ ನೀಡುವ ಸರ್ಕಾರವನ್ನು ಆಯ್ಕೆ ಮಾಡಲು ಎಲ್ಲಾ ಮತದಾರರಿಗೆ ಇದು ಸುವರ್ಣಾವಕಾಶವಾಗಿದೆ ಎಂದು ಹೇಳಿದ್ದಾರೆ.

# ಲೋಕಸಭಾ ಸಮರ, ಜಗತ್ತಿನ ಸಾರ್ವಕಾಲಿಕ ದುಬಾರಿ ಚುನಾವಣೆ

## ಇದುವರೆಗಿನ ದುಬಾರಿ ಚುನಾವಣೆಯಾಗುವತ್ತ ಈ ಬಾರಿ ಸಮರ, 1.35 ಲಕ್ಷ ಕೋಟಿ ರೂಪಾಯಿ ಖರ್ಚಾಗಲಿದೆ ಎಂದು ಅಂದಾಜಿಸಲಾಗಿದೆ

**ಹೊಸದಿಲ್ಲಿ :** ಚುನಾವಣಾ ತಜ್ಞರು ಅಭಿಪ್ರಾಯ ಪಡುವ ಪ್ರಕಾರ, ಈ ಬಾರಿಯ ಅಂದರೆ ಹದಿನೆಂಟನೇ ಲೋಕಸಭಾ ಚುನಾವಣೆಯು ಜಗತ್ತಿನ ಇದುವರೆಗಿನ ಅತ್ಯಂತ ದುಬಾರಿ ಚುನಾವಣೆಯಾಗಲಿದೆ. ಚುನಾವಣಾ ವೆಚ್ಚವನ್ನು ಪರಿಷ್ಕರಿಸಿದ ಮೇಲೂ ಖರ್ಚುವೆಚ್ಚ ಬಜೆಟಿಗಿಂತ ಹೆಚ್ಚಾಗಲಿದೆ. ಚುನಾವಣಾ ಅಂದಾಜು ವೆಚ್ಚವು 1.35 ಲಕ್ಷ ಕೋಟಿ ರೂಪಾಯಿಗಳನ್ನು ಮೀರುವ ಸಾಧ್ಯತೆಯಿದೆ.

ಈ ಮೊತ್ತ, 2019 ರಲ್ಲಿ ವ್ಯಯಿಸಲಾಗಿದ್ದ 60,000 ಕೋಟಿ ರೂಪಾಯಿಗಿಂತ ಎರಡು ಪಟ್ಟುಗಿಂತಲೂ ಹೆಚ್ಚು ಎಂದು ಎನ್‌ಜಿಒ ಸಂಸ್ಥೆಯಾದ ಸೆಂಟರ್ ಫಾರ್ ಮೀಡಿಯಾ ಸ್ಟಡೀಸ್ ಅಧ್ಯಕ್ಷ ಎನ್ ಭಾಸ್ಕರ ರಾವ್ ಹೇಳಿದ್ದಾರೆ. 35 ವರ್ಷಗಳಿಂದ




ಚುನಾವಣಾ ವೆಚ್ಚದ ಬಗ್ಗೆ ಅಧ್ಯಯನ ಮಾಡುತ್ತಿರುವ ಸಿಎಂಎಸ್, ಜಗತ್ತಿನಲ್ಲಿ ಇದು ಅತ್ಯಂತ ದುಬಾರಿ ಚುನಾವಣೆಯಾಗಲಿದೆ. ಚುನಾವಣೆಗೆ ಸಂಬಂಧಿಸಿದ ಎಲ್ಲಾ ಪಕ್ಷ, ಅಭ್ಯರ್ಥಿ, ಸರ್ಕಾರ ಮತ್ತು ಚುನಾವಣಾ ಆಯೋಗದ ಎಲ್ಲಾ ಖರ್ಚುಗಳನ್ನು ಆಧರಿಸಿ ಈ ಲೆಕ್ಕವನ್ನು ಅಂದಾಜಿಸಲಾಗಿದೆ ಎಂದು ಭಾಸ್ಕರ್ ರಾವ್ ಹೇಳಿದ್ದಾರೆ.

> ಹದಿನೆಂಟನೇ ಲೋಕಸಭಾ ಚುನಾವಣೆಯು ವಿಶ್ವದ ಇದುವರೆಗಿನ ಅತ್ಯಂತ ದುಬಾರಿ ಚುನಾವಣೆಯಾಗಲಿದೆ ಎಂದು ಸೆಂಟರ್ ಫಾರ್ ಮೀಡಿಯಾ ಸ್ಟಡೀಸ್ ಅಭಿಪ್ರಾಯ ಪಟ್ಟಿದೆ. ಸುಮಾರು 1.35 ಲಕ್ಷ ಕೋಟಿ ರೂಪಾಯಿ ಖರ್ಚಾಗಲಿದೆ ಎಂದು ಅಂದಾಜಿಸಲಾಗಿದೆ.

ಪ್ರತ್ಯಕ್ಷ ಮತ್ತು ಪರೋಕ್ಷ ಖರ್ಚುಗಳು 1.35 ಲಕ್ಷ ಕೋಟಿ ರೂಪಾಯಿ ಅಥವಾ ಇದಕ್ಕಿಂತ ಶೇ. ಹತ್ತರಷ್ಟು ಹೆಚ್ಚಾಗುವ ಸಾಧ್ಯತೆಯಿದೆ. ಜೊತೆಗೆ, ಈ ಬಾರಿಯ ಚುನಾವಣೆ ಪ್ರಕ್ರಿಯೆ ಮುಗಿಯಲು ಹೆಚ್ಚಿನ ದಿನಗಳು ತೆಗೆದುಕೊಳ್ಳುತ್ತಿದೆ.

ಏಪ್ರಿಲ್ 19 ರಂದು ಆರಂಭವಾಗಿರುವ ಮೊದಲ ಹಂತದ ಚುನಾವಣೆ, ಮುಗಿಯಲು ಅಂದರೆ ಏಳನೇ ಹಂತ ಜೂನ್ ಒಂದರಂದು ಮುಕ್ತಾಯಗೊಳ್ಳಲಿದೆ. ಜೂನ್ ನಾಲ್ಕರಂದು ಫಲಿತಾಂಶ ಹೊರಬೀಳಲಿದೆ. ಒಟ್ಟು 47 ದಿನಗಳ ಕಾಲ ಮತದಾನದ ಪ್ರಕ್ರಿಯೆ ಚಾಲ್ತಿಯಲ್ಲಿರಲಿದೆ.

ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟವು ಮೂರನೇ ಅವಧಿಗೆ ಅಧಿಕಾರಕ್ಕೇರಲು ಪ್ರಯತ್ನಿಸುತ್ತಿರುವುದರಿಂದ, ಪ್ರಚಾರಕ್ಕಾಗಿ ಸಾಕಷ್ಟು ಹಣವನ್ನು ವಿನಿಯೋಗಿಸುತ್ತಿದೆ. ವಿಪಕ್ಷಗಳ ಪ್ರಚಾರದ ಕಾವು ಈ ಬಾರಿ ಹೆಚ್ಚಾಗಿರುವುದರಿಂದ ಚುನಾವಣಾ ಖರ್ಚುವೆಚ್ಚ ಹೆಚ್ಚಾಗಲು ಕಾರಣ ಎಂದು ತಜ್ಞರು ಅಭಿಪ್ರಾಯ ಪಟ್ಟಿದ್ದಾರೆ. ಆರಂಭದಲ್ಲಿ ವೆಚ್ಚ ರೂ. 1.2 ಲಕ್ಷ ಕೋಟಿಯೆಂದು ಅಂದಾಜಿಸಲಾಗಿತ್ತು, ನಂತರ ಇದನ್ನು ರೂ. 1.35 ಲಕ್ಷ ಕೋಟಿಗೆ ಪರಿಷ್ಕರಿಸಲಾಯಿತು. ಚುನಾವಣಾ ಬಾಂಡ್ ಬಹಿರಂಗಪಡಿಸಲು ಸರ್ವೋಚ್ಚ ನ್ಯಾಯಾಲಯ ಸೂಚಿಸಿದ ನಂತರ ಈ ಮೊತ್ತವನ್ನೂ ಪರಿಗಣಿಸಲಾಗಿದೆ ಎಂದು ಭಾಸ್ಕರ್ ರಾವ್ ಹೇಳಿದ್ದಾರೆ. ಕೇಂದ್ರ ಚುನಾವಣಾ ಆಯೋಗ ದಿನಾಂಕವನ್ನು ಪ್ರಕಟಿಸುವ ಮೂರು ತಿಂಗಳ ಹಿಂದಿನಿಂದ ವೆಚ್ಚವನ್ನು ತೆಗೆದುಕೊಳ್ಳಲಾಗಿದೆ.

ಚುನಾವಣಾ ಬಾಂ ಡ್ ಹೊರತಾಗಿ ಹಲವು ಮೂಲಗಳಿಂದ ಪಕ್ಷ ಗಳಿಗೆ ಅನಧಿಕೃತವಾಗಿ ಹರಿದು ಬಂದಿದೆ ಎಂ ದು ಭಾಸ್ಕರ್ ರಾವ್ ಅಭಿಪ್ರಾಯ ಪಟ್ಟಿದ್ದಾರೆ. ಭಾರತದ ರಾಜಕೀಯದಲ್ಲಿ ಪಾರದರ್ಶಕತೆಯ ಕೊರತೆ ಎಂದು ಎಡಿಆರ್ ಎನ್ನುವ ಸಂಸ್ಥೆಯೂ ಅಭಿಪ್ರಾಯ ಪಟ್ಟಿತ್ತು.

## ಮಿನಿ ನ್ಯೂಸ್

### ಪೆಂಡಾಲ್‌ಗೆ ಬೆಂಕಿ ಬಿದ್ದು ಐವರ ಸಜೀವ ದಹನ

**ಪಾಟ್ನಾ:** ಮದುವೆ ಪೆಂಡಾಲ್‌ಗೆ ಬೆಂಕಿ ಬಿದ್ದು ಆರು ಮಂದಿ ಸಜೀವ ದಹನವಾಗಿರುವ ಘಟನೆ ಬಿಹಾರದ ದರ್ಭಾಂಗಾ ಜಿಲ್ಲೆಯಲ್ಲಿ ಸಂಭವಿಸಿದೆ. ಬಹೇರಾ ಪೊಲೀಸ್ ಠಾಣೆ ವ್ಯಾಪ್ತಿಯ ಅಲಿನಗರದಲ್ಲಿ ತಡರಾತ್ರಿ 11.15 ರ ಸುಮಾರಿಗೆ ಈ ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಮದುವೆ ಸಂಭ್ರಮದಲ್ಲಿ ಕೆಲ ಯುವಕರು ಪೆಂಡಾಲ್ ಸಮೀಪ ಪಟಾಕಿ ಸಿಡಿಸುತ್ತಿದ್ದಾಗ ಆಕಸಿಕವಾಗಿ ಪೆಂಡಾಲ್‌ಗೆ ಬೆಂಕಿ ತಗುಲಿತು. ಸಣ್ಣದಾಗಿ ಕಾಣಿಸಿಕೊಂಡ ಬೆಂಕಿ ಏಕಾಏಕಿ ಇಡಿ ಪೆಂಡಾಲ್‌ಗೆ ಆವರಿಸಿದಾಗ ಪೆಂಡಾಲ್ ಕೆಳಗೆ ಕುಳಿತಿದ್ದ ಆರು ಮಂದಿ ಸಜೀವದಹನವಾಗಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

ಪೆಂಡಾಲ್ ಒಳಭಾಗದಲ್ಲಿ ಇರಿಸಲಾಗಿದ್ದ ಕೆಲವು ದಹನಕಾರಿ ವಸ್ತುಗಳು ಬೆಂಕಿ ವೇಗವಾಗಿ ಹರಡಲು ಸಹಾಯ ಮಾಡಿದೆ ಎಂದು ಪೊಲೀಸರು ತಿಳಿಸಿದ್ದಾರೆ.ಮತರನ್ನು ಸುನೀಲ್ ಪಾಸ್ವಾನ್ (26), ಲೀಲಾದೇವಿ (23), ಕಾಂಚನ್ ದೇವಿ (26), ಸಿದ್ದಾಂತ್ ಕುಮಾರ್ (4), ಶಶಾಂಕ್ ಕುಮಾರ್ (3) ಮತ್ತು ಸಾಕ್ಷಿ ಕುಮಾರಿ (5) ಎಂದು ಗುರುತಿಸಲಾಗಿದೆ. ಇವರ ಜೊತೆಗೆ ಮೂರು ಹಸುಗಳೂ ಬೆಂಕಿಗೆ ಆಹುತಿಯಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ. ಅಗ್ನಿ ಅವಘಡಕ್ಕೆ ನಿಖರ ಕಾರಣ ತಿಳಿಯಲು ತನಿಖೆಗೆ ಆದೇಶಿಸಿದ್ದೇನೆ. ಈ ನಡುವೆ ವಿಪತ್ತು ನಿರ್ವಹಣಾ ಮಾರ್ಗಸೂಚಿಯಂತೆ ಸಂತ್ರಸ್ತ ಕುಟುಂಬಗಳಿಗೆ ಜಿಲ್ಲಾಡಳಿತ ಎಲ್ಲಾ ರೀತಿಯ ನೆರವು ನೀಡುತ್ತಿದೆ ಎಂದು ಜಿಲ್ಲಾಧಿಕಾರಿ ರಾಜೀವ್ ರೋಷನ್ ಪಿಟಿಐಗೆ ತಿಳಿಸಿದ್ದಾರೆ.

### ಸಲ್ಮಾನ್‌ಖಾನ್ ಮನೆ ಮೇಲಿನ ದಾಳಿ ಪ್ರಕರಣದಲ್ಲಿ ಮತ್ತಿಬ್ಬರ ಬಂಧನ

**ಮುಂಬೈ:** ಮುಂಬೈನಲ್ಲಿರುವ ನಟ ಸಲ್ಮಾನ್ ಖಾನ್ ಅವರ ಮನೆಯ ಹೊರಗೆ ಇತ್ತೀಚೆಗೆ ನಡೆದ ಗುಂಡಿನ ದಾಳಿಗೆ ಸಂಬಂಧಿಸಿದಂತೆ ಮುಂಬೈ ಪೊಲೀಸರು ಮತ್ತಿಬ್ಬರು ಆರೋಪಿಗಳನ್ನು ಪಂಜಾಬ್‌ನಲ್ಲಿ ಬಂಧಿಸಿದ್ದಾರೆ. ಬಂಧಿತರನ್ನು ಸುಭಾಷ್ ಚಂದರ್ (37), ಅನುಜ್ ಥಾಪನ್ (32) ಎಂದು ಗುರುತಿಸಲಾಗಿದೆ. ಇವರು ಗುಂಡು ಹಾರಿಸಿ ದ್ದವರಿಗೆ ಶಸಾತ್ರಸ್ತ್ರ ಮತ್ತು ಕಾಟ್ರಿಡ್ಜಗಳನ್ನು ಒದಗಿಸಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಇಬ್ಬರನ್ನೂ ಕ್ರೈಂ ಬ್ರಾಂಚ್ ತಂಡ ಬಂಧಿಸಿದ್ದು, ಮುಂಬೈಗೆ ಕರೆ ತರಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಸಲಾನ್‌ಖಾನ್ ನಿವಾಸದ ಮೇಲೆ ಗುಂಡು ಹಾರಿಸಿ ಪರಾರಿಯಾಗಿದ್ದ ಬಿಹಾರದ ನಿವಾಸಿಗಳಾದ ವಿಕ್ಕಿ ಗುಪ್ತಾ (24) ಮತ್ತು ಸಾಗರ್ ಪಾಲ್ (21) ಅವರ ಪೊಲೀಸ್ ಕಸ್ಟಡಿ ಅವಧಿಯನ್ನು ಏ.29ರವರೆಗೆ ವಿಸ್ತರಿಸಲಾಗಿದೆ.ಅವರನ್ನು ಏಪ್ರಿಲ್ 16 ರಂದು ಗುಜರಾತ್‌ನ ಕಚ್ ಜಿಲ್ಲೆಯ ಮಾತಾ ನೊ ಮಧ್ ಗ್ರಾಮದಿಂದ ಬಂಧಿಸಲಾಯಿತು. ಗುಂಡಿನ ದಾಳಿಗೆ ಬಳಸಿದ ಆಯುಧಗಳನ್ನು ಪತ್ತೆ ಹಚ್ಚಲು ನಡೆಸಿದ ಶೋಧ ಕಾರ್ಯಾಚರಣೆಯಲ್ಲಿ ಅಪರಾಧ ವಿಭಾಗದ ತಂಡವು ಗುಜರಾತ್‌ನ ತಾಪಿ ನದಿಯಿಂದ ಎರಡು ಪಿಸ್ತೂಲ್‌ಗಳು, ವ್ಯಾಗಜೀನ್‌ಗಳು ಮತ್ತು ಬುಲೆಟ್‌ಗಳನ್ನು ವಶಪಡಿಸಿಕೊಂಡಿದೆ.

### ಬಿಜೆಪಿ ಕಾರ್ಯಕರ್ತ ಶವವಾಗಿ ಪತ್ತೆ ಟಿಎಂಸಿ ನಾಯಕರ ಕೈವಾಡ ಆರೋಪ

**ಕಂಥಿ:** ಪಶ್ಚಿಮ ಬಂಗಾಳದ ಪುರ್ಬಾ ಮೇದಿನಿಪುರ ಜಿಲ್ಲೆಯಲ್ಲಿ ಶುಕ್ರವಾರ 18 ವರ್ಷದ ಬಿಜೆಪಿ ಕಾರ್ಯಕರ್ತನೊಬ್ಬ ಶವವಾಗಿ ಪತ್ತೆಯಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಜಿಲ್ಲೆಯ ಮೇ ನಾ ಪ್ರದೇಶದ ಗೋರಮಹಲ್ ಗ್ರಾಮದ ತೋಟದಲ್ಲಿ ಬಿಜೆಪಿ ಕಾರ್ಯಕರ್ತ ದೀನಬಂಧು ಮಿಡ್ಯಾ ಶವ ಪತ್ತೆಯಾಗಿದೆ ಎಂದು ಅವರು ತಿಳಿಸಿದ್ದಾರೆ. ಟಿಎಂಸಿ ನಾಯಕರು ಆತ ನನ್ನು ಅಪಹರಿಸಿ ಕೊಲೆ ಮಾಡಿದ್ದಾರೆ ಎಂದು ದೀನಬಂಧು ಅವರ ಕುಟುಂಬಸ್ಥರು ಆರೋಪಿಸಿದ್ದಾರೆ. ಆದರೆ ಈ ಆರೋಪವನ್ನು ಆಡಳಿತಾರೂಢ ಟಿಎಂಸಿ ತಳ್ಳಿಹಾಕಿದೆ. 'ನನ್ನ ಮಗ ಬುಧವಾರದಿಂದ ನಾಪತ್ತೆಯಾಗಿದ್ದಾನೆ. ಕೆಲ ಸಮಯದಿಂದ ಟಿಎಂಸಿಯ ಕೆಲವು ಸದಸ್ಯರು ನಮಗೆ ಬೆದರಿಕೆ ಹಾಕುತ್ತಿದ್ದರು. ಅವರೇ ಕೊಲೆ ಮಾಡಿದ್ದಾರೆ ಎಂದು ನನಗೆ ತಿಳಿದಿದೆ' ಎಂದು ದೀನಬಂಧು ಅವರ ತಾಯಿ ಆರೋಪಿಸಿದ್ದಾರೆ. ಅಲ್ಲದೇ ಸಿಬಿಐ ತನಿಖೆಗೆ ಕೋರಿದ್ದಾರೆ. ಕುಟುಂಬಸ್ಥರು ನೀಡಿದ ದೂರಿನ ಮೇರೆಗೆ ದೀನಬಂಧು ಅವರಿಗಾಗಿ ಹುಡುಕಾಟ ಆರಂಭಿಸಲಾಗಿತ್ತು.

ಅವರ ಮೊಬೈಲ್ ಲೊಕೇಶನ್ ಸಹಾಯದಿಂದ ಶವ ಪತ್ತೆ ಮಾಡಲಾಗಿದೆ. ಸದ್ಯ ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಎಂ ದು ಪೊಲೀಸರು ತಿಳಿಸಿದ್ದಾರೆ. ಘಟನೆ ಬಗ್ಗೆ ಪ್ರತಿಕ್ರಿಯಿಸಿದ ಟಿಎಂಸಿ ಶಾಸ ಕ ನಾಸಿರುದ್ದೀನ್ ಅಹಮದ್, 'ಬಿಜೆಪಿ ಎಲ್ಲದಕ್ಕೂ ಟಿಎಂಸಿಯನ್ನು ದೂಷಿಸುವ ಪ್ರವೃತ್ತಿಯನ್ನು ಬೆಳೆಸಿಕೊಂಡಿದೆ. ಸಾವಿಗೆ ಕಾರಣವೇನು ಎಂದು ತಿಳಿಯುವ ಮೊದಲೇ ಅವರು ನಮ್ಮನ್ನು ದೂರುತ್ತಿದ್ದಾರೆ. ಇದು ಹಾಸ್ಯಾಸ್ಪದವಾಗಿದೆ' ಎಂದಿದ್ದಾರೆ.

### ಅಬಕಾರಿ ನೀತಿ ಹಗರಣ ಸಿಸೋಡಿಯಾ ನ್ಯಾಯಾಂಗ ಬಂಧನ ವಿಸ್ತರಣೆ

**ನವದೆಹಲಿ:** ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಎಎಪಿ ನಾಯಕ ಮನೀಶ್ ಸಿಸೋಡಿಯಾ, ಮತ್ತೊಬ್ಬ ಆರೋಪಿ ವಿಜಯ್ ನಾಯರ್ ಮತ್ತು ಇತರರ ನ್ಯಾಯಾಂಗ ಬಂಧನದ ಅವಧಿಯನ್ನು ಇಲ್ಲಿನ ನ್ಯಾಯಾಲಯ ಮೇ 8 ರವರೆಗೆ ವಿಸ್ತರಿಸಿದೆ. ಈ ಹಿಂದೆ ವಿಧಿಸಲಾಗಿದ್ದ ನ್ಯಾಯಾಂಗ ಬಂಧನದ ಅವಧಿ ಮುಕ್ತಾಯವಾದ ಹಿನ್ನೆಲೆಯಲ್ಲಿ ಇ.ಡಿ ಆರೋಪಿಗಳನ್ನು ವಿಶೇಷ ನ್ಯಾಯಾಧೀಶರಾದ ಕಾವೇರಿ ಬವೇಜಾ ಅವರ ಮುಂದೆ ವಿಡಿಯೋ ಕಾನ್ಫರೆನ್ಸ್ ಮೂಲಕ ಹಾಜರುಪಡಿಸಿತ್ತು. ಚಾರ್ಜ್ ಶೀಟ್‌ಗೆ ಸಂಬಂಧಿಸಿದ ದಾಖಲೆಗಳನ್ನು ಡಿಜಿಟಲೀಕರಣಗೊಳಿಸಲು ಎಷ್ಟು ಸಮಯ ಬೇಕಾಗುತ್ತದೆ ಎಂಬ ಕುರಿತು ವರದಿ ಸಲ್ಲಿಸುವಂತೆಯೂ ನ್ಯಾಯಾಧೀಶರು ಜಾರಿ ನಿರ್ದೇಶನಾಲಯಕ್ಕೆ (ಇ.ಡಿ) ಸೂಚಿಸಿದ್ದಾರೆ.

### ಮತದಾನ ಬಹಿಷ್ಕರಿಸಿದ ಗ್ರಾಮಸ್ಥರು

**ಅಗರ್ತಲಾ:** ಗ್ರಾಮದ ರಸ್ತೆ 7 ಕಿ.ಮೀ ಹದಗೆಟ್ಟಿರುವುದರಿಂದ ತ್ರಿಪುರಾದ ಧಲಾಯ್ ಜಿಲ್ಲೆಯ ಗ್ರಾಮವೊಂದರ ಬುಡಕಟ್ಟು ಜನಾಂಗಕ್ಕೆ ಸೇರಿದ 600ಕ್ಕೂ ಹೆಚ್ಚು ಮಂದಿ ಮತದಾನ ಬಹಿಷ್ಕಾರ ಮಾಡಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಈ ಗ್ರಾಮಲ್ಲಿ ಸುಮಾರು 900 ಮಂದಿ ಇದ್ದು, ರಸ್ತೆ ರಿಪೇರಿ ಮಾಡಬೇಕು ಎಂದು ಹಲವು ತಿಂಗಳಿನಿಂದ ಬೇಡಿಕೆ ಇರಿಸಿದ್ದರು. ಗ್ರಾಮಸ್ಥರು ಮತಗಟ್ಟೆಯ ಹೊರಗೆ ಗುಂಪು ಸೇರಿದ್ದಾರೆ.

ಆದರೆ ಯಾರೊಬ್ಬರು ಮತ ಚಲಾಯಿಸಲು ಮುಂದಾಗುತ್ತಿಲ್ಲ ಎಂದು ಅಧಿಕಾರಿಯೊಬ್ಬರು ಹೇಳಿದ್ದಾರೆ. ಗ್ರಾಮಸ್ಥರು ಪ್ರಜಾಪ್ರಭುತ್ವದ ಹಬ್ಬದಲ್ಲಿ ಪಾಲ್ಗೊಳ್ಳುವ ನಿರೀಕ್ಷೆ ಇದೆ. ಆಡಳಿತವು ಅವರ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಲಿದೆ. ಕುಡಿಯುವ ನೀರಿನ ಸಮಸ್ಯೆ ಬಗ್ಗೆಯೂ ಗ್ರಾಮಸ್ಥರು ದೂರು ನೀಡಿದ್ದಾರೆ ಎಂದು ಗಂದಚೆರದ ಉಪವಿಭಾಗೀಯ ಮ್ಯಾಜಿಸ್ಟ್ರೇಟ್ ಅರಿಂದಮ್ ದಾಸ್ ಹೇಳಿದ್ದಾರೆ. ಈ ಬಗ್ಗೆ ಮಾಹಿತಿ ಸಿಕ್ಕಿದ ಕೂಡಲೇ ಅಧಿಕಾರಿಗಳ ತಂಡ ಗ್ರಾಮಕ್ಕೆ ಧಾವಿಸಿ ಅವರನ್ನು ಮನವೊಲಿಸುವ ಕೆಲಸ ಮಾಡಿದೆ.

ಉದಯ ವಾಹಿನಿ
www.udayavahini.in
epaper.udayavahini.in
Udaya vahini news
Udaya vahini news
Udayavahini news youtube
udayavahininews@gmail.com


# ಪಂಜಾಬ್ ಪಂಚ್‌ಗೆ ಕೋಲ್ಕತ್ತಾ ಪಂಚರ್

- ತವರಿನಲ್ಲಿಯೇ ಕೋಲ್ಕತ್ತಾಗೆ ಹೀನಾಯ ಸೋಲು,
- ಭರ್ಜರಿ ಗೆಲುವುಕಂಡ ಪಂಜಾಬ್ ಕಿಂಗ್ಸ್

ರನ್ ಮಳೆಯಲ್ಲಿ ಪಂಜಾಬ್‌ಗೆ 8 ವಿಕೆಟ್‌ಗಳ ಜಯ ಚೇಸಿಂಗ್‌ನಲ್ಲಿ ಆರ್‌ಸಿಬಿ ದಾಖಲೆ ಸರಿಗಟ್ಟಿದ ಕಿಂಗ್ಸ್

ಜಾನಿ ಬೈರ್‌ಸ್ಟೋವ್ ಭರ್ಜರಿ ಶತಕ ಹಾಗೂ ಶಶಾಂಕ್ ಸಿಂಗ್, ಪ್ರಭ್ ಸಿಮ್ರನ್‌ಸಿಂಗ್ ಸ್ಫೋಟಕ ಅರ್ಧಶತಕಗಳ ಬ್ಯಾಟಿಂಗ್ ನೆರವಿನಿಂದ ಪಂಜಾಬ್ ಕಿಂಗ್ಸ್ ತಂಡವು ಕೋಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ 8 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ಅಲ್ಲದೇ ಐಪಿಎಲ್ ಇತಿಹಾಸದಲ್ಲಿ ಚೇಸಿಂಗ್‌ನಲ್ಲಿ ತಂಡವೊಂದು ಗಳಿಸಿದ ಗರಿಷ್ಠ ರನ್ ಇದಾಗಿದ್ದು, ಆರ್‌ಸಿಬಿ ಗಳಿಸಿದ್ದ 262 ರನ್‌ಗಳ ದಾಖಲೆ ಸರಿಗಟ್ಟಿದೆ.

ಐಪಿಎಲ್ 2024ರ 42ನೇ ಪಂದ್ಯ ಪಂಜಾಬ್ ಕಿಂಗ್ಸ್ ಮತ್ತು ಕೋಲ್ಕತ್ತಾ ನೈಟ್ ರೈಡರ್ಸ್ ( ನಡುವೆ ನಡೆಯಿತು. ಈ ಪಂದ್ಯದಲ್ಲಿ ಕೋಲ್ಕತ್ತಾದ ಈಡನ್ ಗಾರ್ಡನ್ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ಟಾಸ್ ಗೆದ್ದು ಮೊದಲು ಬೌಲಿಂಗ್ ಆಯ್ಕೆ ಮಾಡಿಕೊಂಡರೆ, ಕೆಕೆಆರ್ ಮೊದಲು ಬ್ಯಾಟಿಂಗ್ ಮಾಡುವ ಸವಾಲನ್ನು ಎದುರಿಸಿತು. ಕೋಲ್ಕತ್ತಾ ನೈಟ್ ರೈಡರ್ಸ್ ಭರ್ಜರಿ ಬ್ಯಾಟಿಂಗ್ ಮೂಲಕ 261 ರನ್ ಗಳಿಸಿ ಪಂಜಾಬ್ ಗೆಲುವಿಗೆ 262 ರನ್ ಗಳ ಸವಾಲನ್ನು ನೀಡಿತು. ಈ ಬೃಹತ್ ಮೊತ್ತವನ್ನು ಬೆನ್ನಟ್ಟಿದ ಪಂಜಾಬ್ ಕಿಂಗ್ಸ್ ತಂಡವು 18.4 ಓವರ್‌ಗೆ 2 ವಿಕೆಟ್ ನಷ್ಟಕ್ಕೆ 262 ರನ್ ಗಳಿಸುವ ಮೂಲಕ 8 ವಿಕೆಟ್ ಗಳ ಭರ್ಜರಿ ಗೆಲುವು ದಾಖಲಿಸಿದೆ.

ಟಾಸ್ ಸೋತು ಕೆಕೆಆರ್ ಮೊದಲು ಬ್ಯಾಟಿಂಗ್ ಮಾಡಿದರೂ ಭರ್ಜರಿಯಾಗಿ ಸೌಂಡ್ ಮಾಡಿತು. ಅದರಲ್ಲಿಯೂ ತವರು ನೆಲದಲ್ಲಿ ಮಿಂಚಿದ ಕೆಕೆಆರ್ ಪ್ಲೇಯರ್ಸ್ ಪಂಜಾಬ್ ವಿರುದ್ಧ ರೌದ್ರಾವತಾರ ತಾಳಿದರು. ಈ ವೇಳೆ ಕೋಲ್ಕತ್ತಾ ನೈಟ್ ರೈಡರ್ಸ್ ನಿಗದಿತ 20 ಓವರ್‌ಗೆ 261 ರನ್ ಗಳಿಸಿತು. ಈ ವೇಳೆ ಕೆಕೆಆರ್ ತಂಡದ ಪರ ಸುನಿಲ್ ನರೈನ್ 32 ಎಸೆತಗಳಲ್ಲಿ 71 ಹಾಗೂ ಫಿಲಿಪ್ ಸಾಲ್ಟ್ 37 ಎಸೆತಗಳಲ್ಲಿ 75 ರನ್ ಗಳಿಸಿದರು. ವೆಂಕಟೇಶ್ ಅಯ್ಯರ್ 39 ರನ್, ರಸೆಲ್ 24 ರನ್, ಶ್ರೇಯಸ್ ಅಯ್ಯರ್ 28 ರನ್ ಗಳಿಸಿದರು. ಪಂಜಾಬ್ ಕಿಂಗ್ಸ್ ಬೌಲರ್‌ಗಳು ಕೆಕೆಆರ್‌ನ 6 ವಿಕೆಟ್‌ಗಳನ್ನು ಕಬಳಿಸುವಲ್ಲಿ ಯಶಸ್ವಿಯಾದರು. ಪಂಜಾಬ್ ಪರ ಅರ್ಷದೀಪ್ ಸಿಂಗ್ 2 ವಿಕೆಟ್ ಪಡೆದರೆ, ಸ್ಯಾಮ್ ಕರಣ್ 1 ವಿಕೆಟ್, ಹರ್ಷಲ್ ಪಟೇಲ್ 1 ವಿಕೆಟ್ ಮತ್ತು ರಾಹುಲ್ ಚಹಾರ್ 1 ವಿಕೆಟ್ ಪಡೆದರು. ಕೆಕೆಆರ್ 20 ಓವರ್ ಗಳಲ್ಲಿ 6 ವಿಕೆಟ್ ನಷ್ಟಕ್ಕೆ 261 ರನ್ ಗಳಿಸಿ ಪಂಜಾಬ್ ಗೆಲುವಿಗೆ 262 ರನ್ ಗಳ ಸವಾಲನ್ನು ನೀಡಿದೆ. ಸುನಿಲ್ ನರೈನ್, ಫಿಲ್ ಸಾಲ್ಟ್ ಮೊದಲ ವಿಕೆಟ್‌ಗೆ 10.2 ಓವರ್‌ಗಳಲ್ಲಿ 138 ರನ್ ಗಳಿಸಿದರು. 32 ಎಸೆತಗಳಲ್ಲಿ 9 ಬೌಂಡರಿ 4 ಸಿಕ್ಸರ್‌ಗಳ ನೆರವಿನಿಂದ 71 ರನ್ ಗಳಿಸಿ ನರೇನ್ ಔಟಾದರೂ ಅಬ್ಬರ ಮಾತ್ರ ಕೊನೆವರೆಗೂ ನಿಲ್ಲಲೇ ಇಲ್ಲ. ಐಪಿಎಲ್ ಇತಿಹಾಸದಲ್ಲಿ ಮೊದಲ 10 ಓವರ್‌ಗಳಲ್ಲಿ ಅತಿ ಹೆಚ್ಚು ರನ್ ಗಳಿಸಿದ ಬಗ್ಗೆ ಮಾತನಾಡುವುದಾದರೆ, ಈ ದಾಖಲೆ ಸದ್ದು ಮಾಡುತ್ತಿರುವ ಸನ್‌ರೈಸರ್ಸ್ ಹೈದರಾಬಾದ್ ಹೆಸರಿನಲ್ಲಿದೆ. ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ತಂಡ 158 ರನ್ ಗಳಿಸಿತ್ತು. ಮುಂಬೈ ತಂಡ ಮೊದಲ 10 ಓವರ್‌ಗಳಲ್ಲಿ 141 ರನ್ ಗಳಿಸಿದ ದಾಖಲೆ ಹೊಂದಿದೆ.




### ದಾಖಲೆಗಳ ಸುರಿ ಮಳೆ

### ಈಡನ್‌ನಲ್ಲಿ ಅಬ್ಬರಿಸಿದ ಪಂಜಾಬ್ ರಾಜರು

**ಇನ್ನು, ಕೋಲ್ಕತ್ತಾ ನೈಟ್ ರೈಡರ್ಸ್ ತಂಡವು ಮೊದಲು ಬ್ಯಾಟಿಂಗ್ ಮಾಡಿ ಪಂಜಾಬ್ ತಂಡಕ್ಕೆ ಬರೋಬ್ಬರಿ 262 ರನ್ ಟಾರ್ಗೆಟ್ ನೀಡಿತು. ಈ ಟಾರ್ಗೆಟ್ ಬೆನ್ನಟ್ಟಿದ ಪಂಜಾಬ್ ಕಿಂಗ್ಸ್ ತಂಡಕ್ಕೆ ಆರಂಭಿಕರಾಗಿ ಕಣಕ್ಕಿಳಿದ ಪ್ರಭ್ ಸಿಮ್ರಾನ್ ಸಿಂಗ್ ಮತ್ತು ಜಾನಿ ಬೇರ್‌ಸ್ಟೋ ಭರ್ಜರಿ ಜೊತೆಯಾಟವಾಡಿದರು. ಕೇವಲ 5.6 ಓವರ್‌ಗೆ ಮೊದಲ ವಿಕೆಟ್‌ಗೆ 93 ರನ್ ಗಳಿಸುವ ಮೂಲಕ ಅಬ್ಬರದ ಬ್ಯಾಟಿಂಗ್ ಮಾಡಿದರು. ಈ ವೇಳೆ ಪ್ರಭ್ ಸಿಮ್ರಾನ್ ಸಿಂಗ್ 20 ಎಸೆತದಲ್ಲಿ 5 ಸಿಕ್ಸ್ ಮತ್ತು 4 ಬೌಂಡರಿ ಸಹಿತ 54 ರನ್ ಗಳಿಸಿ ಸ್ಫೋಟಕ ಬ್ಯಾಟಿಂಗ್ ಮಾಡಿದರು. ಬಳಿಕ ರಿಲ್ಲೆ ರೂಸ್ಸೋ 16 ಎಸೆತದಲ್ಲಿ 2 ಸಿಕ್ಸ್ ಮತ್ತು 1 ಫೋರ್ ಮೂಲಕ 26 ರನ್ ಗಳಿಸಿದರು. ಇತ್ತ ಶಶಾಂಕ್ ಸಿಂಗ್ 27 ಎಸೆತದಲ್ಲಿ 8 ಸಿಕ್ಸ್ 2 ಫೋರ್ ಮೂಲಕ ಅಜೇಯ 67 ರನ್ ಸಿಡಿಸಿದರೆ, ಜಾನಿ ಬೇರ್‌ಸ್ಟೋ 48 ಎಸೆತದಲ್ಲಿ 9 ಸಿಕ್ಸ್ 8 ಫೋರ್ ಮೂಲಕ 108 ರನ್ ಗಳಿಸಿ ತಂಡವನ್ನು ಗೆಲುವಿನ ದಡ ಸೇರಿಸಿದರು.**



# ಅಂಕಪಟ್ಟಿಯ ಅಗ್ರಸ್ಥಾನಿ ರಾಜಸ್ಥಾನ್‌ಗೆ ಸವಾಲೊಡ್ಡುವುದೇ ಲಕ್ನೋ ಸೂಪರ್ ಜೈಂಟ್ಸ್

ಲಖನೌ: ಇಂಡಿಯನ್ ಪ್ರೀಮಿಯರ್ ಲೀಗ್ 2024ರ 44 ನೇ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ಮತ್ತು ರಾಜಸ್ಥಾನ್ ರಾಯಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಎರಡೂ ತಂಡಗಳು ಅತ್ಯುತ್ತಮ ಫಾರ್ಮ್ ನಲ್ಲಿದ್ದು, ಪಂದ್ಯವು ರೋಚಕ ಫಲಿತಾಂಶದ ಭರವಸೆ ನೀಡುತ್ತಿದೆ. ಸೂಪರ್ ಜೈಂಟ್ಸ್ ತನ್ನ ಹಿಂದಿನ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ಸೋಲಿಸಿತ್ತು. ಹೀಗಾಗಿ ಆತ್ಮವಿಶ್ವಾಸದಿಂದ ಸಾಗಲಿದೆ. ಮತ್ತೊಂದೆಡೆ, ರಾಜಸ್ಥಾನ್ ರಾಯಲ್ಸ್ ಆಡಿದ ಎಂಟು ಪಂದ್ಯಗಳಲ್ಲಿ ಏಳರಲ್ಲಿ ಗೆದ್ದಿದೆ ಮತ್ತು ಪ್ರಸ್ತುತ ಪಾಯಿಂಟ್ಸ್ ಟೇಬಲ್‌ನಲ್ಲಿ ಅಗ್ರಸ್ಥಾನದಲ್ಲಿದೆ. ರಾಜಸ್ಥಾನ್ ತಮ್ಮ ಖಾತೆಗೆ ಮತ್ತೊಂದು ಗೆಲುವನ್ನು ಸೇರಿಸುವ ಮೂಲಕ ಮುಂಚೂಣಿ ಸ್ಥಾನ ಉಳಿಸಿಕೊಳ್ಳಲು ನೋಡಲಿದೆ. ಈ ಋತುವಿನ ಆರಂಭದಲ್ಲಿ ಸೂಪರ್ ಜೈಂಟ್ಸ್ ತಂಡವನ್ನು ಸೋಲಿಸಿರುವ ರಾಯಲ್ಸ್ ಆತ್ಮವಿಶ್ವಾಸದಲ್ಲಿದೆ. ಆದಾಗ್ಯೂ, ಲಕ್ನೋ ತವರಿನ ಅನುಕೂಲ ಹೊಂದಿರುತ್ತದೆ ಮತ್ತು ಪಾಯಿಂಟ್ಸ್ ಟೇಬಲ್‌ನಲ್ಲಿ ತಮ್ಮ ಶ್ರೇಯಾಂಕ ಸುಧಾರಿಸಲು ಪ್ರಯತ್ನಿಸುತ್ತದೆ. ಎರಡೂ ಶಿಬಿರಗಳಲ್ಲಿನ ಬ್ಯಾಟರ್‌ಗಳು ಉತ್ತಮ ಫಾರ್ಮ್‌ನಲ್ಲಿರುವುದರಿಂದ ಇಲ್ಲಿ ಏಕಪಕ್ಷೀಯ ಫಲಿತಾಂಶದ ನಿರೀಕ್ಷೆ ಕಡಿಮೆ.

ಕಳೆದ ಪಂದ್ಯದಲ್ಲಿ, ಲಕ್ನೊ ತಂಡವು ದೊಡ್ಡ ಮೊತ್ತವನ್ನು ಯಶಸ್ವಿಯಾಗಿ ಬೆನ್ನಟ್ಟುವಲ್ಲಿ ಯಶಸ್ವಿಯಾಯಿತು ಹಾಗೂ ಆರು ವಿಕೆಟ್‌ಗಳಿಂದ ಗೆದ್ದಿತು. ಬ್ಯಾಟಿಂಗ್ ಲೈನ್‌ಅಪ್ ಉತ್ತಮ ಸ್ಥಿತಿಯಲ್ಲಿರುವಂತೆ ತೋರುತ್ತಿದ್ದರೂ ರಾಜಸ್ಥಾನ್ ರಾಯಲ್ಸ್ ಅತ್ಯಂತ ವಿನಾಶಕಾರಿ ಬ್ಯಾಟಿಂಗ್ ಲೈನ್‌ಅಪ್ ಹೊಂದಿರುವುದರಿಂದ ಕೆಎಲ್ ರಾಹುಲ್‌ಗೆ ತಮ್ಮ ಬೌಲರ್‌ಗಳಿಂದ ಬಲವಾದ ನೆರವು ಬೇಕಾಗಿದೆ. ರವಿ ಬಿಷ್ಣೋಯ್ ಮತ್ತು ಕೃಣಾಲ್ ಪಾಂಡ್ಯ ಪಿಚ್‌ನ ನಿಧಾನಗತಿಯ ಸ್ವರೂಪವನ್ನು ತಮ್ಮ ಅನುಕೂಲಕ್ಕೆ ಬಳಸಿಕೊಳ್ಳಬೇಕು. ರಾಜಸ್ಥಾನ್ ತಂಡ ಬ್ಯಾಟಿಂಗ್ ಪ್ರದರ್ಶನವು ಎದುರಾಳಿಗಳ ಮೇಲೆ ಪ್ರಾಬಲ್ಯ ಸಾಧಿಸಲು ಸಹಾಯ ಮಾಡಿದೆ. ಮುಂಬೈ ಇಂಡಿಯನ್ಸ್ ವಿರುದ್ಧ ಹಿಂದಿನ ಪಂದ್ಯವನ್ನು ಒಂಬತ್ತು ವಿಕೆಟ್‌ಗಳಿಂದ ಗೆದ್ದಿದ್ದ ಅವರು ಪ್ರಸ್ತುತ ಪಾಯಿಂಟ್ಸ್ ಟೇಬಲ್‌ನಲ್ಲಿ ಅಗ್ರಸ್ಥಾನದಲ್ಲಿದ್ದಾರೆಮುಂದಿನ ಸುತ್ತಿಗೆ ತಮ್ಮ ಸ್ಥಾನವನ್ನು ಭದ್ರಪಡಿಸಿಕೊಳ್ಳಲು ಅವರಿಗೆ ಇನ್ನೂ ಒಂದು ಜಯದ ಅಗತ್ಯವಿದೆ. ತಮ್ಮ ಉತ್ತಮ ಸ್ಟ್ರೋಕ್‌ಗಳನ್ನು ಆಯ್ಕೆ ಮಾಡುವ ಬ್ಯಾಟ್ಸ್‌ಮನ್ ಗಳಿಗೆ ಪಿಚ್ ಸೂಕ್ತವಾಗಿದೆ. ವಿಕೆಟ್ ಬ್ಯಾಟಿಂಗ್ ಆರಂಭಕ್ಕೆ ಪ್ರಾರಂಭಿಸಲು ಕಠಿಣವಾಗಿರಬಹುದು. ಆದರೆ ಆಟವು ಮುಂದುವರಿದಂತೆ ಬ್ಯಾಟಿಂಗ್ ಪರಿಸ್ಥಿತಿಗಳು ಸುಧಾರಿಸುತ್ತವೆ.ಕೆಲವೊಮ್ಮೆ, ಚೆಂಡು ಬ್ಯಾಟರ್ ಗಳ ನಿರೀಕ್ಷೆಗಿಂತ ವೇಗದಲ್ಲಿ ಪುಟಿದೇಳುತ್ತದೆ.



# ಕೊಹ್ಲಿಯ ನಿಧಾನಗತಿಯ ಬ್ಯಾಟಿಂಗ್: ಬೇಸರ ವ್ಯಕ್ತಪಡಿಸಿದ ಗವಾಸ್ಕರ್

ಬೆಂಗಳೂರು: ಇಲ್ಲಿನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಗುರುವಾರ (ಏಪ್ರಿಲ್ 25) ನಡೆದ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ಮತ್ತು ಸನ್ ರೈಸರ್ಸ್ ಹೈದರಾಬಾದ್ ನಡುವಿನ ಪಂದ್ಯದಲ್ಲಿ ವಿರಾಟ್ ಕೊಹ್ಲಿ ಅರ್ಧ ಶತಕ ಬಾರಿಸಿದ್ದಾರೆ. ಟಾಸ್ ಗೆದ್ದ ಆರ್‌ಸಿಬಿ ನಾಯಕ ಫಾಫ್ ಡು ಪ್ಲೆಸಿಸ್ ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿದ ನಂತರ, ಕೊಹ್ಲಿ ಎಸ್‌ಆರ್‌ಎಚ್ ಬೌಲರ್‌ಗಳನ್ನು ಎದುರಿಸಿ ಉತ್ತಮ ಆರಂಭ ಪಡೆದರು. ಪವರ್‌ಪ್ಲೇನಲ್ಲಿ ಕೇವಲ 18 ಎಸೆತಗಳಲ್ಲಿ 32 ರನ್ ಗಳಿಸಿದ ಮಾಜಿ ಆರ್‌ಸಿಬಿ ನಾಯಕ ದೊಡ್ಡ ಮೊತ್ತಕ್ಕೆ ಸಜ್ಜಾಗುತ್ತಿರುವಂತೆ ತೋರಿತು. ಆದಾಗ್ಯೂ, ಎಸ್‌ಆರ್‌ಎಚ್‌ನ ಸ್ಪಿನ್ ಜೋಡಿ ಶಹಬಾಜ್ ಅಹ್ಮದ್ ಮತ್ತು ಮಯಾಂಕ್ ಮಾರ್ಕಂಡೆಗೆ ಕೊಹ್ಲಿ ಹೆದರಿದರು. ಹೀಗಾಗಿ ಅವರ ರನ್ ವೇಗ ಕಡಿಮೆಯಾಯಿತು. 15ನೇ ಓವರ್‌ನಲ್ಲಿ ಜಯದೇವ್ ಉನಾದ್ಕಟ್ 43 ಎಸೆತಗಳಲ್ಲಿ 51 ರನ್ ಗಳಿಸಿ ಔಟಾಗುವ ಮೊದಲು ಕೊಹ್ಲಿ ತಮ್ಮ ಕೊನೆಯ 25 ಎಸೆತಗಳಲ್ಲಿ ಕೇವಲ 19 ರನ್ ಗಳಿಸಿದರು. ಇದು ಅವರ ಸ್ಟ್ರೈಕ್ ರೇಟ್ ಕಡಿಮೆಯಾಗಲು ಕಾರಣವಾಯಿತು. ಮಧ್ಯಮ ಓವರ್‌ಗಳಲ್ಲಿ ರನ್ ವೇಗವನ್ನು ಹೆಚ್ಚಿಸಲು ಕೊಹ್ಲಿಯ ಪರದಾಡಿರುವ ಬಗ್ಗೆ ಭಾರತದ ಮಾಜಿ ಆರಂಭಿಕ ಆಟಗಾರ ಸುನಿಲ್ ಗವಾಸ್ಕರ್ ಅವರಿಂದ ತೀವ್ರ ಟೀಕೆ ಮಾಡಿದ್ದಾರೆ. ''ಮಧ್ಯಂತರದಲ್ಲಿ ಅವರು ವೇಗ ಕಳೆದುಕೊಂಡಂತೆ ತೋರುತ್ತದೆ. ನಿಖರವಾದ ಸಂಖ್ಯೆಗಳ ಬಗ್ಗೆ ನನಗೆ ಖಚಿತವಿಲ್ಲ, ಆದರೆ 31–32 ರಿಂದ ಅವರು ಔಟ್ ಆಗುವವರೆಗೂ ಅವರು ಬೌಂಡರಿ ಹೊಡೆಯಲಿಲ್ಲ ಎಂದು ನಾನು ಭಾವಿಸುತ್ತೇನೆ. ಆದ್ದರಿಂದ ದಿನದ ಕೊನೆಯಲ್ಲಿ, ನೀವು ಇನ್ನಿಂಗ್ಸ್‌ನ ಮೊದಲ ಎಸೆತದಲ್ಲಿ ಸ್ಟ್ರೈಕ್ ಎದುರಿಸುತ್ತಿರುವಾಗ ಅವರು ಔಟಾದಾಗ ಮತ್ತು ನೀವು 14 ಅಥವಾ 15 ನೇ ಓವರ್‌ನಲ್ಲಿ ಔಟಾದಾಗ, ಅವರಿಂದ 118 ಸ್ಟ್ರೈಕ್ ರೇಟ್ ದೊರಕಿದೆ. ನಿಮ್ಮ ತಂಡವು ನಿಮ್ಮಿಂದ ನಿರೀಕ್ಷಿಸುವುದು ಅದಲ್ಲ''ಎಂದು ಸುನಿಲ್ ಗವಾಸ್ಕರ್ ಹೇಳಿದ್ದಾರೆ. ವಿರಾಟ್ ಕೊಹ್ಲಿ ಬಹುಶಃ ಅದನ್ನು ಮಾಡಬೇಕಾಗಿತ್ತು ಸೈಮನ್ ಕ್ಯಾಟಿಚ್ ಕೊಹ್ಲಿ ರನ್ ವೇಗದ ಬಗ್ಗೆ ಆಸ್ಟ್ರೇಲಿಯಾದ ಮಾಜಿ ಕ್ರಿಕೆಟಿಗ ಸೈಮನ್ ಕ್ಯಾಟಿಚ್ ಹೊಗಳಿದ್ದಾರೆ. ಅವರ ಅರ್ಧ ಶತಕವು ಬೆಂಗಳೂರು ಮೂಲದ ಫ್ರಾಂಚೈಸಿಗೆ ಭಾರಿ ನೆರವು ನೀಡಿತು ಎಂದು ಅಭಿಪ್ರಾಯಪಟ್ಟಿದ್ದಾರೆ.

ಅವರು ಉತ್ತಮ ಆರಂಭವನ್ನು ಪಡೆಯಲು ಮತ್ತು ಅಪಾಯಕಾರಿ ಎಸ್‌ಆರ್‌ಎಚ್ ಬ್ಯಾಟಿಂಗ್ ಲೈನ್‌ಅಪ್ ವಿರುದ್ಧ ರನ್ ಗಳಿಸಲ ನೆರವಾಯಿತು ಎಂದು ಹೇಳಿದರು.ಅವರಿಂದಾಗಿ ರಜತ್ ಪಾಟಿದಾರ್ ಸುಂದರವಾಗಿ ಆಡಿದರು ಎಂದು ನಾನು ಭಾವಿಸುತ್ತೇನೆ. ಅವರು ಬೌಂಡರಿ ಮತ್ತು ಸಿಕ್ಸರ್‌ಗಳನ್ನು ಹೊಡೆಯಲು ಪ್ರಯತ್ನಿಸುತ್ತಿದ್ದರು. ವಿರಾಟ್ ಕೊಹ್ಲಿ ಬಹುಶಃ ಅದನ್ನು ಮಾಡಬೇಕಾಗಿತ್ತು. ಸನ್‌ರೈಸರ್ಸ್ ವಿರುದ್ಧ ಆರ್‌ಸಿಬಿಗೆ ಸ್ಟ್ರೈಕ್ ರೇಟ್ ನಷ್ಟವಾಗಿದೆ ಎಂದು ನಾನು ಭಾವಿಸುತ್ತೇನೆ.

# 'ಸಲಾರ್ 2' ಚಿತ್ರದಲ್ಲಿ ಕಿಯಾರಾ ಅಡ್ವಾಣಿ ಕೊನೆಗೂ ಸಿಕ್ತು ಸ್ಪಷ್ಟನೆ

ಬಾಲಿವುಡ್ ನಟಿ ಕಿಯಾರಾ ಅಡ್ವಾಣಿಗೆ ಹಿಂದಿ, ತೆಲುಗಿನಲ್ಲಿ ಭಾರೀ ಬೇಡಿಕೆಯಿದೆ. ಇತ್ತೀಚೆಗೆ ಸಲಾರ್–2 ಸಿನಿಮಾದಲ್ಲಿ ಕಿಯಾರಾ ಕಾಣಿಸಿಕೊಳ್ತಾರೆ ಎಂಬ ಸುದ್ದಿ ನೆಟ್ಟಿಗರ ಚರ್ಚೆಗೆ ಗ್ರಾಸವಾಗಿತ್ತು. ಅಸಲಿಗೆ ಅವರು ಇರುತ್ತಾರಾ ಎಂಬುದು ಸ್ಪಷ್ಟನೆ ಸಿಕ್ಕಿರಲಿಲ್ಲ. ಇದೀಗ ಉತ್ತರ ಸಿಕ್ಕಿದೆ. 'ಸಲಾರ್' ಪಾರ್ಟ್ 2ನಲ್ಲಿ ಕಿಯಾರಾ ಅಡ್ವಾಣಿ ಸಿನಿಮಾದಲ್ಲಿ ನಟಿಸುತ್ತಿಲ್ಲ. ಹರಿದಾಡುತ್ತಿರುವ ಸುದ್ದಿ ಸುಳ್ಳು ಎನ್ನಲಾಗುತ್ತಿದೆ. ನಾಯಕಿಯ ಆಯ್ಕೆ ವಿಚಾರದಲ್ಲಿ ಚಿತ್ರತಂಡ ಯಾವುದೇ ಅಧಿಕೃತ ಮಾಹಿತಿ ನೀಡಿಲ್ಲ. ಐಟಂ ಡ್ಯಾನ್ಸ್‌ಗೆ ಹೆಜ್ಜೆ ಹಾಕಲಿದ್ದಾರೆ ಎಂದು ಸುದ್ದಿಯಾಗಿತ್ತು. ಇದು ಕೂಡ ಸುಳ್ಳು ಎನ್ನಲಾಗಿದೆ. ಮುಂದಿನ ದಿನಗಳಲ್ಲಿ ಚಿತ್ರತಂಡ ಯಾವ ಮಾಹಿತಿ ರಿವೀಲ್ ಮಾಡಲಿದೆ ಎಂದು ಕಾಯಬೇಕಿದೆ. ಕಿಯಾರಾ ಸದ್ಯ ರಾಮ್ ಚರಣ್ ಜೊತೆಗಿನ 'ಗೇಮ್ ಚೇಂಜರ್' ಸಿನಿಮಾ ರಿಲೀಸ್‌ಗಾಗಿ ಎದುರು ನೋಡ್ತಿದ್ದಾರೆ. ಕೆಲವು ಬಾಲಿವುಡ್ ಸಿನಿಮಾಗಳನ್ನು ಒಪ್ಪಿಕೊಂಡಿದ್ದಾರೆ. ಇನ್ನೊಂದು ಕಡೆ ಯಶ್ ನಟನೆಯ 'ಟಾಕ್ಸಿಕ್' ಚಿತ್ರಕ್ಕೆ ಕಿಯಾರಾ ಎಂಟ್ರಿ ಕೊಡುತ್ತಾರೆ ಎಂಬ ಸುದ್ದಿ ಇದೆ. ಚಿತ್ರತಂಡದ ಅಧಿಕೃತ ಮಾಹಿತಿಗಾಗಿ ಕಾಯಬೇಕಿದೆ. ಸಲಾರ್ ಪಾರ್ಟ್ 1ರಲ್ಲಿ ಪ್ರಭಾಸ್, ಪೃಥ್ವಿರಾಜ್ ಸುಕುಮಾರನ್, ಶ್ರುತಿ ಹಾಸನ್ ನಟಿಸಿದ್ದರು. ಚಿತ್ರಕ್ಕೆ ಉತ್ತಮ ಪ್ರಶಂಸೆ ವ್ಯಕ್ತವಾಗಿತ್ತು. ಈ ಸಿನಿಮಾವನ್ನು ಪ್ರಶಾಂತ್ ನೀಲ್ ನಿರ್ದೇಶನ ಮಾಡಿದ್ದಾರೆ.



# ಬಾಲಿವುಡ್ ಅಂದ್ರೆ ಸುಮ್ನೆನಾ ಫ್ಯಾನ್ಸ್

ಮಹಾನಟಿ ಖ್ಯಾತಿಯ ದಕ್ಷಿಣದ ನಟಿ ಕೀರ್ತಿ ಸುರೇಶ್ ಬಾಲಿವುಡ್ ಚಿತ್ರರಂಗಕ್ಕೆ ಹಾರಿದ್ದ ವಿಷಯ. ಆ ಸಿನಿಮಾದ ಶೂಟಿಂಗ್ ನಲ್ಲೂ ಭಾಗಿಯಾಗಿದ್ದಾರೆ. ಶೂಟಿಂಗ್ ಸೆಟ್ ನಲ್ಲಿ ಈ ಸಿನಿಮಾದ ನಾಯಕ ವರುಣ್ ಧವನ್ ಅವರ ಹುಟ್ಟು ಹಬ್ಬವನ್ನು ಆಚರಿಸಿಕೊಂಡಿದ್ದು, ಆ ಫೋಟೋ ವೈರಲ್ ಆಗಿದೆ.

ಹೌದು, ಶೂಟಿಂಗ್ ಸೆಟ್ ನಲ್ಲಿ ವರುಣ್ ಹುಟ್ಟು ಹಬ್ಬವನ್ನು ಆಚರಿಸುವ ಸಂದರ್ಭದಲ್ಲಿ ಚಿತ್ರದ ಹಾಡೊಂದರ ಚಿತ್ರೀಕರಣಕ್ಕೆ ಪ್ಲ್ಯಾನ್ ಮಾಡಲಾಗಿತ್ತು. ಈ ಹಾಡಿನಲ್ಲಿ ಕೀರ್ತಿ ಸಖತ್ ಬೋಲ್ಡ್ ಆಗಿ, ಹಾಟ್ ಹಾಟ್ ಆಗಿ ಕಾಣಿಸಿಕೊಂಡಿದ್ದಾರೆ. ಈ ಫೋಟೋ ನೋಡಿದ ಅಭಿಮಾನಿಗಳು ಬಾಲಿವುಡ್ ಅಂದರೆ ಸುಮ್ನೆನಾ ಎಂದು ಕಾಲೆಳೆದಿದ್ದಾರೆ. ತೆಲುಗು, ತಮಿಳಿನಲ್ಲಿ ನಟಿಸಿ ಸೈ ಎನಿಸಿಕೊಂಡ ಕೀರ್ತಿ ಸುರೇಶ್ ಬಾಲಿವುಡ್‌ನಲ್ಲಿ ರಾರಾಜಿಸಬೇಕು ಎಂಬುದು ಅದೆಷ್ಟೋ ಅಭಿಮಾನಿಗಳ ಕನಸಾಗಿತ್ತು. ಇದೀಗ ಅದು ನೆರವೇರಿದೆ. ಹಿಂದಿ ಸಿನಿಮಾಗೆ ನಾಯಕಿಯಾಗಿ ಗ್ರ್ಯಾಂಡ್ ಎಂಟ್ರಿ ಕೊಟ್ಟಿದ್ದಾರೆ. ಹೊಂಬಾಳೆ ಫಿಲ್ಮ್ಸ್ ನಿರ್ಮಾಣದ ಕೀರ್ತಿ ಸುರೇಶ್ ನಟನೆಯ 'ರಾಘುತಾತ' ಚಿತ್ರದ ಟೀಸರ್ ರಿಲೀಸ್ ಆದ ಬೆನ್ನಲ್ಲೇ ಬಾಲಿವುಡ್‌ಗೆ ಪಾದಾರ್ಪಣೆ ಮಾಡುತ್ತಿರುವ ಸಿಹಿಸುದ್ದಿ ಸಿಕ್ಕಿತ್ತು. 'ಜವಾನ್' ನಿರ್ದೇಶಕ ಅಟ್ಲೀ ಹೊಸ ಚಿತ್ರದಲ್ಲಿ ವರುಣ್ ಧವನ್‌ಗೆ ಹೀರೋಯಿನ್ ಆಗಿ ಕೀರ್ತಿ ಆಯ್ಕೆಯಾಗಿದ್ದಾರೆ. ಈ ಹಿಂದೆಯೇ ವರುಣ್–ಕೀರ್ತಿ ಸುರೇಶ್ ಕಾಂಬಿನೇಷನ್‌ನ ಹೊಸ ಚಿತ್ರದ ಮುಹೂರ್ತ ಸಮಾರಂಭ ನೆರವೇರಿತ್ತು. ಸಂಕ್ರಾಂತಿ ಹಬ್ಬದಂದು ಹೊಸ ಸಿನಿಮಾಗೆ ಚಿತ್ರತಂಡ ಚಾಲನೆ ನೀಡಿತ್ತು. ಕೀರ್ತಿ ಸುರೇಶ್, ವರುಣ್, ಅಟ್ಲೀ, ವಾಮಿಕಾ ಗಬ್ಬಿ ಸೇರಿದಂತೆ ಅನೇಕರು ಭಾಗಿಯಾಗಿದ್ದರು. ಈಗ ಶೂಟಿಂಗ್ ಕೂಡ ಶುರುವಾಗಿದೆ. ತಮನ್ನಾ, ನಯನತಾರಾ ಅವರಂತೆಯೇ ಕೀರ್ತಿ ಸುರೇಶ್ ಕೂಡ ಬಾಲಿವುಡ್‌ನಲ್ಲಿ ಸಿನಿಮಾ ಮಾಡಬೇಕು ಎಂದು ಅಭಿಮಾನಿಗಳ ಆಸೆಯಾಗಿತ್ತು. ಈಗ ವರುಣ್ ಧವನ್ ಚಿತ್ರದ ಮೂಲಕ ನೆರವೇರಿದೆ. ಇನ್ನೂ ವರುಣ್–ಕೀರ್ತಿ ನಟನೆಯ ಈ ಸಿನಿಮಾ ತಮಿಳಿನ 'ತೆರಿ' ರಿಮೇಕ್ ಎಂದು ಹೇಳಲಾಗುತ್ತಿದೆ. ಈ ಸುದ್ದಿ ನಿಜಾನಾ ಕಾದು ನೋಡಬೇಕಿದೆ.




# ಸಚಿವನಿಗೆ ವಾರ್ನ್ ಮಾಡಿದ ನಟ ವಿಶಾಲ್

ತಮಿಳು ಚಿತ್ರನಟ ವಿಶಾಲ್ ಕಿಡಿಕಾರಿದ್ದಾರೆ. ತಮ್ಮ ಚಿತ್ರಗಳಿಗೆ ತೊಂದರೆ ನೀಡಲಾಗುತ್ತಿದೆ ಎಂದು ಬಹಿರಂಗವಾಗಿಯೇ ಅವರು ಹೇಳಿಕೆ ನೀಡಿದ್ದಾರೆ. ಹಲವಾರು ಚಿತ್ರಮಂದಿರಗಳಲ್ಲಿ ನನ್ನ ಚಿತ್ರಗಳು ರಿಲೀಸ್ ಆಗುತ್ತಿಲ್ಲ. ಅದಕ್ಕೆ ಕಾರಣ ಏನು ಎನ್ನುವುದು ನನಗೆ ಗೊತ್ತಿದೆ. ಹೀಗೆ ಕೆಣಕಿದರೆ ಸುಮ್ಮನೆ ಇರೋದಿಲ್ಲವೆಂದು ಮಾತನಾಡಿದ್ದಾರೆ.

ವಿಶಾಲ್ ವಾರ್ನ್ ಮಾಡಿದ್ದು ಬೇರೆ ಯಾರಿಗೂ ಅಲ್ಲ, ಸಚಿವ ಹಾಗೂ ನಟ ಉದಯ್ ನಿಧಿ ಸ್ಟಾಲಿನ್‌ಗೆ ಎಂದು ಹೇಳಲಾಗುತ್ತಿದೆ. ಈ ಇಬ್ಬರು ಮಧ್ಯ ಕೋಲ್ಡ್ ವಾರ್ ಯಾವತ್ತಿನಿಂದಲೂ ಇದೆ. ವಿಶಾಲ್ ಸಿನಿಮಾಗಳಿಗೆ ಅವರು ತಡೆಯೊಡ್ಡುತ್ತಾರೆ ಎನ್ನುವ ಆರೋಪವೂ ಈ ಹಿಂದೆ ಕೇಳಿ ಬಂದಿತ್ತು. ಈಗಲೂ ಅದನ್ನೇ ಮುಂದುವರೆಸಿದ್ದಾರೆ ಎನ್ನುವುದು ವಿಶಾಲ್ ಆರೋಪ. ಸದ್ಯ ವಿಶಾಲ್ ನಟನೆಯ ರತ್ನಂ ಸಿನಿಮಾ ರಿಲೀಸ್ ಆಗಿದೆ. ಜಿಲ್ಲಾ ಕೇಂದ್ರಗಳಲ್ಲೇ ವಿಶಾಲ್ ಚಿತ್ರಕ್ಕೆ ಥಿಯೇಟರ್ ಸಿಗುತ್ತಿಲ್ಲ ಎಂದು ಹೇಳಲಾಗುತ್ತಿದೆ. ಜೊತೆಗೆ ಸಿನಿಮಾ ರಂಗದಲ್ಲಿ ಅವರನ್ನು ಹತ್ತಿಕ್ಕುವ ಕೆಲಸವನ್ನೂ ಕೆಲವರು ಮಾಡುತ್ತಿದ್ದಾರಂತೆ.

### ನನ್ನ ಕೆಣಕಿದರೆ ನೆಟ್ಟಗೆ ಇರಲ್ಲ



# ನಟ ನಾಗ ಚೈತನ್ಯನ ರಿಜೆಕ್ಟ್ ಮಾಡಿದ ಸಾರಾ ಅಲಿ ಖಾನ್

ಬಾಲಿವುಡ್ ನಟಿ ಸಾರಾ ಅಲಿಖಾನ್, ದಕ್ಷಿಣದ ಖ್ಯಾತ ನಟ ಚಿತ್ರದಲ್ಲಿ ತಾವು ನಟಿಸುವುದಿಲ್ಲವೆಂದು ಹೇಳಿದ್ದಾರೆ. ನಾಗ ಚೈತನ್ಯ ನಟನೆಯ ಚಿತ್ರದಲ್ಲಿ ಸಾರಾ ನಟಿಸಬೇಕಾಗಿತ್ತು. ಹಾಗಾಗಿ ನಿರ್ದೇಶಕರು ಆಕೆಯನ್ನು ಸಂಪರ್ಕಿಸಿದ್ದಾರೆ. ಈ ಸಂದರ್ಭದಲ್ಲಿ ಯಾವುದೇ ಕಾರಣಕ್ಕೂ ನಾನು ಅವರ ಜೊತೆ ನಟಿಸಲಾರೆ ಎಂದಿದ್ದಾರೆ.

ಹಾಗೆ ಅನ್ನುವುದಕ್ಕೆ ಕಾರಣವಿದೆ. ಹಾಗಂತ ಸಾರಾ ಅವರು ನಾಗ ಚೈತನ್ಯ ಅವರನ್ನು ದ್ವೇಷಿಸುತ್ತಿಲ್ಲ. ನಾಗ ಚೈತನ್ಯ ನನಗೆ ಅಣ್ಣನಂತೆ ಕಾಣಿಸುತ್ತಾರೆ. ಅವರೊಂದಿಗೆ ನಾನು ಹೇಗೆ ನಟಿಸಲಿ ಇದರ ಹೊರತಾಗಿ ಯಾವುದೇ ಕಾರಣವಿಲ್ಲವೆಂದು ಅವರು ಧೈರ್ಯದಿಂದ ಹೇಳಿದ್ದಾರೆ ಎಂದು ವರದಿಯಾಗಿದೆ. ಸಾರಾ ಅಲಿ ಖಾನ್‌ಗೆ ಚಿತ್ರರಂಗದಲ್ಲಿ ಹೇಳಿಕೊಳ್ಳುವಂತಹ ಬ್ರೇಕ್ ಸಿಗದೇ ಇದ್ರೂ, ಸದಾ ಸುದ್ದಿಯಲ್ಲಿರುತ್ತಾರೆ. ಈ ಹಿಂದೆಯಷ್ಟೇ ದೇವಸ್ಥಾನದ ಬಳಿ ಬಡವರಿಗೆ ನಟಿ ಸಿಹಿ ಹಂಚಿದ್ದರು. ಸಾರಾ ನಡೆಗೆ ಅಭಿಮಾನಿಗಳು ಭೇಷ್ ಎಂದಿದ್ದರು. ಮುಂಬೈನ ಜುಹುದಲ್ಲಿರುವ ಶನಿ ದೇವರ ದೇವಸ್ಥಾನಕ್ಕೆ ಸಾರಾ ಭೇಟಿ ನೀಡಿದ್ದರು. ಈ ನಟಿಯ 'ಮರ್ಡರ್ ಮುಬಾರಕ್' ಮತ್ತು 'ಏ ವತನ್ ಮೇರೆ ವತನ್' ಸಿನಿಮಾಗಳು ರಿಲೀಸ್ ಆದ ಸಮಯವದು. ಚಿತ್ರಕ್ಕೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿತ್ತು. ಹೀಗಾಗಿ ನಟಿ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಿದರು. ಬಳಿಕ ಆವರಣದ ಹೊರಗೆ ಕುಳಿತಿದ್ದ ಬಡವರಿಗೆ ಸಿಹಿ ಪ್ಯಾಕೆಟ್‌ಗಳನ್ನು ಹಂಚಿದ್ದರು. ಈ ಸಂದರ್ಭದಲ್ಲಿ ತಮ್ಮನ್ನು ಸುತ್ತುವರಿದ ಪಾಪರಾಜಿಗಳಿಗೆ ವೀಡಿಯೊ ಚಿತ್ರೀಕರಿಸಿದಂತೆ ನಟಿ ಮನವಿ ಮಾಡಿಕೊಂಡಿದ್ದೂ ಗಮನ ಸೆಳೆದಿತ್ತು.





# ಮದುವೆ ಗೌನ್ ಕತ್ತರಿಸಿದ ನಟಿ ಸಮಂತಾ

ನಟಿ ಸಮಂತ್ ರುತ್ ಪ್ರಭು ತಾವು ಮದುವೆಯಲ್ಲಿ ಧರಿಸಿದ್ದ ಗೌನ್ ಅನ್ನು ಕತ್ತರಿಸಿ, ಹೊಸ ವಿನ್ಯಾಸದಲ್ಲಿ ಕಾಸ್ಟ್ಯೂಮ್ ತಯಾರಿಸಿಕೊಂಡಿದ್ದಾರೆ.

ಆ ಕಾಸ್ಟ್ಯೂಮ್ ಅನ್ನೇ ಧರಿಸಿಕೊಂಡು ಅವರು ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗಿಯಾಗಿದ್ದಾರೆ. ಆ ಹೊಸ ಕಾಸ್ಟ್ಯೂಮ್ ಧರಿಸಿರುವ ಫೋಟೋವನ್ನು ಸೋಷಿಯಲ್ ಮೀಡಿ ಯಾದಲ್ಲಿ ಹಂಚಿಕೊಂಡಿದ್ದಾರೆ.

ಸಮಂತಾ ಅವರು ಮದುವೆ ಕಾಸ್ಟ್ಯೂಮ್ ಅನ್ನು ತಯಾರಿಸಿದವರು ಡಿಸೈನರ್ ಕ್ರೇಶಾ ಬಜಾಜ್ ಅವರೇ ಈಗ ಆ ಗೌನ್ ಅನ್ನು ಕತ್ತರಿಸಿ ಸ್ಟ್ರಾಪ್ ಲೆಸ್ ಡ್ರೆಸ್ ಆಗಿ ಪರಿವರ್ತನೆ ಮಾಡಿದ್ದಾರೆ. ಮಾಜಿ ಪತಿ, ನಟ ನಾಗ ಚೈತನ್ಯ ಅವರು ಬೇರೊಬ್ಬ ಹುಡುಗಿಯ ಜೊತೆ ಕಾಣಿಸಿಕೊಂಡ ಬೆನ್ನಲ್ಲೇ ಈ ಕಾರ್ಯ ನಡೆದಿದ್ದು, ಬೇರೆ ಬೇರೆ ಅರ್ಥವನ್ನು ಕಲ್ಪಿಸುವಂತೆ ಮಾಡಿದೆ. ಸಮಂತಾ ಹೊಸದಾಗಿ ವಿನ್ಯಾಸಗೊಂಡಿರುವ ಗೌನ್ ಅನ್ನು ಧರಿಸಿಕೊಂಡು, 'ಇದು ನನ್ನ ಪ್ರೀತಿ ಗೌನ್' ಎಂದು ಕ್ಯಾಪ್ಷನ್ ಕೊಟ್ಟಿದ್ದಾರೆ. ನನ್ನ ಹಳೆ ಬಟ್ಟೆಗಳನ್ನು ಮರುಬಳಕೆ ಮಾಡೋದು ಮೊದಲಿನಿಂದಲೂ ನನಗಿರೋ ಅಭ್ಯಾಸ' ಎಂದು ಬರೆದು ಸಮಾಧಾನ ಪಟ್ಟುಕೊಂಡಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966